ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 113 ಸಂಚಿಕೆ- 113 | PAGE-8 ಪುಟ-8 | ಬುಧುವಾರ 11.06.2025 | RS.2/- ಬೆಲೆ 2/-

# ರಾಜ್ಯದಲ್ಲಿ ಜಾತಿ ಗಣತಿ ಮರು ಸಮೀಕ್ಷೆ: ಸಿಎಂ ಘೋಷಣೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.10: ಈ ಹಿಂದೆ ನಡೆಸಲಾಗಿದ್ದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ(ಜಾತಿ ಗಣತಿ)ವರದಿಗೆ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಮತ್ತೊಮ್ಮೆ ಜಾತಿ ಗಣತಿ ಸಮೀಕ್ಷೆ ನಡೆಸಲು ನಿರ್ಧರಿಸಿದೆ.

ಪ್ರಸ್ತುತ ಜಾತಿ ಗಣತಿ ವರದಿ 10 ವರ್ಷ ಹಳೆಯದಾಗಿರುವ ಕಾರಣ ನಿರ್ದಿಷ್ಟ ಕಾಲಮಿತಿಯಲ್ಲಿ ಮರು ಸಮೀಕ್ಷೆ ನಡೆಸಲು ಸರ್ಕಾರ ನಿರ್ಧಾರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ದೆಹಲಿಯಲ್ಲಿ ಘೋಷಿಸಿದ್ದಾರೆ.

ಹೈಕಮಾಂಡ್ ನಾಯಕರ ಬುಲಾವ್ ಮೇರೆಗೆ ದೆಹಲಿಗೆ ತೆರಳಿರುವ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಕಾಂಗ್ರೆಸ್ ವರಿಷ್ಠರ ಜೊತೆ ಮಹತ್ವದ ಮಾತುಕತೆ ನಡೆಸಿ ನಡೆಸಿದಿರು. ಈ ವೇಳೆ ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆ ವೇಲೆ ಸಂಭವಿಸಿದೆ ಕಾಲ್ತುಳಿತ ಪ್ರಕರಣದ ಬಗ್ಗೆ ಸುದೀರ್ಘವಾಗಿ ಚರ್ಚಿಸಿದ್ದಾರೆ. ಅಲ್ಲದೆ ಜಾತಿ ಗಣತಿ ಬಗ್ಗೆಯೂ ಚರ್ಚಿಸಿದ್ದಾರೆ.

ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಇಂದಿನ ಸಭೆಯಲ್ಲಿ ಜಾತಿ ಗಣತಿ ಬಗ್ಗೆ ಚರ್ಚೆ ಮಾಡಿದ್ದೇವೆ. ನಿರ್ದಿಷ್ಟ ಕಾಲಮಿತಿಯಲ್ಲಿ ಮರು ಸರ್ವೇ ನಡೆಸಲು ಸಭೆಯಲ್ಲಿ ನಿರ್ಧರಿಸಲಾಗಿದೆ. ಈ ಬಗ್ಗೆ ಜೂನ್ 12 ರಂದು ಸಚಿವ ಸಂಪುಟ ಸಭೆಯಲ್ಲಿ ಕಾಲಮಿತಿ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಸಭೆಯಲ್ಲಿ ರಾಜ್ಯದ ಬೆಳವಣಿಗೆಗಳ ಬಗ್ಗೆ ರಾಹುಲ್ ಗಾಂಧಿ ಚರ್ಚೆ ಮಾಡಿದರು. ಮುಖ್ಯವಾಗಿ ಜಾತಿ ಗಣತಿ ಬಗ್ಗೆ ಸಭೆಯಲ್ಲಿ ಚರ್ಚೆ ಮಾಡಿದರು. ಕೆಲವರು ವರದಿಗೆ ಅಪಸ್ವರ ಎತ್ತಿರುವ ಬಗ್ಗೆ ಚರ್ಚೆ ಆಯಿತು. ಜಾತಿಗಣತಿ ಸಮೀಕ್ಷೆ ಮಾಡಿ 9 ರಿಂದ 10 ವರ್ಷ ಆಗಿದೆ. ಹಾಗಾಗಿ ಮತ್ತೊಮ್ಮೆ ಸಮೀಕ್ಷೆ ಮಾಡಲು ಹೇಳಿದ್ದಾರೆ. ಮತ್ತೊಮ್ಮೆ ಜಾತಿ ಗಣತಿ ಸಮೀಕ್ಷೆಗೆ ನಾವು ಒಪ್ಪಿಗೆ ನೀಡಿದ್ದೇವೆ. 90 ದಿನದೊಳಗೆ ಜಾತಿಗಣತಿ ಸಮೀಕ್ಷೆ ಮುಗಿಯಲಿದೆ ಎಂದು ಸಿಎಂ ಸ್ಪಷ್ಟಪಡಿಸಿದರು.

ಕಾಲ್ತುಳಿತ ದುರಂತ ಪ್ರಕರಣದ ಬಗ್ಗೆಯೂ ಸಭೆಯಲ್ಲಿ ಚರ್ಚೆ ಆಗಿದ್ದು, ಕೈಗೊಂಡಿರುವ ಕ್ರಮದ ಬಗ್ಗೆ ವಿವರಣೆ ನೀಡಿದ್ದೇವೆ. ಸಿಐಡಿ, ನ್ಯಾ.ಕುನ್ಹಾ ನೇತೃತ್ವದ ತನಿಖೆ ಬಗ್ಗೆ ಮಾಹಿತಿ ನೀಡಿದ್ದೇವೆ. ಪೊಲೀಸ್ ಅಧಿಕಾರಿಗಳ ಅಮಾನತು, ಇಂಟಲಿಜೆನ್ಸ್ ಮುಖ್ಯಸ್ಥರ ವರ್ಗಾವಣೆ ಬಗ್ಗೆ ವರಿಷ್ಠರಿಗೆ ಮಾಹಿತಿ ನೀಡಲಾಗಿದೆ ಎಂದರು.

# ಮುಡಾ ಹಗರಣ : ಇಡಿಯಿಂದ 100 ಕೋಟಿ ಮೌಲ್ಯದ 92 ಆಸ್ತಿ ಮುಟ್ಟುಗೋಲು

ಮಲ್ಲಮ್ಮನುಡಿ ವಾರ್ತೆ ಬೆಂಗಳೂರು: ಜೂ.10:ಜಾರಿ ನಿರ್ದೇಶನಾಲಯ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ 100 ಕೋಟಿ ರೂ. ಮೌಲ್ಯದ 92 ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿದೆ.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ನಡೆಸಿ ಮಾರುಕಟ್ಟೆ ಮೌಲ್ಯದ ಅಂದಾಜು 100 ಕೋಟಿ ರೂ. ಮೌಲ್ಯದ ಆಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಲಾಗಿದೆ ಎಂದು ಇಡಿ ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಮುಟ್ಟುಗೋಲು ಹಾಕಿಕೊಂಡ ಆಸ್ತಿಗಳನ್ನು ವಸತಿ ಸಹಕಾರಿ ಸಂಘ ಮತ್ತು ಮುಡಾ ಅಧಿಕಾರಿಗಳು ಸೇರಿದಂತೆ ಪ್ರಭಾವಿ ವ್ಯಕ್ತಿಗಳ ಹೆಸರಿನಲ್ಲಿ ನೋಂದಾಯಿಸಲಾಗಿತ್ತು.

ವಿವಿಧ ಕಾನೂನುಗಳು ಮತ್ತು ಸರ್ಕಾರಿ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಮುಡಾ ಸೈಟ್‌ಗಳ ಹಂಚಿಕೆ ಮಾಡಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ.

ಮಾಜಿ ಆಯುಕ್ತ ಜಿ.ಟಿ. ದಿನೇಶ್ ಕುಮಾರ್ ಮತ್ತು ಇತರರು ಸೇರಿ–ಕೊಂಡು ಅರ್ನಹ ವ್ಯಕ್ತಿಗಳಿಗೆ ನಿವೇಶನ ಹಂಚಿಕೆ ಮಾಡಿದ್ದಾರೆ. ಅಕ್ರಮವಾಗಿ ಹಂಚಿಕೆ ಮಾಡಲು ನಗದು, ಚರ/ಸ್ಥಿರ ಆಸ್ತಿಗಳ

(2ನೇ ಪುಟ ನೋಡಿ)

# ಸಂಕಷ್ಟದಲ್ಲಿ ಪದ್ಮಶ್ರೀ ಪುರಸ್ಕೃತ ಕಲಾವಿದ ಷಾ ರಶೀದ್ ಅಹಮ್ಮದ್ ಖಾದ್ರಿ





ಮಲ್ಲಮ್ಮನುಡಿ ವಾರ್ತೆ ಬೀದರ. ಜೂ. 10 : ಪದ್ಮಶ್ರೀ ಪುರಸ್ಕೃತರಾದ ಹೆಸರಾಂತ ಬಿದ್ರಿ ಕಲಾವಿದ ಷಾ ರಶೀದ್ ಅಹಮ್ಮದ್ ಖಾದ್ರಿ ಅವರು ಕಿಡ್ನಿ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದಾರೆ. ಆಸ್ಪತ್ರೆಯ ವೆಚ್ಚ ಭರಿಸಲಾಗದೆ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಎರಡು ವರ್ಷಗಳ ಹಿಂದೆ ಕಿಡ್ನಿಯಲ್ಲಿ ಸಮಸ್ಯೆ ಕಾಣಿಸಿಕೊಂಡಿದ್ದರಿಂದ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ವಾರಕ್ಕೆ ಮೂರು ದಿನ ಡಯಾಲಿಸಿಸ್ ಮಾಡಿಕೊಳ್ಳುತ್ತಿದ್ದರು. ಕೆಲ ದಿನಗಳ ಹಿಂದೆ ಪುನಃ ಕಿಡ್ನಿಯಲ್ಲಿ ಸಮಸ್ಯೆ ಕಾಣಿಸಿಕೊಂಡಿದ್ದು, ಆರೋಗ್ಯ ಬಹಳ ಕ್ಷೀಣಿಸಿದ್ದರಿಂದ ನಗರದ ಆಸ್ಪತ್ರೆಗೆ ದಾಖಲಾಗಿದ್ದರು. ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸಿದ ಕಾರಣ ಈಚೆಗೆ ಹೈದರಾಬಾದ್‌ನ ಕೇರ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಷಾ ರಶೀದ್ ಅಹಮ್ಮದ್ ಅವರನ್ನು 'ಬಿದ್ರಿ ಮಾಸ್ಟರ್' ಎಂದೇ ಗುರುತಿಸಲಾಗುತ್ತದೆ. ಈ ಕಲೆಯ ಮಹತ್ವವನ್ನು ಸಾಗರದಾಚೆಗೂ ಪರಿಚಯಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಇದಕ್ಕಾಗಿಯೇ ಇವರಿಗೆ ಕೇಂದ್ರ ಸರ್ಕಾರವು 2023ನೇ

(2ನೇ ಪುಟ ನೋಡಿ)

# ಭಾರತದ ಅಮೃತ ಕಾಲ ಸೇವೆ, ಸುಶಾಸನ ಮತ್ತು ಬಡವರ ಕಲ್ಯಾಣಕ್ಕೆ

## 11 ವರ್ಷ ಕಾರ್ಯಕ್ರಮಗಳ ಆಯೋಜನೆ: ಅಮರನಾಥ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 10 : ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರದ ಬಿಜೆಪಿ ಸರ್ಕಾರವು 11 ವರ್ಷಗಳು ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ, ಸರ್ಕಾರದ ಸಾಧನೆಗಳನ್ನು ಜನತೆಗೆ ತಲುಪಿಸುವ ಉದ್ದೇಶದಿಂದ ಜೂನ್ 9 ರಿಂದ ಜೂನ್ 21 ರ ವರೆಗೆ ದೇಶವ್ಯಾಪಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಅಭಿಯಾನವು ವಿಕಸಿತ ಭಾರತದ ಅಮೃತ ಕಾಲ ಮತ್ತು ಸೇವೆ, ಸುಶಾಸನ ಹಾಗೂ ಬಡವರ ಕಲ್ಯಾಣದ 11 ವರ್ಷಗಳ ವಿಚಾರಧಾರೆಯ ಆಧಾರಿತವಾಗಿರುತ್ತದೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯರಾದ ಅಮರನಾಥ ಪಾಟೀಲ ತಿಳಿಸಿದರು.

ಮಂಗಳವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕಾರ್ಯಕ್ರಮಗಳ ಪಟ್ಟಿ ವಿವರಿಸಿದ ಅವರು, ಜುನ್ 9ರಿಂದ ಜುಲೈ 9ರ ವರೆಗೆ ಬದಲಾಗುತ್ತಿರುವ ಭಾರತ ನನ್ನ ಅನುಭವ ಎಂಬ ವಿಷಯ ಕುರಿತು ಡಿಜಿಟಲ್ ಸ್ಪರ್ಧೆ ಆಯೋಜನೆ, ಒಥಿ ಉಆತ ಪೋರ್ಟಲ್‌ನಲ್ಲಿ ಶಾರ್ಟ್ ವೀಡಿಯೊ, ಬ್ಲಾಗ್, ಕ್ವಿಜ್ ಸ್ಪರ್ಧೆಯಲ್ಲಿ ಹೆಚ್ಚಿನ ಜನರನ್ನು ಭಾಗವಹಿಸಲು ಪ್ರೇರೇಪಿಸುವುದು, ಸೋಶಿಯಲ್ ಮೀಡಿಯಾದ ಪ್ರಭಾವಿಗಳು ಭಾಗವಹಿಸಿ ಈ ಸ್ಪರ್ಧೆಯ ಪ್ರಚಾರ ಮಾಡುವುದು. ಕಾರ್ಯಕರ್ತರು ತಮ್ಮ ಪ್ರದೇಶದ ಅಭಿವೃದ್ಧಿ ಕೆಲಸಗಳನ್ನು ದಾಖಲಿಸಿ ವೀಡಿಯೊ ರೂಪದಲ್ಲಿ ತಮ್ಮ ಸೋಶಿಯಲ್ ಮೀಡಿಯಾ ಖಾತೆಗಳಲ್ಲಿ ಹಂಚುವುದು, ಪಕ್ಷದ ರಾಷ್ಟ್ರಾಧ್ಯಕ್ಷರು, ಕೇಂದ್ರ ಸಚಿವರು ಮಾಧ್ಯಮ ಸಂವಾದದಲ್ಲಿ ಪಾಲ್ಗೊಳ್ಳುವುದು, ರಾಜ್ಯ ರಾಜಧಾನಿಯಲ್ಲಿ ಕೇಂದ್ರ ಸಚಿವರಿಂದ ಹಾಗೂ ಪ್ರಮುಖ ಮಹಾನಗರಗಳಲ್ಲಿ ಕೇಂದ್ರದ ವಕ್ತಾರರಿಂದ ಪತ್ರಿಕಾಗೋಷ್ಠಿಗಳ ಏರ್ಪಾಡು ಮಾಡುವುದು, 11ರಂದು ಪತ್ರಿಕಾ ಸಂವಾದ ಸಂಸದರು ಅಥವಾ ರಾಜ್ಯದ ನಿಯೋಜಿತ ವಕ್ತಾರರಿಂದ

ಕೇಂದ್ರ ಸರ್ಕಾರದ 11 ವರ್ಷಗಳ ಸಾಧನೆಗಳ ಆಧಾರಿತ ಪ್ರದರ್ಶನಿ,

(2ನೇ ಪುಟ ನೋಡಿ)

# ನ. 1ರಿಂದ ಕಬ್ಬು ಕ್ರಷಿಂಗ್ ಆರಂಭ:ಸಚಿವ ಶಿವಾನಂದ ಪಾಟೀಲ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಜೂ. 10:ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ ಜಿಲ್ಲೆಗಳನ್ನು ಹೊರತುಪಡಿಸಿ, ರಾಜ್ಯದ ಇತರ ಜಿಲ್ಲೆಗಳಲ್ಲಿ ನವಂಬರ್ 1ರಿಂದ ಕಬ್ಬು ನುರಿಸುವಿಕೆ ಆರಂಭಿಸಲು ಮಂಗಳವಾರ ಕಬ್ಬು, ಸಕ್ಕರೆ ಅಭಿವೃದ್ಧಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅಧ್ಯಕ್ಷತೆಯಲ್ಲಿ ನಡೆದ ಕಬ್ಬು ನಿಯಂತ್ರಣ ಮಂಡಳಿ ಸಭೆಯಲ್ಲಿ ನಿರ್ಧರಿಸಲಾಗಿದೆ.

ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿ ಮಾತ್ರ ಜೂನ್ 22ರಿಂದ ಕಬ್ಬು ನುರಿಸುವಿಕೆ ಆರಂಭಿಸಲು ಈಗಾಗಲೇ ಆದೇಶ ಹೊರಡಿಸಲಾಗಿದೆ. ಈ ಬಾರಿ ಮಳೆ ಉತ್ತಮವಾಗಿದ್ದು, ಕಬ್ಬು ಇಳುವರಿ ಕೂಡಾ ಚೆನ್ನಾಗಿದೆ. ಹೀಗಾಗಿ ಮುಂಚಿತವಾಗಿಯೇ ಕಬ್ಬು ನುರಿಸುವಿಕೆ ಆರಂಭಿಸುವ ಅಭಿಪ್ರಾಯಕ್ಕೆ ರೈತ ಮುಖಂಡರನ್ನೊಳಗೊಂಡ ಕಬ್ಬು ನಿಯಂತ್ರಣ ಮಂಡಳಿ ಸದಸ್ಯರು ಸಹಮತ ವ್ಯಕ್ತಪಡಿಸಿದರು.

ತೂಕದಲ್ಲಿ ವಂಚನೆ ತಡೆ, ಕಬ್ಬು ಪೂರೈಕೆ ಮಾಡಿದ ರೈತರಿಗೆ ನಿಗದಿತ

(2ನೇ ಪುಟ ನೋಡಿ)

# ಶೀಲ ಶಂಕಿಸಿ ಪತ್ನಿಯನ್ನು ಕೊಂದ ಪತಿ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ,ಜೂ.10: ಪತ್ನಿಯ ಶೀಲದ ಬಗ್ಗೆ ಶಂಕೆ ಇಟ್ಟುಕೊಂಡಿದ್ದ ಪತಿಯೊಬ್ಬ ಆಕೆಯನ್ನು ರಸ್ತೆಮಧ್ಯೆ ಚಾಕುವಿನಿಂದ ಬರ್ಬರವಾಗಿ ಹತ್ಯೆಮಾಡಿ ಪರಾರಿಯಾಗಿರುವ ಘಟನೆ ನಗರದ ಶಹಾಬಜಾರ್ ಬಡಾವಣೆಯಲ್ಲಿ ನಡೆದಿದೆ.ಕಲಬುರಗಿ ತಾಲೂಕಿನ ಕಲ್ಲಹಂಗರಗಾ ಗ್ರಾಮದ ರೂಪಾ (32) ಕೊಲೆಯಾಗಿರುವ ಗೃಹಿಣಿ. 10 ವರ್ಷಗಳ ಹಿಂದೆ ವೆಂಕಟೇಶ್–ರೂಪಾ ಮದುವೆಯಾಗಿತ್ತು. ಮೂರು ತಿಂಗಳ ಹಿಂದೆ ಪತ್ನಿಯ ಶೀಲ ಶಂಕಿಸಿ ಆಕೆಯೊಂದಿಗೆ ವೆಂಕಟೇಶ್ ಜಗಳವಾಡಿದ್ದರಿಂದ ಬೇಸತ್ತ ಆಕೆ ಗಂಡನನ್ನು ಬಿಟ್ಟು ತನ್ನ ಮಕ್ಕಳೊಂದಿಗೆ ಶಹಾಬಜಾರ್ ಬಡಾವಣೆಯ ಬಾಡಿಗೆ ಮನೆಯಲ್ಲಿ ವಾಸವಿದ್ದಳು. ಜೀವನ ನಿರ್ವಹಣೆಗಾಗಿ ಹೋಟೆಲ್‌ನಲ್ಲಿ ಸಮೋಸ ಮಾಡುತ್ತಿದ್ದ ರೂಪಾ ಇಂದು ಬೆಳಗ್ಗೆ ಸುಮಾರು 8.30ರ ಆಸುಪಾಸಿನಲ್ಲಿ ನಡೆದು–ಕೊಂಡು ಹೋಟೆಲ್‌ಗೆ ತೆರಳುತ್ತಿದ್ದಾಗ ಅಲ್ಲಿಗೆ ಬಂದ ಆಕೆಯ ಪತಿ ಚಾಕುವಿನಿಂದ ಇರಿದು ಪರಾರಿಯಾಗಿದ್ದಾನೆ.ಈ ಮಧ್ಯೆ, ಪತ್ನಿಗೆ ಚಕು ಇರಿದು ವೆಂಕಟೇಶ್ ಬೈಕ್ ಮೇಲೆ ಪರಾರಿಯಾಗುತ್ತಿರುವ ದೃಶ್ಯ ಸಮೀಪದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಈ ದೃಶ್ಯಾವಳಿಯ ಆಧಾರದ ಮೇಲೆ ವೆಂಕಟೇಶ್ ವಿರುದ್ಧ ಚೌಕ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿಗಾಗಿ ಪೊಲೀಸರು ಜಾಲ ಬೀಸಿದ್ದಾರೆ. ಇನ್ನು, ಘಟನಾ ಸ್ಥಳಕ್ಕೆ ಪೊಲೀಸ್ ಕಮಿಷನರ್ ಡಾ.ಶರಣಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಹೂವು, ಔಷಧಿ ಸಸ್ಯಗಳಿಗೆ ಆದ್ಯತೆ ನೀಡಿ : ಗೆಹ್ಲೋಟ್



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜೂ.11–ದೇಶದ ಆರ್ಥಿಕತೆಯಲ್ಲಿ ತೋಟಗಾರಿಕೆಯಿಂದ ಹೆಚ್ಚಿನ ಜಿಡಿಪಿ ಬರುತ್ತಿದ್ದು, ಹೂವು ಮತ್ತು ಔಷಧಿ ಸಸ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಹೇಳಿದರು.

ತೋಟಗಾರಿಕೆ ವಿಶ್ವವಿದ್ಯಾಲಯದ ಉದ್ಯಾನಗಿರಿಯ ಮುಖ್ಯಪ್ರೇಕ್ಷಾಗೃಹದಲ್ಲಿ ಮಂಗಳವಾರ ಜರುಗಿದ 14ನೇ ಘಟಿಕೋತ್ಸವದಲ್ಲಿ ಪದವಿ ವಿದ್ಯಾರ್ಥಿಗಳಿಗೆ ಬಂಗಾರದ ಪದಕ ಪ್ರದಾನ ಮಾಡಿ ಮಾತನಾಡಿದ ಅವರು, ಭಾರತ ಇಂದು ಸೂಕ್ಷ್ಮ ಹಾಗೂ ಸುಂದರವಾದ ಹೂಗಳ ಉತ್ಪಾದನೆಗೆ ಜಾಗತಿಕ ಮನ್ನಣೆ ಪಡೆಯುತ್ತಿದೆ. ಕಾರಣ ರೈತರು ಇಂತಹ ಹೂಗಳ ಉತ್ಪಾದನೆ ಮಾಡಿ ಆರ್ಥಿಕವಾಗಿ ಪ್ರಗತಿಹೊಂದಬೇಕು. ಸೌಂದರ್ಯವರ್ಧಕ ಹಾಗೂ ಸುಹಾಸಿತ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ರೈತರು ಕೃಷಿ ಜೊತೆಗೆ ತೋಟಗಾರಿಕಾ ಬೆಳೆಗಳಲ್ಲಿ ಇವುಗಳಿಗೂ ಆದ್ಯತೆ ನೀಡಬೇಕು ಎಂದರು.

ಗ್ರಾಮೀಣ ಭಾಗದ ರೈತರಿಗೆ ತಂತ್ರಜ್ಞಾನ ಮಾಹಿತಿ ಇರುವದಿಲ್ಲ. ಕಾರಣ ವಿಜ್ಞಾನಿಗಳು ರೈತರಿಗೆ ಅಂತಹ ತಂತ್ರಜ್ಞಾನದ ಬಗ್ಗೆ ಮಾಹಿತಿ ನೀಡಿ ಅವರ ಉತ್ಪಾದನೆ ಹೆಚ್ಚಿಸುವ ಕಾರ್ಯವಾಗಬೇಕು. ಇಂದು ಘಟಿಕೋತ್ಸವದಲ್ಲಿ ಡಾಕ್ಟರೇಟ್ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಮಹಿಳೆಯರೇ ಹೆಚ್ಚಿನ ಬಂಗಾರ ಪದಕಗಳನ್ನು ಪಡೆದುಕೊಂಡಿರುವುದು ಸಂತಸದ ವಿಷಯವಾಗಿದೆ. ಅಲ್ಲದೇ ಸರಕಾರ ಮಹಿಳೆಯರಿಗೆ ನೀಡಿದ ಮೀಸಲಾತಿಯನ್ನು ಸದುಪಯೋಗವಾದ ಕ್ಷಣ ಇದಾಗಿದೆ ಎಂದು ಅವರು ಹೇಳಿದರು.

ಘಟಿಕೋತ್ಸವದ ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಹೈದರಾಬಾದನ ಅರೆ–ಶುಷ್ಕ

(2ನೇ ಪುಟ ನೋಡಿ)

# ಸಮಾಜದ ಅಭ್ಯುದಯಕ್ಕೆ ಮಠ-ಮಾನ್ಯಗಳ ಕೊಡುಗೆ ಅಪಾರ:ಉಜ್ಜೈನಿ ಶ್ರೀಗಳು




ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜೂ.11–ಸನಾನತ ಸಂಸ್ಕೃತಿ, ಪರಂಪರೆ, ಆಚಾರ–ವಿಚಾರಗಳನ್ನು ಯಾವುದೇ ಜಾತಿ, ಮತ, ಪಂಥಗಳ ಬೇಧವಿಲ್ಲದೇ ನಾಡಿನ ಸಮಸ್ತ ಜನರಿಗೆ ತಿಳಿಯಪಡಿಸಿ ಅವರ ಅಭ್ಯುದಯಕ್ಕೆ ಶ್ರಮಿಸಿದ ಕೀರ್ತಿ ಮಠ–ಮಾನ್ಯಗಳಿಗೆ ಸಲ್ಲುತ್ತದೆ ಎಂದು ಉಜ್ಜೈನಿ ಪೀಠದ ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಸಮೀಪದ ಬಿಲ್‌ಕೇರೂರ ಗ್ರಾಮದಲ್ಲಿ ಮಂಗಳವಾರ ನಡೆದ ಬಿಲ್ವಾಶ್ರಮ ಹಿರೇಮಠದ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಸಸ್ಯಗಳಿಗೆ ಆದ್ಯತೆ ನೀಡಿ : ಗೆಹ್ಲೋಟ್

ಉಷ್ಣವಲಯದ ಅಂತರರಾಷ್ಟ್ರೀಯ ಬೆಳೆಗಳ ಸಂಶೋಧನ ಸಂಸ್ಥೆಯ ಮಹಾ ನಿರ್ದೇಶಕ ಡಾ.ಹಿಮಾಂಶು ಪಾಠಕ್ ಮಾತನಾಡಿ, ತೋಟಗಾರಿಕೆ ಆರ್ಥಿಕ ಅಭಿವೃದ್ಧಿಯ ಇಂಜಿನ್ ಆಗಿದ್ದು, ಬೆಳೆ ವೈವಿಧ್ಯತೆಯನ್ನು ಸಕ್ರಿಯಗೊಳಿಸಿ ಕೃಷಿ–ಕೈಗಾರಿಕೆಗಳನ್ನು ಬೆಂಬಲಿಸಿ ಗ್ರಾಮೀಣ ಉದ್ಯಮಿಗಳನ್ನು ಸಬಲೀಕರಣಗೊಳಿಸುತ್ತದೆ. ಸುಸ್ಥಿರ ಕೃಷಿ ಪಾತ್ರದಲ್ಲಿ ತೋಟಗಾರಿಕೆ ಜಾಗತಿಕವಾಗಿ ಪ್ರಾಮುಖ್ಯತೆ ಪಡೆಯುತ್ತಿದ್ದು, ಭಾರತ ಹಣ್ಣು ಮತ್ತು ತರಕಾರಿಗಳ 2ನೇ ಅತಿದೊಡ್ಡ ಉತ್ಪಾದಕ ರಾಷ್ಟ್ರವಾಗಿದೆ. ಕೃಷಿ ರಫ್ತಿನಲ್ಲಿ ಏಳನೇ ಸ್ಥಾನ ಪಡೆದಿದೆ. ತೋಟಗಾರಿಕೆಯಲ್ಲಿ ಹಸಿರು ಮನೆ ಪದ್ಧತಿಯು ವೇಗವಾಗಿ ಬೆಳೆಯುತ್ತಿದೆ. ಇದರ ಮಾರುಕಟ್ಟೆ ಗಾತ್ರವು 2024ರಲ್ಲಿ 33.4 ಬಿಲಿಯನ್ ಡಾಲರ್‌ದಿಂದ 2033ರ ವೇಳೆಗೆ 69.7 ಬಿಲಿಯನ್ ಡಾಲರ್‌ಗೆ ಹೆಚ್ಚಾಗುವ ನಿರೀಕ್ಷೆಯಿದೆ ಎಂದರು.

ಭಾರತದ ತೋಟಗಾರಿಕೆ ಆಂದೋಲನದಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು, ರಾಷ್ಟ್ರೀಯ ತೋಟಗಾರಿಕೆ ಮಿಷನ್ ನಂತಹ ಕೇಂದ್ರಿಕೃತ ಉಪಕ್ರಮಗಳ ಮೂಲಕ ರಾಜ್ಯವು ವೈವಿಧ್ಯಮಯ ಮತ್ತು ಸಂಮೃದ್ಧಿ ತೋಟಗಾರಿಕೆ ವಲಯವನ್ನು ಬೆಳೆಸಿದೆ. ಅಡಿಕೆ, ಕಾಫಿ, ತೆಂಗಿನಕಾಯಿ, ಅರಿಶಿಣ, ಏಲಕ್ಕಿ, ಶುಂಠಿ ಮತ್ತು ಕಾಳು ಮೆಣಸಿನಂತಹ ಹೆಚ್ಚಿನ ಮೌಲ್ಯದ ತೋಟಗಾರಿಕೆ ಬೆಳೆಗಳನ್ನು ಉತ್ಪಾದಿಸುತ್ತದೆ. ಮಾರ್ಚ 2025ರ ಹೊತ್ತಿಗೆ ಕರ್ನಾಟಕ ತೆ–ೂಟಗಾರಿಕಾ ಪ್ರದೇಶವು 2.63 ಮಿಲಿಯನ್ ಹೆಕ್ಟೇರ್‌ಗಳನ್ನು ವ್ಯಾಪಿಸಿದೆ. ಧಾರವಾಡ, ಬೆಳಗಾವಿ, ಕೋಲಾರ, ವಿಜಯಪುರ ಮತ್ತು ಚಿಕ್ಕಮಗಳೂರು ಜಿಲ್ಲೆಗಳು ಮಾವು, ದ್ರಾಕ್ಷಿ, ಮಸಾಲೆ ಪದಾರ್ಥ ಮತ್ತು ತರಕಾರಿಗಳಿಗೆ ಹೆಸರುವಾಸಿಯಾಗಿದೆ ಎಂದು ಅವರು ಹೇಳಿದರು.

2008ರಲ್ಲಿ ಸ್ಥಾಪನೆಯಾದ ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ತೋಟಗಾರಿಕೆ ಶಿಕ್ಷಣ, ಸಂಶೋಧನೆ ಮತ್ತು ವಿಸ್ತರಣೆಯಲ್ಲಿ ರಾಷ್ಟ್ರೀಯ ನಾಯಕನಾಗಿ ಹೊರಹೊಮ್ಮಿದೆ. ಕೇವಲ 16 ವರ್ಷಗಳಲ್ಲಿ ವಿಶ್ವವಿದ್ಯಾಲಯವು ಪ್ರಭಾವಶಾಲಿ ಶೈಕ್ಷಣಿಕ ಮತ್ತು ಸಂಶೋಧನಾ ಬಂಡವಾಳವನ್ನು ವಿಸ್ತರಿಸಿದೆ. ಪದವಿ ಪಡೆದ ವಿದ್ಯಾರ್ಥಿಗಳು ಭವಿಷ್ಯ ಭಾರತದ ಹಸಿರುಗೊಳಿಸುವ ಜ್ಯೋತಿಧಾರಕರಾಗಿದ್ದಾರೆ. ಜಗತ್ತಿಗೆ ನಿಮ್ಮ ಶಕ್ತಿ, ನಿಮ್ಮ ಆಲೋಚನೆಗಳು ಮತ್ತು ನಿಮ್ಮ ಸಹಾನುಭೂತಿ ಅವಶ್ಯವಾಗಿವೆ. ನಿಮ್ಮ ಜ್ಞಾನವನ್ನು ವೈಯಕ್ತಿಕ ಯಶಸ್ಸಿಗೆ ಮಾತ್ರವಲ್ಲದೇ ರೈತರನ್ನು ಉನ್ನತೀಕರಿಸಲು, ಆಹಾರ ವ್ಯವಸ್ಥೆಗಳನ್ನು ಬಲಪಡಿಸಲು ಮತ್ತು ಪರಿಸರವನ್ನು ಪೋಷಿಸಲು ಮತ್ತು ಕಾಪಾಡಲು ಬಳಸಿಕೊಳ್ಳಬೇಕು ಎಂದರು.

ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ ಸ್ವಾಗತಿಸಿ, ಪ್ರಗತಿ ವರದಿಯನ್ನು ಹೇಳಿದರು. ಕುಲಸಚಿವ ಮಹಾದೇವ ಮುರಗಿ, ಶಿಕ್ಷಣ ನಿರ್ದೇಶಕ ಡಾ.ಎನ್.ಕೆ.ಹೆಗಡೆ, ಆಡಳಿತ ಮಂಡಳಿಯ ನಿರ್ದೇಶಕರಾದ ಶಾಸಕ ಭೀಮಸೇನ ಚಿಮ್ಮನಕಟ್ಟಿ, ವಿಧಾನ ಪರಿಷತ್ ಶಾಸಕ ಹನಮಂತ ನಿರಾಣಿ, ಮಾಜಿ ಎಮ್.ಎಲ್.ಸಿ ಅರುಣ ಶಹಾಪೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೊಡುಗೆ ಅಪಾರ:ಉಜ್ಜೈನಿ ಶ್ರೀಗಳು

ಲಿಂ.ರುದ್ರಮುನಿ ಶಿವಾಚಾರ್ಯರ 44 ನೇ ಪುಣ್ಯಾರಾಧನೆ, ಪೀಠಾಧಿಪತಿ ಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳವರ ಜನ್ಮ ಸುವರ್ಣ ಮಹೋತ್ಸವ, ಗುರು ಪಟ್ಟಾಧಿಕಾರದ ರಜತ ಮಹೋತ್ಸವ ಹಾಗೂ ಸರ್ವಧರ್ಮ ಸಾಮೂಹಿಕ ವಿವಾಹ ಸಮಾರಂಭದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ನಾಡಿನ ಸಮಸ್ತ ಜನರ ಸಾಮಾಜಿಕ, ಶೈಕ್ಷಣಿಕ ಹಾಗೂ ಧಾರ್ಮಿಕ ಜೀವನಮಟ್ಟ ಸುಧಾರಿಸಿದ್ದರೆ ಅದು ಮಠ ಮಾನ್ಯಗಳ ಶ್ರಮದಿಂದ. ಸಕಲ ಜೀವಾತ್ಮರಿಗೂ ಲೇಸನ್ನು ಬಯಸಿದ ಮಠಗಳು ಕೇವಲ ಧಾರ್ಮಿಕ ಭಾವನೆಯನ್ನು ಜನರಲ್ಲಿ ಬಿತ್ತಲಿಲ್ಲ. ಅಚಾರ, ವಿಚಾರ, ಸಂಸ್ಕಾರ, ಸಂಸ್ಕೃತಿ, ಪರಂಪರೆಯನ್ನು ತಿಳಿಸಿ ಸನ್ಮಾರ್ಗದಲ್ಲಿ ನಡೆಸಿವೆ ಎಂದ ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯರು, ಶಿಕ್ಷಣ ಸಂಸ್ಥೆ, ಪ್ರಸಾದ ನಿಲಯಗಳ ಮೂಲಕ ಎಲ್ಲರಿಗೂ ಅನ್ನ, ಅಕ್ಷರ, ಆಶ್ರಯ ಹಾಗೂ ಅರಿವು ನೀಡಿ ನಾಡಿಗೆ ಮಹತ್ತರ ಕೊಡುಗೆ ನೀಡಿದ ಕೀರ್ತಿ ವೀರಶೈವ ಮಠಗಳಿಗೆ ಸಲ್ಲುತ್ತದೆ ಎಂದರು.

ದಿವ್ಯ ಸಾನಿಧ್ಯ ವಹಿಸಿದ್ದ ಕಾಶೀ ಪೀಠದ ಜಗದ್ಗುರು ಡಾ.ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ನೂತನ ದಂಪತಿಗಳಿಗೆ ಶುಭ ಹಾರೈಸಿ ಮಾತನಾಡಿ, ಗ್ರಹಸ್ಥ ಬದುಕು ಸುಂದರವಾಗಬೇಕಾದರೆ ಅತ್ತೆ–ಸೊಸೆಯ ನಡುವೆ ತಾಯಿ–ಮಗಳ ಬಾಂಧವ್ಯ ಬೆಳೆಯಬೇಕು. ಇವರಿಬ್ಬರ ಅನ್ಯೋನ್ಯದ ಸಂಬಂಧ ಭೂಲೋಕದ ಸ್ವರ್ಗ ಎಂದೆನಿಸುತ್ತದೆ ಎಂದು ಹೇಳಿ, ರಾಷ್ಟ್ರಭಕ್ತಿ, ಗುರುಭಕ್ತಿಯುಳ್ಳ ಮಕ್ಕಳಿಗೆ ಜನ್ಮ ನೀಡಿ ಬಂಗಾರದ ಬದುಕು ಕಾಣಬೇಕು ಎಂದು ಹೇಳಿದರು.

ಮುಖ್ಯ ಅತಿಥಿ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಾತನಾಡಿ, ಮೌನತಪಸ್ವಿ ಲಿಂ.ರುದ್ರಮುನಿ ಶಿವಾಚಾರ್ಯರು ಜನರ ಕಲ್ಯಾಣ ಬಯಸಿದವರು. ಅವರ ಭಕ್ತಿಯ ಪರಂಪರೆಯಿಂದಾಗಿ ಶ್ರೀಮಠ ಇಂದು ಅಪಾರ ಸಂಖ್ಯೆಯ ಭಕ್ತರನ್ನು ಹೊಂದಿದೆ. ಅವರ ತಪಸ್ಸಿನ ಫಲದಿಂದಾಗಿ ಬಿಲ್‌ಕೆರೂರ ಕ್ಷೇತ್ರ ಪಾವನ ಕ್ಷೇತ್ರವಾಗಿ ಬೆಳೆದಿದೆ ಎಂದರು.

ಹುನಗುಂದ ಶಾಸಕ, ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ ಮಾತನಾಡಿ, ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಸಮಾಜವನ್ನು ಹಾದಿ ತಪ್ಪಿಸುವ ಕಾರ್ಯ ನಡೆಸಿವೆ. ಇದನ್ನು ನಿಯಂತ್ರಿಸಿ ಸಮಾಜವನ್ನು ಸರಿದಾರಿಯಲ್ಲಿ ನಡೆಸುವ ಶಕ್ತಿ ಪಂಚಪೀಠಗಳಿಗಿದೆ ಎಂದು ಹೇಳಿದರು.

ಭಕ್ತರ ಸಹಾಯ, ಸಹಕಾರ, ದಾನಿಗಳ ಕೊಡುಗೆ, ಸನ್ಮಾನ ಸ್ವೀಕರಿಸಿ ಮಾತನಾಡಿದ ಬಿಲ್ವಾಶ್ರಮ ಹಿರೇಮಠದ ಪೀಠಾಧಿಪತಿ ಸಿದ್ಧಲಿಂಗ ಶಿವಾಚಾರ್ಯರು, ಪೂಜ್ಯ ರುದ್ರಮುನಿ ಶಿವಾಚಾರ್ಯರ ಸತ್ಸಸಂಕಲ್ಪದಂತೆ ಈ ರ್ಷ ನೂತನ ರಥ ನರ್ಮಾಣ ಮಾಡಲಾಗಿದೆ. ಬರುವ ದಿನಗಳಲ್ಲಿ ಶ್ರೀಮಠದ ಶಿಕ್ಷಣ ಸಂಸ್ಥೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಉಚಿತವಾಗಿ ಶಿಕ್ಷಣ ನೀಡಬೇಕೆನ್ನುವ ಸಂಕಲ್ಪ ಹೊಂದಿರುವುದಾಗಿ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಮುಕ್ತಿಮಂದಿರದ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಆಶೀರ್ವಚನ ನೀಡಿದರು. ಶಿವಗಂಗೆಯ ವಲಯ ಶಾಂತಮುನಿ ಶಿವಾಚಾರ್ಯರು ಮಾತನಾಡಿದರು. ನಿಡಗುಂದಿ, ಮುತ್ತತ್ತಿ, ಬಾಗೇವಾಡಿ, ಬೀಳಗಿ, ಶಿವಗಂಗೆಯ ಶ್ರೀಗಳು, ಜಿಪಂ ಮಾಜಿ ಅಧ್ಯಕ್ಷರಾದ ಬಸವಂತಪ್ಪ ಮೇಟಿ, ಬಾಯಕ್ಕ ಮೇಟಿ, ಎಸ್.ಎನ್.ರಾಂಪುರ, ಶಂಭುಗೌಡ ಪಾಟೀಲ, ಪ್ರಭು ಡೇರೇದ ಮತ್ತಿತರರು ವೇದಿಕೆಯಲ್ಲಿದ್ದರು.

ಗಿರಿಸಾಗರದ ರುದ್ರಮುನಿ ಶಿವಾಚಾರ್ಯರು ಸ್ವಾಗತಿಸಿದರು. ಎಮ್ಮಿಗನೂರಿನ ವಾಮದೇವ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು. ಗುರುರಾಜ ಲೂತಿ ನಿರೂಪಿಸಿದರು. ಕಾರ್ಯಕ್ರಮದ ನಂತರ ಸಿದ್ಧಲಿಂಗ ಶಿವಾಚಾರ್ಯರ ಅಡ್ಡಪಲ್ಲಕ್ಕಿ ಮಹೋತ್ಸವ ಗ್ರಾಮದಲ್ಲಿ ಜರುಗಿತು.

14 ಜೋಡಿಗಳ ವಿವಾಹ

ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ 14 ಜೋಡಿಗಳು ಗ್ರಹಸ್ಥ ಜೀವನಕ್ಕೆ ಅಡಿಯಿಟ್ಟರು. ಪೂಜ್ಯರು, ನೆರೆದ ಜನಸ್ತೋಮ ವಧು–ವರರಿಗೆ ಅಕ್ಷತೆ ಹಾಕಿ ಸುಖಮಯ ದಾಂಪತ್ಯ ಜೀವನಕ್ಕೆ ಶುಭ ಹಾರೈಸಿದರು.

## 11 ವರ್ಷ ಕಾರ್ಯಕ್ರಮಗಳ ಆಯೋಜನೆ: ಅಮರನಾಥ ಪಾಟೀಲ

ವಿಕಸಿತ ಭಾರತದ ಸಂಕಲ್ಪ ಮತ್ತು ನಮ್ಮ ಪಾತ್ರ, ಸೇವೆ. ಸುಶಾಸನ ಮತ್ತು ಗರೀಬ ಕಲ್ಯಾಣದ । ವರ್ಷಗಳು ಹಾಗೂ ಶಕ್ತಿಶಾಲಿ ಭಾರತ ಸುರಕ್ಷಿತ ಭಾರತ ಈ ವಿಷಯಗಳ ಕುರಿತು ಮೂರು ಪ್ರತ್ಯೇಕ ವಕ್ತಾರರಿಂದ ಭಾಷಣ ಕಾರ್ಯಕ್ರಮ, ಪ್ರತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಕನಿಷ್ಠ 50 ಜನ ಪ್ರೊಫೆಷನಲ್ಗಳ ಅನುಭವದ ವೀಡಿಯೋ/ಬೈಟ್ಗಳನ್ನು ದಾಖಲಿಸಿ ಸೋಶಿಯಲ್ ಮೀಡಿಯಾದಲ್ಲಿ ಹಂಚುವುದು. ನಾಳೆ ವಿಕಸಿತ ಭಾರತ ಸಂಕಲ್ಪ ಸಭೆ ಆಯೋಜನೆ, ವಿಕಸಿತ ಭಾರತದ ಸಂಕಲ್ಪ ಗ್ರಹಣೆ ಮತ್ತು. ಪ್ರಮಾಣಪತ್ರ ವಿತರಣೆ, ವಿಶ್ವ ಯೋಗ ದಿನ ನಿಮಿತ್ಯ ಜುನ್ 17ರಿಂದ 21ರ ವರೆಗೆ ಎಲ್ಲಾ ಮಂಡಲಗಳಲ್ಲಿ ಯೋಗ ಶಿಬಿರ ಆಯೋಜನೆ, ಪ್ರತಿಯೊಂದು ಮಂಡಲದಲ್ಲಿ ಕನಿಷ್ಠ ಒಂದು ಕಾರ್ಯಕ್ರಮ ನಡೆಯಬೇಕೆಂಬ ಸಂಕಲ್ಪ ನಮ್ಮದಾಗಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಮಾತನಾಡಿ, ಆಟಲ್ ಯೋಜನೆ (ವಯೋ ವಂದನ್) ಅಡಿಯಲ್ಲಿ 100% ದಷ್ಟು ಹಿರಿಯ ನಾಗರಿಕರ ನೋಂದಣಿ ಮತ್ತು ಕಾರ್ಡ್ ವಿತರಣೆ, ವಿಕಸಿತ ಭಾರತದ ನಿರ್ಮಾಣದಲ್ಲಿ ಸಕ್ರಿಯರಾಗುವ ಸಂಕಲ್ಪ ಪ್ರತಿ ಸಭೆಯಲ್ಲಿ ಕನಿಷ್ಟ 5 ಜನ ಫಲಾನುಭವಿಗಳ ಅನುಭವದ ವೀಡಿಯೊ ದಾಖಲಿಸುವುದು ಮತ್ತು ಸೋಶಿಯಲ್ ಮೀಡಿಯಾದಲ್ಲಿ ಹಂಚುವುದು, ಜುನ್ 5ರಿಂದ ಸಸಿ ನೆಡುವ ಅಭಿಯಾನ ಆರಂಭಿಸಲಾಗಿದೆ. ಹಾಗೇ ಬೀಜದ ಉಂಡೆಗಳನ್ನು ಬಿತ್ತುವ ಕಾರ್ಯ ಕೈಗೊಳ್ಳಲಾಗಿದೆ. 'ತಾಯಿಯ ಹೆಸರಿನಲ್ಲಿ ಒಂದು ಸಸಿ' ಅಭಿಯಾನ, ಈ ತಿಂಗಳ 23ರಂದು ಬೂತ್ ಮಟ್ಟದಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಬಲಿದಾನ ದಿನ ಕಾರ್ಯಕ್ರಮ ಏರ್ಪಡಿಸುವುದು. ಈ ತಿಂಗಳ 25ರಂದು ತುರ್ತು ಪರಿಸ್ಥಿತಿ ಘೋಷಿಸಿದ ದಿನವಾಗಿದ್ದು, ಅಂದು ಜಿಲ್ಲಾ ಮಟ್ಟದಲ್ಲಿ ವಿಚಾರ ಸಂಕಿರಣಗಳು ಹಾಗೂ ತುರ್ತು ಪರಿಸ್ಥಿತಿ ಹೋರಾಟಗಾರರ ಹಾಗೂ ಅದರಲ್ಲಿ ಭಾಗಿಯಾದವರ ಮತ್ತು ಪ್ರಜಾಪ್ರಭುತ್ವದ ಉಳಿವಿಗಾಗಿ ಹೋರಾಡಿದ ಮಹನೀಯರಿಗೆ ಗೌರವ ಸನ್ಮಾನ. ಕಾಲೇಜುಗಳಲ್ಲಿ ವಿದ್ಯಾರ್ಥಿಗಳನ್ನು ಆದ್ಯತೆಯನ್ನಾಗಿಸಿಕೊಂಡು ತುರ್ತು ಪರಿಸ್ಥಿತಿ ಕುರಿತ ಕಾರ್ಯಕ್ರಮ ಆಯೋಜಿಸಲಾಗುತ್ತದೆ ಎಂದು ಜಿಲ್ಲಾಧ್ಯಕ್ಷರು ತಿಳಿಸಿದರು.

ಕೇಂದ್ರ ಮಾಜಿ ಮಂತ್ರಿ ಭಗವಂತ ಖೂಬಾ, ವಿಧಾನ ಪರಿಷತ್ ಸದಸ್ಯ ಎಂ.ಜಿ ಮುಳೆ, ಮಾಜಿ ಬೂಡಾ ಅಧ್ಯಕ್ಷ ಬಾಬು ವಾಲಿ, ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಮಾಧವ ಹಸುರೆ, ಮುಖಂಡರಾದ ಜಗನ್ನಾಥ ಸಿರ್ಕಟನಳ್ಳಿ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

ಕಾಲ್ತುಳಿತ ಪ್ರಕರಣ: ಮೃತರ ಕುಟುಂಬಕ್ಕೆ ಬಿಜೆಪಿ ಶಾಸಕರ ಒಂದು ತಿಂಗಳ ವೇತನ : ಡಾ.ಬೆಲ್ದಾಳೆ

ಇತ್ತೀಚೀಗೆ ಬೆಂಗಳೂರು ಚಿನ್ನಾಸ್ವಾಮಿ ಕ್ರೀಡಾಂಗಣದಲ್ಲಿ ಆ.ಸಿ.ಬಿ ತಂಡದ ವಿಜಯೋತ್ಸವ ಸಂದರ್ಭದಲ್ಲಿ ಕಾಲ್ತುಳಿತದಲ್ಲಿ ಮರಣ ಹೊಂದಿದ 11 ಜನರ ಕುಟುಂಬದವರಿಗೆ ಭಾರತೀಯ ಜನತಾ ಪಕ್ಷದ ಶಾಸಕರ ಒಂದು ತಿಂಗಳ ವೇತನ ಪರಿಹಾರ ರೂಪದಲ್ಲಿ ನೀಡಲಾಗುತ್ತಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿಗಳು ಹಾಗೂ ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ತಿಳಿಸಿದರು.

ಈಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಸಿಎಂ ಹಾಗೂ ಡಿಸಿಎಂಗಳ ಮಧ್ಯೆ ಸಮನ್ವಯದ ಕೊರತೆ ಇದ್ದು ಇವರಿಬ್ಬರಲ್ಲಿ ಗೃಹ ಸಚಿವ ಡಾ.ಪರಮೇಶ್ವರ ಅವರು ಸಿಕ್ಕಿ ಹಾಕಿಕೊಂಡಿದ್ದಾರೆ. ಈ ಪ್ರಕರಣದ ನೈತಿಕ ಹೊಣೆ ಹೊತ್ತು ಸಿಎಂ ರಾಜೀನಾಮೆ ನೀಡಬೇಕು ಎಂದ ಆಗ್ರಹಿಸಿದರು.

ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ಅಧಿವೇಷನ ಕರೆಯಬೇಕು. ಆರ್.ಸಿ.ಬಿ ತಂಡದ ಎಲ್ಲಾ ಕ್ರಿಕೇಟ್ ಆಟಗಾರರು ತಮಗೆ ಬಂದ ಹಣದಲ್ಲಿ ಮೃತರ ಕುಟುಂಬಕ್ಕೆ ಧನ ಸಹಾಯ ಮಾಡಬೇಕು ಎಂದು ಬೆಲ್ದಾಳೆ ಹೇಳಿದ

## ಷಾ ರಶೀದ್ ಅಹಮ್ಮದ್ ಖಾದ್ರಿ

ಸಾಲಿನಲ್ಲಿ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿತ್ತು. ಅನೇಕ ರಾಷ್ಟ, ರಾಜ್ಯ ಪ್ರಶಸ್ತಿಗಳೂ ಸಂದಿವೆ.ಕಲಾವಿದ ಸರ್ಕಾರ ಸ್ಪಂದಿಸಿದರೆ ಬದುಕುಳಿಯುವರು ನಮ್ಮ ತಂದೆಯ ಪರಿಸ್ಥಿತಿಯ ಬಗ್ಗೆ ರಾಜ್ಯ ಸರ್ಕಾರ ಜಿಲ್ಲೆಯ ಸಚಿವರಿಗೆ ಪತ್ರ ಬರೆದು ವಿವರಿಸಿದ್ದೇನೆ. ಇದುವರೆಗೆ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಸರ್ಕಾರ ಸ್ಪಂದಿಸಿದರೆ ನಮ್ಮ ತಂದೆ ಬದುಕುಳಿಯುತ್ತಾರೆ.

ಒಡಿಶಾ ತೆಲಂಗಾಣ ಮಾದರಿ ಅನುಸರಿಸಿ: ಪದ್ಮಶ್ರೀ ಪುರಸ್ಕೃತರಿಗೆ ಒಡಿಶಾ ತೆಲಂಗಾಣದಲ್ಲಿ ಅಲ್ಲಿನ ಸರ್ಕಾರ 25 ಲಕ್ಷ ನಗದು ನೀಡಿದೆ. ಪ್ರತಿ ತಿಂಗಳು 25 ಸಾವಿರ ಮಾಸಾಶನ ನೀಡುತ್ತಿದೆ. ಅದೇ ಮಾದರಿಯಲ್ಲಿ ರಾಜ್ಯ ಸರ್ಕಾರ ನನಗೂ ನೆರವು ನೀಡಿದರೆ ಆಸ್ಪತ್ರೆಯ ವೆಚ್ಚ ಭರಿಸಲು ಸಹಾಯವಾಗುತ್ತದೆ.– ಷಾ ರಶೀದ್ ಅಹಮ್ಮದ್ ಖಾದ್ರಿ ಬಿದ್ರಿ

## ಆರಂಭ:ಸಚಿವ ಶಿವಾನಂದ ಪಾಟೀಲ

ಸಮಯದಲ್ಲಿ ಬಿಲ್ ಪಾವತಿ ಬಗ್ಗೆ ಚರ್ಚೆ ಸಭೆಯಲ್ಲಿ ಚರ್ಚೆ ನಡೆಯಿತು. ಕಳೆದ ಮೂರು ವರ್ಷದ ಹಂಗಾಮಿನಲ್ಲಿ ಕಬ್ಬು ಪೂರೈಕೆ ಮಾಡಿದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿಯಾಗಿದೆ. ಕಬ್ಬು ಪೂರೈಕೆ ಮಾಡಿದ 14 ದಿನಗಳೊಳಗೆ ಬಿಲ್ ಪಾವತಿ ಮಾಡಬೇಕು ಎಂಬ ನಿಯಮ ಇದೆ. ಕೆಲ ಕಾರ್ಖಾನೆಗಳು ವಿಳಂಬ ಮಾಡಿರಬಹುದು ಆದರೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿ ಮಾಡಿವೆ. ಕಬ್ಬಿನ ಬಾಕಿ ಬಿಲ್ ಪಾವತಿ ವಿಚಾರದಲ್ಲಿ ಕರ್ನಾಟಕ ರಾಜ್ಯ ಇತರೆ ಕಬ್ಬು ಬೆಳೆಯುವ ರಾಜ್ಯಗಳಿಗೆ ಮಾದರಿಯಾಗಿದೆ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು.

ಕಬ್ಬು ಪೂರೈಕೆ ಮಾಡಿದ ರೈತರಿಗೆ ಸಕ್ಕರೆ ಕಾರ್ಖಾನೆಗಳು ಉತ್ತರ ಪ್ರದೇಶದಲ್ಲಿ ರೂ 594 ಕೋಟಿ, ಮಹಾರಾಷ್ಟ್ರ ರಾಜ್ಯದಲ್ಲಿ ರೂ 123 ಕೋಟಿ ಬಾಕಿ ಉಳಿಸಿಕೊಂಡಿವೆ. ಕಬ್ಬು ಬೆಳೆಗಾರರ ಹಿತರಕ್ಷಣೆಗಾಗಿ ಕರ್ನಾಟಕ ಸರ್ಕಾರ ಸಕ್ಕರೆ ಕಾರ್ಖಾನೆಗಳ ಮೇಲೆ ಒತ್ತಡ ಹಾಕಿ ಬಿಲ್ ಪಾವತಿಗೆ ಕ್ರಮ ಕೈಗೊಂಡಿದೆ ಎಂದರು.2025–26ನೇ ಸಾಲಿನ ಹಂಗಾಮಿಗೆ ಎಫ್‌ಆರ್‌ಪಿ ದರವನ್ನು ಪ್ರತಿಶತ 9.5ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೀ 4440 ಅಥವಾ ರೂ 4200 ನಿಗದಿಪಡಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಕಳೆದ ಜನವರಿಯಲ್ಲೇ ರಾಜ್ಯ ಸರ್ಕಾರ ಮನವಿ ಮಾಡಿತ್ತು. ಕೇಂದ್ರ ಸರ್ಕಾರ ಪ್ರತಿಶತ 10.25 ಸಕ್ಕರೆ ಇಳುವರಿಗೆ ಪ್ರತಿಟನ್‌ಗೆ ರೂ 3,550, ಪ್ರತಿಶತ 10.25ಕ್ಕೂ ಮೇಲ್ಪಟ್ಟ ಇಳುವರಿಗೆ ನಂತರದ ಶೇಕಡ 1ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ 346 ಹೆಚ್ಚುವರಿ ಬೆಲೆ ನಿಗದಿಪಡಿಸಿದೆ. ಪ್ರತಿಶತ 10.25ಕ್ಕಿಂತ ಕಡಿಮೆ ಹಾಗೂ ಪ್ರತಿಶತ 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ 346 ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆ ಕಡಿಮೆ ಮಾಡಬೇಕು. ಪ್ರತಿಶತ 9.5 ಅಥವಾ ಪ್ರತಿಶತ 9.50ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ. 3290.5 ನ್ಯಾಯ ಮತ್ತು ಲಾಭದಾಯಕ ಬೆಲೆ ನಿಗದಿಪಡಿಸಿದೆ ಎಂದು ಸಚಿವರು ವಿವರಿಸಿದರು.2024–25ನೇ ಹಂಗಾಮಿನಲ್ಲಿ ಕಬ್ಬು ಬಿಲ್ ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ವಸೂಲಾತಿ ಪ್ರಮಾಣ ಪತ್ರವನ್ನು ಜಾರಿಗೊಳಿಸಲಾಗಿದೆ. ಕೆಲವು ಕಾರ್ಖಾನೆಗಳು ಎಫ್‌ಆರ್‌ಪಿ ದರದಂತೆ ಸಂಪೂರ್ಣ ಹಣ ಪಾವತಿ ಮಾಡಿದ್ದರೂ ಕಬ್ಬು (ನಿಯಂತ್ರಣ) ಆದೇಶದ ಅನ್ವಯ ವಿಳಂಬದ ಅವಧಿಗೆ ರೈತರಿಗೆ ಪ್ರತಿಶತ 15ರಂತೆ ಬಡ್ಡಿ ವಿತರಿಸಿರುವ ಬಗ್ಗೆ ಮಾಹಿತಿ ನೀಡಿಲ್ಲ. ಕೆಲವು ಕಾರ್ಖಾನೆಗಳು ಅಸಲು ಮೊತ್ತವನ್ನೂ ಬಾಕಿ ಉಳಿಸಿಕೊಂಡಿವೆ. ಈ ಹಿನ್ನೆಲೆಯಲ್ಲಿ ಕಾರ್ಖಾನೆಗಳಿಂದ ಬರಬೇಕಾದ ಬಾಕಿ ಮೊತ್ತದ ವಿಚಾರವಾಗಿ ಕಬ್ಬು ಬೆಳೆಗಾರರ ಸಭೆ ಕರೆದು ಕಬ್ಬಿನ ಬಾಕಿ ಬಿಲ್ ಪಾವತಿ ಬಗ್ಗೆ ಖಚಿತಪಡಿಸಕೊಳ್ಳಲು ಹಾಗೂ ಈ ವಿಚಾರವಾಗಿ ಅನುಪಾಲನಾ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.ತೂಕದಲ್ಲಿನ ವಂಚನೆ ತಡೆಗೆ ರಾಜ್ಯದ ಎಲ್ಲ ಸಕ್ಕರೆ ಕಾರ್ಖಾನೆಗಳಲ್ಲಿ ಅನಲಾಗ್ ತೂಕದ ಯಂತ್ರಗಳ ಬದಲಿಗೆ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ. ಕೇವಲ ನಾಲ್ಕು ಕಾರ್ಖಾನೆಗಳಲ್ಲಿ ಮಾತ್ರ ಬಾಕಿ ಇದೆ. ಈ ಹಂಗಾಮು ಆರಂಭದೊಳಗೆ ಬಾಕಿ ಇರುವ ಸಕ್ಕರೆ ಕಾರ್ಖಾನೆಗಳಲ್ಲೂ ಡಿಜಿಟಲ್ ತೂಕದ ಯಂತ್ರ ಅಳವಡಿಸಬೇಕು ಎಂದು ಸಚಿವರು ಮಾಪನ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಿದ ನಂತರ ವಂಚನೆ ದೂರುಗಳು ಕಡಿಮೆಯಾಗಿವೆ. ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳು ಅನಿರೀಕ್ಷಿತವಾಗಿ ಸಕ್ಕರೆ ಕಾರ್ಖಾನೆಗಳಿಗೆ ಭೇಟಿ ನೀಡಿ ತಪಾಸಣೆ ಮಾಡಬೇಕು.ಡಿಜಿಟಲ್ ತೂಕದ ಯಂತ್ರಗಳಲ್ಲಿ ವಂಚನೆ ಮಾಡಲು ಅವಕಾಶ ಇರುವುದಿಲ್ಲ ಎನ್ನಲಾಗಿದೆ. ಆದರೂ ಅಧಿಕಾರಿಗಳು ಪರಿಶೀಲನೆ ಮಾಡುವುದು ಕಡ್ಡಾಯ. ಮಾಪನಶಾಸ್ತ್ರ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇಲ್ಲ. ಹೀಗಾಗಿ ಸಬೂಬು ಹೇಳದೆ ತಮ್ಮ ಜವಾಬ್ದಾರಿ ನಿರ್ವಹಿಸಬೇಕು. ರಾಜ್ಯದ ಎಲ್ಲ ಎಪಿಎಂಸಿಗಳಲ್ಲೂ ತೂಕದ ಯಂತ್ರಗಳನ್ನು ಅಳವಡಿಸಿ ಉಚಿತವಾಗಿ ತೂಕ ಮಾಡಿಕೊಡಲಾಗುವುದು ಎಂದು ಸಚಿವರು ತಿಳಿಸಿದರು.

ರಾಜ್ಯದಲ್ಲಿ 2025ರ ಮೇ ಅಂತ್ಯಕ್ಕೆ ಸಕ್ಕರೆ ಕಾರ್ಖಾನೆಗಳು 521.38 ಲಕ್ಷ ಮೆಟ್ರಿಕ್ ಟನ್ ಕಬ್ಬು ನುರಿಸಿ 41.81 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ಉತ್ಪಾದನೆ ಮಾಡಿವೆ. ಕೇಂದ್ರ ಸರ್ಕಾರ ನಿಗದಿಪಡಿಸಿರುವ ಎಫ್‌ಆರ್‌ಪಿ ದರದಂತೆ ಒಟ್ಟು ರೂ 18221.88 ಕೋಟಿ ಬಿಲ್ ಪಾವತಿ ಮಾಡಬೇಕಿದ್ದು, ರೂ 18872.47 ಕೋಟಿ ಪಾವತಿ ಮಾಡಿವೆ. 14 ಸಕ್ಕರೆ ಕಾರ್ಖಾನೆಗಳು ರೂ 245.62 ಕೋಟಿ ಬಾಕಿ ಉಳಿಸಿಕೊಂಡಿದ್ದು,, ಅಂತಹ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಗಳಿಗೆ ಈಗಾಗಲೇ ಜಿಲ್ಲಾಧಿಕಾರಿಗಳು ವಸೂಲಾತಿ ಪ್ರಮಾಣ ಪತ್ರ ಹೊರಡಿಸಿದ್ದಾರೆ. ಕೆಲವು ಕಾರ್ಖಾನೆಗಳು ಎಫ್‌ಆರ್‌ಪಿ ದರಕ್ಕಿಂತ ಹೆಚ್ಚಿನ ಬಿಲ್ ಪಾವತಿ ಮಾಡಿವೆ ಎಂದು ಸಕ್ಕರೆ ಆಯುಕ್ತ ರವಿಕುಮಾರ್ ಸಭೆಗೆ ಮಾಹಿತಿ ನೀಡಿದರು.ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲಾ, ಸಕ್ಕರೆ ಆಯುಕ್ತ ರವಿಕುಮಾರ್, ಎಸ್. ನಿಜಲಿಂಗಪ್ಪ ಸಂಸ್ಥೆ ನಿರ್ದೇಶಕ ರಾಜಗೋಪಾಲ್, ಕೃಷಿ ಇಲಾಖೆ ಆಯುಕ್ತ ವೈ.ಎಸ್. ಪಾಟೀಲ್, ಆರ್ಥಿಕ ಇಲಾಖೆ ಉಪ ಕಾರ್ಯದರ್ಶಿ, ಗೋಪಾಲಕೃಷ್ಣನ್, ರೈತ ಮುಖಂಡರಾದ ತೇಜಸ್ವಿ ಪಟೇಲ್, ಬಡಗಲಪುರ ನಾಗೇಂದ್ರ, ಬಾಬುರಾವ್ ತುಂಗಾ, ರಂಗನಗೌಡ ಶಿವನಗೌಡ ಪಾಟೀಲ, ಹಾಗೂ ವಿವಿಧ ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು.ಮಾಪನ ಶಾಸ್ತ್ರ ಇಲಾಖೆ ಅಧಿಕಾರಿಗಳಿಗೆ ಸೂಚನೆ:ಕೋರ್ಟ್ ಆದೇಶವಿದ್ದರೂ ಎಲ್ಲ ಸಕ್ಕರೆ ಕಾರ್ಖಾನೆಗಳಲ್ಲಿ ಏಕೆ ಡಿಜಿಟಲ್ ತೂಕದ ಯಂತ್ರಗಳನ್ನು ಅಳವಡಿಸಲು ಕ್ರಮ ಕೈಗೊಂಡಿಲ್ಲ ಎಂದು ಸಚಿವ ಶಿವಾನಂದ ಪಾಟೀಲ ಅವರು ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳನ್ನು ಪ್ರಶ್ನಿಸಿದರು. ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇಲ್ಲ. ಆದರೂ ಯಾಕೆ ಇನ್ನೂ ನಾಲ್ಕು ಸಕ್ಕರೆ ಕಾರ್ಖಾನೆಗಳಲ್ಲಿ ಡಿಜಿಟಲ್ ತೂಕದ ಯಂತ್ರ ಅಳವಡಿಸಿಲ್ಲ. ಡಿಜಿಟಲ್ ಯಂತ್ರಗಳನ್ನು ಅಳವಡಿಸಿದ್ದರೂ ರೈತರಲ್ಲಿ ವಿಶ್ವಾಸ ಬಂದಿಲ್ಲ. ಹೀಗಾಗಿ ಡಿಜಿಟಲ್ ತೂಕದ ಯಂತ್ರಗಳಲ್ಲೂ ಟ್ಯಾಂಪರಿಂಗ್ ಸಾಧ್ಯತೆ ಇದೆಯೇ ಎಂದು ಸಚಿವರು ಪ್ರಶ್ನೆ ಮಾಡಿದರು. ಡಿಜಿಟಲ್ ಯಂತ್ರಗಳಲ್ಲಿ ಟ್ಯಾಂಪರಿಂಗ್ ಸಾಧ್ಯತೆ ಇಲ್ಲ. ಅಂತಹ ಪ್ರಯತ್ನ ಮಾಡಿದರೆ ತೂಕದ ಯಂತ್ರವೇ ಸ್ಥಗಿತಗೊಳ್ಳಲಿದೆ ಎಂದು ವಿವರಿಸಿದ ಮಾಪನಶಾಸ್ತ್ರ ಇಲಾಖೆ ಅಧಿಕಾರಿಗಳು, ಈ ಹಂಗಾಮು ಕ್ರಷಿಂಗ್ ಆರಂಭದ ಪೂರ್ವದಲ್ಲೇ ಬಾಕಿ ಇರುವ ಸಕ್ಕರೆ ಕಾರ್ಖಾನೆಗಳಲ್ಲೂ ಡಿಜಿಟಲ್ ತೂಕದ ಯಂತ್ರ ಅಳವಡಿಸಲಾಗುವುದು ಎಂದು ಭರವಸೆ ನೀಡಿದರು.ರೂ. 5 ಲಕ್ಷ ಬಹುಮಾನ:ತೂಕದಲ್ಲಿ ವಂಚನೆಯನ್ನು ದಾಖಲೆ ಸಹಿತ ದೂರು ನೀಡುವ ರೈತರಿಗೆ ಈಗಾಗಲೇ ರೂ 5 ಲಕ್ಷ ರೂ. ಬಹುಮಾನ ಘೋಷಣೆ ಮಾಡಲಾಗಿದೆ. ಹಾಗೂ ಆ ರೈತರ ಕಬ್ಬು ನುರಿಸುವ ಜವಾಬ್ದಾರಿಯನ್ನು ಸರ್ಕಾರ ವಹಿಸಿಕೊಳ್ಳಲಿದೆ ಎಂದು ಈಗಾಗಲೇ ಘೋಷಣೆ ಮಾಡಲಾಗಿದೆ. ಇದುವರೆಗೆ ತೂಕದಲ್ಲಿ ವಂಚನೆಯ ದೂರುಗಳು ಬಂದಿಲ್ಲ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು. ಅನಲಾಗ್ ತೂಕದ ಯಂತ್ರಗಳು ಇದ್ದ ಸಮಯದಲ್ಲಿ ಸುಮಾರು ನೂರು ದೂರುಗಳು ಬರುತ್ತಿದ್ದವು. ಆದರೆ ಡಿಜಿಟಲ್ ತೂಕದ ಯಂತ್ರ ಅಳವಡಿಸಿದ ನಂತರ ದೂರುಗಳ ಸಂಖ್ಯೆ ಹತ್ತಕ್ಕಿಂತ ಕಡಿಮೆ ಇದೆ ಎಂದು ಸಕ್ಕರೆ ಆಯುಕ್ತ ರವಿಕುಮಾರ್ ಸಭೆಯ ಗಮನಕ್ಕೆ ತಂದರು. ದೂರುಗಳು ಶೂನ್ಯಕ್ಕೆ ಇಳಿಯಬೇಕು. ಇದು ಸರ್ಕಾರದ ಆಶಯ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು.

## 100 ಕೋಟಿ ಮೌಲ್ಯದ 92 ಆಸ್ತಿ ಮುಟ್ಟುಗೋಲು

ರೂಪದಲ್ಲಿ ಲಂಚ ಪಡೆದಿದ್ದಕ್ಕೆ ಸಾಕ್ಷ್ಯಗಳು ಲಭ್ಯವಾಗಿದೆ.

ಅಕ್ರಮ ಹಂಚಿಕೆಗಳನ್ನು ಮಾಡಲು ಮುಡಾ ಸಹಕಾರಿ ಸಂಘದ ಅಧಿಕಾರಿಗಳ ಸಂಬಂಧಿಕರು ಸಹವರ್ತಿಗಳ ಬ್ಯಾಂಕ್ ಖಾತೆಗಳ ಮೂಲಕ ಹಣವನ್ನು ರವಾನೆ ಮಾಡಲಾಗಿದೆ

ಈ ಹಿಂದೆ 300 ಕೋಟಿ ರೂ. ಮೌಲ್ಯ 160 ಮುಡಾ ನಿವೇಶನಗಳನ್ನು ಮುಟ್ಟುಗೋಲು ಹಾಕಲಾಗಿತ್ತು. ಇಲ್ಲಿಯವರೆಗೆ ಒಟ್ಟು 400 ಕೋಟಿ ರೂ. ಮೌಲ್ಯದ ಮುಡಾ ನಿವೇಶನಗಳನ್ನು ಮುಟ್ಟುಗೋಲು ಹಾಕಲಾಗಿದೆ.

## ಗೋವಿಂದರಾಜುಲು ಅವರಿಗೆ ಇನ್ನಷ್ಟು ಸಾಮರ್ಥ್ಯ ಲಭಿಸಲಿ – ಬಿ.ಶ್ರೀರಾಮುಲು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಮಹಾನಗರ ಪಾಲಿಕೆಯ ಸದಸ್ಯರು ಹಾಗೂ ಬಿಜೆಪಿಯ ಮುಖಂಡರು ಆದ ಎಂ.ಗೋವಿಂದರಾಜುಲು ಅವರ ಅಧ್ಯಕ್ಷತೆಯಲ್ಲಿ ಎಂ.ಜಿ.ಆರ್ ಟ್ರಸ್ಟ್ ವತಿಯಿಂದ ಬಳ್ಳಾರಿಯ ಕೌಲ್ ಬಜಾರ್ ನ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಉಚಿತ ನೇತ್ರ ತಪಾಸಣೆ ಮತ್ತು ಶಸ್ತ್ರಚಿಕಿತ್ಸೆ ಶಿಬಿರವನ್ನು ಮಾಜಿ ಸಚಿವ ಶ್ರೀರಾಮುಲು ಉದ್ಘಾಟಿಸಿ ಶಿಬಿರದ ಪ್ರಯೋಜನೆಯನ್ನು ಪಡೆಯುವಂತೆ ಸಾರ್ವಜನಿಕರಿಗೆ ತಿಳಿಸಿದರು. ಕಳೆದ 9 ವರ್ಷಗಳಿಂದ ಉಚಿತ ನೇತ್ರ ತಪಾಸಣಾ ಶಿಬಿರವನ್ನು ಆಯೋಜಿಸಿಕೊಂಡು ಈ ಭಾಗದ ಸಾರ್ವಜನಿಕರಿಗೆ ಆರೋಗ್ಯ ಸುಧಾರಣೆಗೆ ನಿರಂತರವಾಗಿ ಶ್ರಮಿಸುತ್ತಿರುವ ಎಂ.ಗೋವಿಂದರಾಜುಲು ಮತ್ತು ಎಂ.ಜಿ.ಆರ್ ಟ್ರಸ್ಟ್ ನ ಎಲ್ಲಾ ಸದಸ್ಯರಿಗೆ ನಾನು ಕೃತಜ್ಞತೆಯನ್ನು ಸಲ್ಲಿಸುತ್ತೇನೆ. ದೇವರು ಅವರಿಗೆ ಇನ್ನಷ್ಟು ಶಕ್ತಿ, ಆರೋಗ್ಯ ಮತ್ತು ಆತ್ಮಸ್ಥೈರ್ಯ ನೀಡಲಿ ಎಂದು ಶುಭ ಹಾರೈಸುತ್ತೇನೆ ಎಂದು ಶ್ರೀರಾಮುಲು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಜಿ.ಸೋಮಶೇಖರ್ ರೆಡ್ಡಿ, ಮಹಾನಗರ ಪಾಲಿಕೆ ಸದಸ್ಯರಾದ ಶ್ರೀನಿವಾಸ್ ಮೋತ್ಕರ್, ಕ್ರೈಸ್ತ ಧರ್ಮ ಗುರುಗಳಾದ ಹೆನ್ರಿ ಬಿಷಾಪ್, ಮುಸ್ಲಿಂ ಧರ್ಮ ಗುರುಗಳಾದ ಮುರ್ತುಜಾ ಖಾನ್ ಸಾಬ್, ಕೌಲ್ ಬಜಾರ್ ಬಿಜೆಪಿ ಮುಖಂಡ ನೂರಬಾಷ ಸೇರಿದಂತೆ ಇನ್ನಿತರರು ಇದ್ದರು.

## ಆಲದ ಮರಕ್ಕೆ ದಾರ ಸುತ್ತಿ ವಟ ಸಾವಿತ್ರಿ ವ್ರತ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.10: ತಾಲೂಕಿನ ಡಿಗ್ಗಿ ಗ್ರಾಮ ಸೇರಿದಂತೆ ಎಲ್ಲಡೆ ಆಲದ ಮರವನ್ನು ಮಹಿಳೆಯರು ಪೂಜೆ ಮಾಡಿ ನೈವೇದ್ಯ ಅರ್ಪಿಸಿ ನಂತರ ಕೈಯಲ್ಲಿ ಪವಿತ್ರ ದಾರವನ್ನು ಹಿಡಿದು–ಕೊಂಡು ಅದನ್ನು ಸುತ್ತುವರೆದು ಮರಕ್ಕೆ ಸುತ್ತಿದ್ದರು, ಹೀಗೆ ಅದನ್ನು ಮರದ ಸುತ್ತಲೂ 7 ಬಾರಿ ಸುತ್ತಿ ಸಂಭ್ರಮ ದಿಂದ ವಟ ಸಾವಿತ್ರಿ ವ್ರತ ಆಚರಣೆ ಮಾಡಿದರು.ವಟ ಸಾವಿತ್ರಿ ಉಪವಾಸವನ್ನು ಆಚರಿಸುವ ಮೂಲಕ, ಪತಿಯ ಜೀವನವು ದೀರ್ಘವಾಗಿರಲೆಂದು ಪ್ರಾರ್ಥಿಸುತ್ತಾರೆ. ಮತ್ತು ವ್ರತವನ್ನು ಆಚರಿಸುವುದರಿಂದ ಜೀವನದಲ್ಲಿ ಸಂತೋಷ, ಸಮೃದ್ಧಿ ಬರುತ್ತದೆ ಎಂದು ನಂಬಲಾಗಿದೆ. ಹಿಂದೂ ಧರ್ಮದ ನಂಬಿಕೆಗಳ ಪ್ರಕಾರ, ವಿಷ್ಣು, ಬ್ರಹ್ಮ ಮತ್ತು ಶಿವ ಆಲದ ಮರದಲ್ಲಿ ವಾಸಿಸುತ್ತಾರೆ. ವಟ ಸಾವಿತ್ರಿ ಉಪವಾಸದ ದಿನದಂದು, ವಿವಾಹಿತ ಮಹಿಳೆಯರು ಆಲದ ಮರವನ್ನು ಪ್ರದಕ್ಷಿಣೆ ಹಾಕಿ ಅದರ ಸುತ್ತಲೂ ಕಲ್ವಾ ಕಟ್ಟುತ್ತಾರೆ. ಇದನ್ನು ಮಾಡುವುದರಿಂದ, ಪತಿಗೆ ಅದೃಷ್ಟಸಿಗುತ್ತದೆ ಮತ್ತು ಆತನು ಆಸೆಗಳನ್ನು ಪೂರೈಸುತ್ತಾನೆ ಎಂದು ನಂಬಲಾಗಿದೆ.

ಈ ಸಂದರ್ಭದಲ್ಲಿ ಮಹಿಳೆಯರಾದ ಉಷಾ ಬಿರಾದಾರ, ಸಪ್ನಾ ರಾಂಪುರೆ, ಸುವರ್ಣ ಪಾಟೀಲ, ಆಶಾ ಬಿರಾದಾರ, ಶೈಲಜಾ ಬಿರಾದಾರ, ಪ್ರಯಾಗಬಾಯಿ ರಾಂಪುರೆ, ಶೀಲಾ ರಾಂಪುರೆ, ರಾಣಿಶ್ರೀಗಿರೆ, ಆರತಿ ಚಾಂಡೇಶ್ವರೆ, ಸೋನಾಲಿ ಬನವಾಸೆ ಹಾಗೂ ಹನುಮಾನ ದೇವಾಲಯದ ಪೂಜಾರಿ ಶೇವಮ್ಮ ಹೂಗಾರ ಸೇರಿದಂತೆ ಅನೇಕರು ಇದ್ದರು.

## ಮಾಜಿ ಸಭಾಪತಿ ಡೇವಿಡ್ ಸಿಮಿಯೋನ್ ನಿಧನ: ಸಭಾಪತಿ ಹೊರಟ್ಟಿ ತೀವ್ರ ಸಂತಾಪ

ಬೆಂಗಳೂರು, ಜೂ. 10:ಬೆಂಗಳೂರಿನಲ್ಲಿ ಇಂದು ನಿಧನ ಹೊಂದಿದ ಕರ್ನಾಟಕ ವಿಧಾನ ಪರಿಷತ್ತಿನ ಮಾಜಿ ಸಭಾಪತಿ ಡೇವಿಡ್ ಸಿಮಿಯೋನ್ ಅವರ ಅಗಲಿಕೆಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ತಮ್ಮ ಶೋಕ ಸಂದೇಶದಲ್ಲಿ, ವಿಧಾನ ಪರಿಷತ್ತಿನ ಸದಸ್ಯರಾಗಿ ಕ್ರೀಯಾಶೀಲವಾಗಿ ಕಾರ್ಯ ನಿರ್ವಹಿಸಿರುವ ಡೇವಿಡ್ ಸಿಮಿಯೋನ್ ಮೂರು ವರ್ಷಗಳ ಕಾಲ ವಿಧಾನ ಪರಿಷತ್ತಿನ ಉಪಸಭಾಪತಿಯಾಗಿ ಹಾಗೂ ಸುಮಾರು ಒಂದೂವರೆ ವರ್ಷಗಳ ಕಾಲ ಹಂಗಾಮಿ ಸಭಾಪತಿಯಾಗಿ ಸದನವನ್ನು ಸಮರ್ಥವಾಗಿ ನಿರ್ವಹಿಸಿದ್ದನ್ನು ಬಸವರಾಜ ಹೊರಟ್ಟಿರವರು ಈ ಸಂದರ್ಭದಲ್ಲಿ ಸ್ಮರಿಸಿದ್ದಾರೆ. ಎಲ್ಲಾ ಜನಾಂಗಗಳ ಬಗೆಗೂ ಅತೀವ ಪ್ರೀತಿ, ಕಾಳಜಿ ಹೊಂದಿದ್ದ ಅವರು, ಉತ್ತರ ಕರ್ನಾಟಕ ಅದರಲ್ಲೂ ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ, ಸಾಂಸ್ಕೃತಿಕ, ಸಾಮಾಜಿಕ ಸೇರಿದಂತೆ ಎಲ್ಲಾ ರಂಗಗಳ ಅಭಿವೃದ್ದಿಗೆ ಅಹರ್ನಿಶಿ ಶ್ರಮಿಸಿರುವ ಡೇವಿಡ್ ಸಿಮಿಯೋನ್ ತಮ್ಮ ಸರಳತೆ ಹಾಗೂ ಸಜ್ಜನಿಕೆಯಿಂದ ಇಂದಿನ ಯುವ ರಾಜಕಾರಣಿಗಳಿಗೆ ಮಾದರಿಯಾಗಿದ್ದಾರೆ ಎಂದು ಬಸವರಾಜ ಹೊರಟ್ಟಿ ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ. ಡೇವಿಡ್ ಸಿಮಿಯೋನ್ ಅವರ

ಅಗಲಿಕೆಯಿಂದ ಕನ್ನಡ ನಾಡು ಉತ್ತಮ ಸಮಾಜ ಸೇವಕ ಹಾಗೂ ಸಂಸದೀಯ ಪಟುವನ್ನು ಕಳೆದುಕೊಂಡಂತಾಗಿದೆ ಎಂದು ಕಂಬನಿ ಮಿಡಿದಿರುವ ಬಸವರಾಜ ಹೊರಟ್ಟಿ, ಡೇವಿಡ್ ಸಿಮಿಯೋನ್ ಅವರ ಅಪಾರ ಅಭಿಮಾನಿಗಳು, ಬಂಧು ಮಿತ್ರರು ಹಾಗೂ ಕುಟುಂಬ ವರ್ಗದವರಿಗೆ ಭಗವಂತ ಅವರ ಅಗಲಿಕೆಯ ದುಖಃವನ್ನು ಸಹಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

# ವೈಭವದ ಬೀರಲಿಂಗೇಶ್ವರ ಪಲ್ಲಕ್ಕಿ ಉತ್ಸವ





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಬೀರಲಿಂಗೇಶ್ವರ ಮಹೋತ್ಸವ ಹಿನ್ನಲೆ ತಾಲೂಕಿನ ಕಠಳ್ಳಿ ಗ್ರಾಮದಲ್ಲಿ ಮಂಗಳವಾರ ನಡೆದ ಐತಿಹಾಸಿಕ ಬೀರಲಿಂಗೇಶ್ವರ ದೇವರ ಪಲ್ಲಕ್ಕಿ ಉತ್ಸವಕ್ಕೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಚಾಲನೆ ನೀಡಿದರು.

ಬೀರಲಿಂಗೇಶ್ವರ ದೇವರ ಉತ್ಸವ ಮೂರ್ತಿಗೆ ಧಾರ್ಮಿಕ ಪರಂಪರೆಯಂತೆ ಪೂಜೆ ಸಲ್ಲಿಸಿಸಲಾಯಿತು. ಐತಿಹಾಸಿಕ ಕೆರೆಯಲ್ಲಿ ಉತ್ಸವ ಮೂರ್ತಿಗೆ ಗಂಗಾ ಸ್ನಾನ ಮಾಡಿಸಿ ವಿಶೇಷ ಪೂಜೆ ನೆರವೇರಿಸಿ, ಬಳಿಕ ಬಳಿಕ ಹನುಮಾನ ಮಂದಿಕ್ಕೆ ತೆರಳಿ ಕಾಯಿ ಕರ್ಪೂರ ಅರ್ಪಿಸಿ ಪಲ್ಲಕ್ಕಿ ಉತ್ಸವಕ್ಕೆ ಚಾಲನೆ ನೀಡಲಾಯಿತು. ಪಲ್ಲಕ್ಕಿ ಉತ್ಸವದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರಿಗೆ ಜಾತ್ರಾ ಮಹೋತ್ಸವ ಪದಾಧಿಕಾರಿಗಳು ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣನ ಚಿತ್ರ ನೀಡಿ ಗೌರವಿಸಿದರು.



ಬೀರಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಸಮುದಾಯದ ಭವನ ನಿರ್ಮಾಣಕ್ಕಾಗಿ ವಿಧಾನ ಪರಿಷತ್ ಸದಸ್ಯರಾದ ಡಾ. ಚಂದ್ರಶೇಖರ ಪಾಟೀಲ್, ಭೀಮರಾವ ಪಾಟೀಲ್ ಹಾಗೂ ಸಂಸದ ಸಾಗರ ಖಂಡ್ರೆ ಅವರ ಅನುದಾನದಲ್ಲಿ ಅನುದಾನ ನೀಡುವಂತೆ ಒತ್ತಾಯಿಸಲಾಗುದು.

**–ರಾಜಶೇಖರ ಪಾಟೀಲ್**
**ಮಾಜಿ ಸಚಿವ, ಹುಮನಾಬಾದ್**

ಕಠಳ್ಳಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಜರುಗಿದ ಪಲ್ಲಕ್ಕಿ ಉತ್ಸವ ಮೆರವಣಿಗೆಯಲ್ಲಿ ಡೊಳ್ಳು ಕುಣಿತ ಸೇರಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರರ ಗಮನ ಸೆಳೆದವು.

ಈ ಸಂದರ್ಭದಲ್ಲಿ ಬಸವರಾಜ ಪಾಟೀಲ್, ವೀರಣ್ಣ ಜಮಾದಾರ್, ಗುಂಡಪ್ಪ ಪೂಜಾರಿ, ಸಿದ್ದು ಚಾಂಗಲೇರಾ, ಶ್ರೀನುವಾಸ ಪೂಜಾರಿ, ಹಣಮಂತ ಚಾಂಗಲೇರಿ, ಜಗನಾಥ ನವಲೆ, ಅಮೃತ ಮರಕುಂದಿ, ಸಂಜುಕುಮಾರ ಮರಕುಂದಿ, ಮಹೇಶ ಪೂಜಾರಿ, ಆಕಾಶ ಪೂಜಾರಿ, ಲೋಕೆಶ್ ಜಮಾದಾರ, ಅನಿಲ ದೊಡ್ಡಿ, ರಮೇಶ ಪೂಜಾರಿ, ಶಿವಶರಣ ಚಾಂಗಲೇರಿ ಸೇರಿ ಉತ್ಸವ ಸಮಿತಿ ಪದಾಧಿಕಾರಿಗಳು ಇದ್ದರು.

# ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ತರಬೇತಿ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ – ಹುಲಸೂರ :– ಜೂ 10 ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ಸಲುವಾಗಿ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ತರಬೇತಿ ನೀಡಲಾಯಿತು. ಈ ತರಬೇತಿಯನ್ನು ತಹಸೀಲ್ದಾರರಾದ ಶಿವಾನಂದ ಮೇತ್ರೆ ಮಾತನಾಡಿ ಈಗಾಗಲೇ ಪ್ರತಿಯೊಂದು ಮತಗಟ್ಟೆವಾರು ತಮ್ಮ ಹತ್ತಿರ ಮತದಾರರ ಪಟ್ಟಿಯಿದೆ. ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯಲ್ಲಿ ಏನಾದರು ತಿದ್ದುಪಡಿ, ಸೇರ್ಪಡೆ, ಅಳಿಸುವುದು, ಹೊಸ ಭಾವಚಿತ್ರ ಅಳವಡಿಸುವುದು ಮತ್ತು ಸ್ಥಳಾಂತರ ಗೊಳಿಸುವ ಇದ್ದರೆ ತ್ವರಿತವಾಗಿ ಕಾರ್ಯಪರ್ವತರಾಗಿ.

ಮುಂಬರುವ ತಾಲೂಕಾ ಮತ್ತು ಜಿಲ್ಲಾ ಪಂಚಾಯತ ಚುನಾವಣಾ ಸಂಬಂಧ ತಮ್ಮ ಮತದಾರರ ಪಟ್ಟಿಯಲ್ಲಿರುವ ಗಣ್ಯ ವ್ಯಕ್ತಿಗಳ ಮತದಾರರ ಪಟ್ಟಿಯಲ್ಲಿ ಹೆಸರು ಕೈ ಬಿಡದಂತೆ ಎಚ್ಚರ ವಹಿಸಬೇಕು. ತಮ್ಮ ಬಿಎಲ್‌ಓ ಯಾಪ್ ನಲ್ಲಿ ಪ್ರತಿದಿನ ಬಂದ ಅರ್ಜಿಗಳನ್ನು ವಿಲೇವಾರಿ ಮಾಡಬೇಕು ಹಾಗೂ

ವಿಶೇಷ ಅರ್ಹತಾ ದಿನಾಂಕದವರೆಗೆ ಮತದಾರರ ಪಟ್ಟಿ ಪರಿಷ್ಕರಣೆ ಆಗಬೇಕು. ಕೆಲವು ಮತಗಟ್ಟೆಯಲ್ಲಿ 1200 ಕ್ಕಿಂತ ಹೆಚ್ಚು ಮತದಾರರಿದ್ದರೆ ಅದೇ ಕಾಂಪೌಂಡನಲ್ಲಿ ಇನ್ನೊಂದು ಮತಗಟ್ಟೆಯಲ್ಲಿ ಕಡಿಮೆ ಮತದಾರರ ಪಟ್ಟಿಯಲ್ಲಿ ಹೆಸರು ಸ್ಥಳಾಂತರ ಗೊಳಿಸಬೇಕು ಎಂದರು.

ಈ ಚುನಾವಣೆ ತರಬೇತಿ ಮಾಸ್ಟರ್ ಟ್ರೈನರ್ ಸಂಜೀವಕುಮಾರ ನಡುಕರ ಮಾತನಾಡಿ ಈಗಾಗಲೇ ತಾವುಗಳು ಪರಿಶಿಷ್ಟ ಜಾತಿ ಗಣತಿ ಕಾರ್ಯದಲ್ಲಿ ನಿರತವಾಗಿದ್ದು ಅತ್ಯುತ್ತಮ ಕಾರ್ಯ ಮಾಡುತ್ತಿದ್ದಿರಿ. ಮತದಾರರ ಪಟ್ಟಿಯಲ್ಲಿ ಮತದಾರರ ಫೋಟೋ ಬಹಳ ಹಳೆಯದಾದರೆ ಹೊಸ ಫೋಟೋ ಹಾಕಿ, 17 ವರ್ಷ ಮೇಲ್ಪಟ್ಟ ಯುವಕ ಮತ್ತು ಯುವತಿಯವರ ಹೆಸರನ್ನು ಚುನಾವಣಾ ಗುರುತಿನ ಚೀಟಿ ಪಡೆಯಲು ಅರ್ಜಿ ಹಾಕಬಹುದು. 18 ವರ್ಷ ಪೂರ್ಣಗೊಂಡಾಗ ತನ್ನಿಂತಾನೇ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೊಳ್ಳುತ್ತದೆ.

ನಮೂನೆ,6,7ಮತ್ತು 8 ಅರ್ಜಿಗಳು ಬಂದರೆ ವಿಲೇವಾರಿ ಮಾಡುತ್ತಾ ಚುನಾವಣೆ ಶಾಖೆ–ಯ ಶಿರಸ್ತೆದಾರರಿಗೆ ಪ್ರತಿದಿನ ಮಾಹಿತಿ ನೀಡಿ ಎಂದರು.

ಈ ತರಬೇತಿಯಲ್ಲಿ 48 ಮತಗಟ್ಟೆಯ ಮತಗಟ್ಟೆ ಮಟ್ಟದ ಅಧಿಕಾರಿಗಳು ಹಾಜರಿದ್ದರು.

ಜು. 19ರಂದು ಗಡಿನಾಡು ಕನ್ನಡ ಸಮಾವೇಶ

# ಭಿತ್ತಿಪತ್ರ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಕನ್ನಡ ಸೇನೆ ಕರ್ನಾಟಕ ಸಂಘಟನೆ ವತಿಯಿಂದ ಜೂನ್ 19ರಂದು ಬೀದರ್‌ನ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ನಡೆಯಲಿರುವ ಗಡಿನಾಡು ಕನ್ನಡ ಜಾಗೃತಿ ಸಮಾವೇಶದ ಭಿತ್ತಿಪತ್ರವನ್ನು ತಾಲೂಕಿನ ತಹಶೀಲ್ದಾರ್ ಮಂಜುನಾಥ್ ಪಂಚಾಳ, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ ಅವರು ಮಂಗವಾರ ಪಟ್ಟಣದಲ್ಲಿ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ. ವಿಜಯ್ ಹಿರಸಕ್ಕರ್, ಪಿಎಸ್‌ಐ ಬಾಷುಮಿಯಾ ಕೊಂಚೂರ್, ಪಟ್ಟಣದ ಪ್ರಮುಖರಾದ ದಿಲೀಪಕುಮಾರ್ ಬಗ್ದಲಕ್ಕರ್, ಮಲ್ಲಿಕಾರ್ಜುನ ಪಾಟೀಲ್, ನಸೀರ್ ಹಕ್ಕಿಮ್, ಬಾಬಾ ಆರ್.ಸಿ.ಸಿ. ಶಾಮರಾವ ಭುತ್ತಾಳೆ, ಶರಣು ಗಡಮಿ, ಜಗನಾಥ ಗಾದಾ, ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ, ರಮೇಶ ಧೂಳ, ಹಮೀದ್, ಸಾಬೇರ್, ತಾಲುಕಾಧ್ಯಕ್ಷ ಪವನ ಪೂಜಾರಿ, ಕಸಾಪ ತಾಲುಕಾಧ್ಯಕ್ಷ ಅನೀಲಕುಮಾರ್ ಸಿಂಧೆ, ರಾಜಕುಮಾರ ಆರ್. ಹಡಪದ, ಸತೀಶ್ ಗಂಜಿ, ರವೀಂದ್ರರೆಡ್ಡಿ ರಾಂಪುರ, ಸುಧಾ–ಕರ ಹುಡಗಿ, ಶಿವರಾಜ ಸ್ವಾಮಿ ಫಾತ್ಮಪುರ್ ಹಾಗೂ ಕನ್ನಡ ಸೇನೆ ಕಾರ್ಯಕರ್ತರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಅರಿವು ಕೇಂದ್ರದ ಸಲಹಾ ಸಮಿತಿಗೆ ಸದಸ್ಯರಿಗೆ ತರಬೇತಿ

# ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಅರಿವು ಕೇಂದ್ರಗಳು ತುಂಬಾ ಸಹಾಯಕ: ಇಒ ಸುಲ್ಫಿ



ಬಸವಕಲ್ಯಾಣ: ನಗರದ ತಾ.ಪಂ.ಸಾಮರ್ಥ್ಯ ಸೌಧದಲ್ಲಿ ಮಂಗಳವಾರ ನಡೆದ ತರಬೇತಿ ಕಾರ್ಯಕ್ರಮವನ್ನು ತಾ.ಪಂ. ಕಾ.ನಿ.ಅ.ರಮೇಶ ಸುಲ್ಫಿ ಅವರು ಉದ್ಘಾಟಿಸಿ ಮಾತನಾಡಿದರು.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ವಿದ್ಯಾರ್ಥಿಗಳಿಗೆ ಮತ್ತು ಗ್ರಾಮಸ್ಥರಿಗೆ ಅನೂಕುಲವಾಗುವ ದೃಷ್ಟಿಯಿಂದ ಸರ್ಕಾರ ಗ್ರಾಮೀಣ ಮಟ್ಟದಲ್ಲಿ ಪ್ರಾರಂಭಿಸಲಾದ ಅರಿವು ಕೇಂದ್ರಗಳನ್ನು ಸಮಯಕ್ಕೆ ಸರಿಯಾಗಿ ತೆಗೆಯುವ ಮೂಲಕ ಎಲ್ಲರು ಸದುಪಯೋಗ ಪಡೆದುಕೊಳ್ಳುವಂತೆ ಮಾಡಬೇಕು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಮೇಶ ಸುಲ್ಫಿ ಹೇಳಿದರು.

ಅಬ್ದುಲ್ ನಜೀರ ಸಾಬ್ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ ಸಂಯುಕ್ತಾಶ್ರಯದಲ್ಲಿ ತಾ.ಪಂ.ಸಾಮರ್ಥ್ಯ ಸೌಧದಲ್ಲಿ ಮಂಗಳವಾರ ಅರಿವು ಕೇಂದ್ರದ ಸಲಹಾ ಸಮಿತಿ ಸದಸ್ಯರಿಗೆ ಹಮ್ಮಿಕೊಂಡ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಅರಿವು ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಅನೂಕೂಲವಾಗುವಂತ ಸ್ಪರ್ಧಾತ್ಮಕ ಪರೀಕ್ಷೆ ಸಂಬಂಧ ಪಟ್ಟ ಪುಸ್ತಕಗಳು ಸೇರಿದಂತೆ ಸಂಬಂಧ ಪಟ್ಟ ಪುಸ್ತಕಗಳನ್ನು ಇಡಬೇಕು. ಒಂದು ವೇಳೆ ಇಲ್ಲದೆ ಇದ್ದಲ್ಲಿ ಸಂಬಂಧ ಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಸಲಹೆ ನೀಡಿದರು.

ಗ್ರಂಥಾಲಯ ಕೇಂದ್ರಗಳಲ್ಲಿ ಓದಿದ ಅದೇಷ್ಟೊ ಮಕ್ಕಳು ಇಂದು ಉನ್ನತ ಸ್ಥಾನದಲ್ಲಿ ಇದ್ದಾರೆ, ಹೀಗಾಗಿ ಅರಿವು ಕೇಂದ್ರದ ಸಲಹಾ ಸಮಿತಿ ಒಳಗೆ ಇರುವ ಸದಸ್ಯರು ಅರಿವು ಕೇಂದ್ರ ಸದುಪಯೋಗ ಪಡೆದುಕೊಳ್ಳುವಂತೆ ಮಕ್ಕಳಿಗೆ ತಿಳಿಸಬೇಕು ಮತ್ತು ತರಬೇತಿಯಲ್ಲಿ ನೀಡಿದ ಪ್ರತಿಯೊಂದು ವಿಷಯಗಳನ್ನು ತಿಳಿದುಕೊಂಡು ಅರಿವು ಕೇಂದ್ರದಲ್ಲಿ ಜಾರಿಗೆ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ತಾ.ಪಂ.ಸ.ನಿ.(ಪಂ.ರಾ) ಅರುಣಕುಮಾರ ಪಾಟೀಲ್, ವಿಷಯ ಪರಿವೀಕ್ಷಕ ರಾಜಕುಮಾರ ಖಂಡ್ರೆ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ರೀಜ್ವಾನ್, ದತ್ತಾತ್ರೆಯ, ಐಇಸಿ ಸಂಯೋಜಕ ವೀರಾರೆಡ್ಡಿ, ಸಂಪನ್ಮೂಲ ವ್ಯಕ್ತಿ ಸಂಜು ವಾಗ್ಮಾರೆ, ಬಿಸಿ ರಾಮಲಿಂಗಯ್ಯಾ ಸ್ವಾಮಿ ಸೇರಿದಂತೆ ಗ್ರಾಮ ಪಂಚಾಯತ್ ಅಧ್ಯಕ್ಷರು ಇದ್ದರು.

# ಪರಿಸರ ಸಂರಕ್ಷಣೆಯಿಂದ ಮಾತ್ರ ಉಳಿಗಾಲ:ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪ್ರಕೃತಿಯಲ್ಲಿ ಉಂಟಾಗುತ್ತಿರುವ ಅಸಮತೋಲನ ಹೋಗಲಾಡಿಸಲು ಪರಿಸರ ಸಂರಕ್ಷಣೆಯೊಂದಿಗೆ ಪ್ರತಿಯೊಬ್ಬರು ಗಿಡ ಮರಗಳನ್ನು ಬೆಳೆಸುವಂತ ಜವಾಬ್ದಾರಿ ಕಾರ್ಯಗತವಾಗಬೇಕೆಂದು ತಾಲೂಕಿನ ಗಡವಂತಿ ಗ್ರಾಮದ ಹತ್ತಿರ ಇರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯ ವಲಯ ಹುಮನಾಬಾದ ಆಯೋಜಿಸಿದ್ದ ವನ ಮಹೋತ್ಸವ ಹಾಗೂ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಸಸಿ ನೆಡುವ ಮೂಲಕ ಕಾರ್ಯಕ್ರಮ ಶಾಸಕ ಡಾ. ಸಿದ್ದು ಪಾಟೀಲ್ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ನೈಸರ್ಗಿಕ ಸಂಪತ್ತುಗಳಾದ ಮಣ್ಣು, ನೀರು, ಅರಣ್ಯ ಸಂರಕ್ಷಣೆ ಮಾಡಿದರೆ ನಮಗೆ ಉಳಿಗಾಲವಿದೆ ಎಂದರು. ಅರಣ್ಯ ನಾಶದಿಂದ ಮಾನವ ನಾಶವಾಗುವ ದಿನಗಳು ಬಂದಿವೆ, ಪ್ರತಿಯೊಬ್ಬರೂ ಅರಣ್ಯ ಸಂರಕ್ಷಣೆಗೆ ವಿಶೇಷ ಕಾಳಜಿ ವಹಿಸಲು ತಿಳಿಸಿದರು. ಕೊರೊನ ಮಹಾಮಾರಿಯಲ್ಲಿ ಆಮ್ಲಜನಕ ಕೊರತೆಯ ಅನುಭವ ಅನುಭವಿಸಿದ್ದೇವೆ, ಆಮ್ಲಜನಕ ಉತ್ಪಾದಿಸುವಂತಹ ಗಿಡ ಮರಗಳನ್ನು ಸಂರಕ್ಷಿಸಿ ಬೆಳೆಸಬೇಕು ಎಂದರು. ಅತಿಯಾದ ಪ್ಲಾಸ್ಟಿಕ್ ಬಳಕೆ, ಕೆರೆ, ಕಟ್ಟೆಗಳಲ್ಲಿ ನೀರಿಲ್ಲದೆ ಅಂತರ್ಜಲ ಕುಸಿತಕ್ಕೆ ಒಳಾಗುತ್ತಿರುವುದು ಸಹ ಪರಿಸರ ನಾಶಕ್ಕೆ ಕಾರಣವಾಗುತ್ತಿದೆ ಎಂದರು. ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಮಾತನಾಡಿ, ಎಲ್ಲರೂ ಕಡ್ಡಾಯವಾಗಿ ತಮ್ಮ ಹುಟ್ಟು ಹಬ್ಬದ ಸವಿ ನೆನಪುಗಾಗಿ ಗಿಡ ಮರಗಳನ್ನು ಬೆಳಸಬೇಕು, ಅರಣ್ಯ ಇಲಾಖೆಯವರು ಹಣ್ಣಿನ ಗಿಡಗಳನ್ನು ಬೆಳೆಸಲು ಸಲಹೆ ನೀಡಿದರು. ಅರಣ್ಯ ಸಚಿವರು ನಮ್ಮ ಜಿಲ್ಲೆಯವರೇ ಆಗಿರುವುದರಿಂದ ಬೀದರ್ ಜಿಲ್ಲೆಯಲ್ಲಿ ಹೆಚ್ಚಿನ ಮರ ಗಿಡಗಳನ್ನು ಬೆಳೆಸಲು ಸಹಾಯವಾಗಿದೆ ಎಂದರು. ಸದಾಶಿವಯ್ಯಾ ವಿಭೂತ್ತಿ ಮಾತನಾಡಿ, ಪ್ರತಿಯೊಬ್ಬರು ಕಡ್ಡಾಯವಾಗಿ ಮನೆ ಅಂಗಳದಲ್ಲಿ ಔಷಧೀಯ ಸಸ್ಯಗಳಾದ ತುಳಸಿ, ಅಮೃತ ಬೆಳಿ, ನೆಲನೆಲ್ಲಿ ಬೆಳಸಬೇಕು ಹಾಗೂ ಅರಣ್ಯ ಇಲಾಖೆಯವರು ಈ ಔಷಧಿ ಸಸ್ಯಗಳು ಬೆಳೆಸಲು ಮನವಿ ಮಾಡಿದರು.

ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ, ಪ್ಲಾಸ್ಟಿಕ್ ಮಾಲಿನ್ಯ ಹೋಗಲಾಡಿಸಲು ಪ್ರತಿಯೊಬ್ಬರೂ ಪ್ಲಾಸ್ಟಿಕ್ ನಿಷೇಧ ಸಂಕಲ್ಪ ಮಾಡಬೇಕು ಎಂದರು. ಈ ವರ್ಷದ ವಿಶ್ವ ಪರಿಸರ ದಿನಾಚರಣೆಯ ಘೋಷ ವ್ಯಾಖ್ಯಾವಾದ ಪ್ಲಾಸ್ಟಿಕ್ ಮಾಲಿನ್ಯ ಹೋಗಲಾಡಿಸಿ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕು ಎಂದರು. ಪ್ರಾದೇಶಿಕ ವಲಯ ಅರಣ್ಯಧಿಕಾರಿ ಐಶ್ವರ್ಯ ಗೊಬ್ಬುರ್, ಸಾಮಾಜಿಕ ವಲಯ ಅರಣ್ಯಾಧಿಕಾರಿ ಉಮಾ ನಾಯಕ, ಉಪ ವಲಯ ಅರಣ್ಯ ಅಧಿಕಾರಿಗಳಾದ ಅಂಬಾದಾಸ್, ರೌಫ್ ಖಾನ ಹಾಗೂ ಕಾಲೇಜಿನ ಪ್ರಾಂಶುಪಾಲರು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಚಿಟಗುಪ್ಪ:ಕಾರ ಹುಣ್ಣಿಮೆ ಖರೀದಿ ಬಲು ಜೋರು

(ರಾಜಕುಮಾರ ಆರ್ ಹಡಪದ)




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಮುಂಗಾರಿನ ಮೊದಲ ಹಬ್ಬ ಕಾರಹುಣ್ಣಿಮೆ ಸಂಭ್ರಮದಿಂದ ಆಚರಿಸಲು ಪಟ್ಟಣ ಸೇರಿದಂತೆ ತಾಲ್ಲೂಕಿನಾದ್ಯಂತ ರೈತರು ಭರದ ಸಿದ್ಧತೆಯಲ್ಲಿ ತೊಡಗಿದ್ದಾರೆ. ಚಿಟಗುಪ್ಪ ಪಟ್ಟಣದ ಸುತ್ತಮುತ್ತಲಿನ ಕೋಡಂಬಲ್, ರಾಂಪುರ, ಇಟಗಾ, ಫಾತ್ಮಪುರ್, ಮುಸ್ತರಿ, ಬೆಳಕೇರಾ, ಮಾಡಗುಳ, ಬನ್ನಳ್ಳಿ, ನಿರ್ಣಾ, ಮುತ್ತಂಗಿ, ಮದರಗಿ, ಮನ್ನಾಖೇಳಿ, ಬೆಮಳಖೇಡಾ, ಚಾಂಗಲೇರಾ, ಮೀನಕೇರಾ, ತಾಳಮಡಗಿ, ಮಂಗಲಗಿ ಸೇರಿದಂತೆ ಇತರೆ ಕಡೆ ಉತ್ತಮ ಮಳೆಯಾಗಿದ್ದು, ರೈತರು ಬಿತ್ತನೆ ಕಾರ್ಯದ ಸಿದ್ಧತೆಯಲ್ಲಿ ಇರುವಾಗ ಈ ಹಬ್ಬ ಬಂದಿದ್ದು, ಖುಷಿ ಇಮ್ಮಡಿಗೊಳಿಸಿದೆ. ಹಬ್ಬದ ಮೊದಲ ದಿನ ರೈತರು ವಿವಿಧ ರೀತಿಯ ಸಿದ್ಧತೆಯಲ್ಲಿ ತೊಡಗಿಸಿಕೊಂಡಿರುವುದು ಕಂಡು ಬಂದಿದೆ. ಚಿಟಗುಪ್ಪ ಪಟ್ಟಣದ ಬಸವೇಶ್ವರ ವೃತ್ತದ ಹತ್ತಿರ ಸುಮಾರು ಹತ್ತಾರು ಅಂಗಡಿಗಳನ್ನು ಹಾಕಲಾಗಿದೆ. ರೈತರು ಬಣ್ಣ ಬಣ್ಣದ ಜೂಲಾ, ಮಗಡಾ, ಹಣಿಗಜ್ಜಿ, ಬಾರಕೋಲು, ಹಣಿ ಪಟ್ಟಿ, ಗಂಟೆಸರ ಇನ್ನೂ ಇತ್ಯಾದಿ ವಸ್ತುಗಳ ಖರೀದಿಸುವಲ್ಲಿ ನಿರಂತರಾಗಿದ್ದಾರೆ. ಮುಂಗಾರು ಮೊದಲ ಹಬ್ಬವಾಗಿದ್ದರಿಂದ ರೈತರು ಸಂಭ್ರಮದಿಂದ ಕಾರಹುಣ್ಣಿಮೆ ಆಚರಿಸಿ ಕೃಷಿ ಕೆಲಸಕ್ಕೆ ಚಾಲನೆ ನೀಡುತ್ತಾರೆ. ದನಕರುಗಳಿಗೆ ಶೃಂಗರಿಸಿ ಪ್ರಜೆ ಸಲ್ಲಿಸುತ್ತಾರೆ. ಆಧುನಿಕ ಯುಗದಲ್ಲಿ ಹೊಸ ಯಂತ್ರೋಪಕರಣಗಳ ಬಳಕೆ ಮಾಡುತ್ತಿದ್ದರೂ ಎತ್ತುಗಳ ಸಹಾಯದಿಂದ ಮಾಡುವ ಕೃಷಿಯಿಂದ ಹೆಚ್ಚು ಲಾಭ ಎಂಬುವುದು ಹಲವು ರೈತರ ಬಲವಾದ ನಂಬಿಕೆಯಾಗಿದೆ. ಹೀಗಾಗಿ ಪ್ರತಿ ವರ್ಷ ಕಾರ ಹುಣ್ಣಿಮ ನಿಮಿತ್ತ ಮನೆ ಇಲ್ಲವ ಹೊಲಗಳಲ್ಲಿ ಕಟ್ಟಲಾದ ಧನ–ಕರುಗಳನ್ನು ಸ್ವಚ್ಛವಾಗಿ ಸ್ನಾನ ಮಾಡಿಸಿ ಬಣ್ಣ ಬಳಿಯುತ್ತಾರೆ. ಕೋಡುಗಳಿಗೆ ಬಣ್ಣ, ಗೊಂಡೆ ಕಟ್ಟುವ ರೂಢಿ.

ಕರಡಿದಾರ, ಗೊಂಡೆ, ದಾಂಡ, ಕಾಲುಗೆಜ್ಜೆ, ಹುರಿಗೆಜ್ಜೆ, ಸೇರಿ ಇನ್ನಿತರ ವಸ್ತುಗಳಿಂದ ಸಿಂಗರಿಸಿ ಪೂಜೆ, ನೈವೇದ್ಯ ಸಲ್ಲಿಸಿ ಕೃತಾರ್ಥರಾಗುತ್ತಾರೆ. ಕಾರಹುಣ್ಣಿಮೆ ದಿನ ಎತ್ತುಗಳಿಗೆ ಸಾಮೂಹಿಕವಾಗಿ ಬಣ್ಣ ಹಚ್ಚಿ ಅಲಂಕಾರಿಕ ವಸ್ತುಗಳಿಂದ ಶೃಂಗರಿಸಲಾಗುತ್ತದೆ. ಮಧ್ಯಾಹ್ನ ಊರಲ್ಲಿ ಎತ್ತುಗಳ ಆದ್ಧೂರಿಯಾಗಿ ಮೆರವಣಿಗೆ ನಡೆಯುತ್ತದೆ. ಕಾರ ಹುಣ್ಣಿಮೆ ರೈತರಿಗೆ ಪ್ರಮುಖ ಹಬ್ಬ ಇದನ್ನು ವಿಶಿಷ್ಟ ರೀತಿಯಲ್ಲಿ ಆಚರಿಸುವ ಮೂಲಕ ಈ ವರ್ಷದ ಮಳೆ ಚೆನ್ನಾಗಿ ಬಂದು ಉತ್ತಮ ಫಸಲು ದೊರೆಯಲಿ ಎಂದು ದೇವರಲ್ಲಿ ಬೇಡಿಕೊಳ್ಳುತ್ತೇವೆ ಎಂದು ರೈತರು ತಿಳಿಸಿದ್ದಾರೆ.

**CHANGE OF NAME**

I Ashwini D/o Madhav Jadhav (old Name) R/o Korali Tq:Nilanga Dist: Latur, Maharashtra.

I Have Changed my Name to Ankita Pravin Akade W/o Pravin Akade (New Name) R/o Korali Tq:Nilanga Dist: Latur, Maharashtra. Vide Affidavit, Dated:19-05-2025 Sworm before Notary by Dayanand Nagarale.

# ರೈತರ ವಿವಿಧ ಬೇಡಿಕೆ ಈಡೇರಿಕೆಗಾಗಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘದಿಂದ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಪಟ್ಟಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ರೈತರ ವಿವಿಧ ಬೇಡಿಕೆ ಹಾಗೂ ಪಟ್ಟಣದ ಸಮಸ್ಯೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮಂಗಳವಾರ ರಾಘವೇಂದ್ರ ಸ್ವಾಮಿಗಳ ಮಠದಿಂದ ಮಹಾಮಾಯ ದೇವಸ್ಥಾನದ ತೇರಿನಗಡ್ಡಿ, ಬಾಬಾ ಸಾಹೇಬ್ ಅಂಬೇಡ್ಕರ್ ವೃತ್ತ ಮಾರ್ಗವಾಗಿ ಶಿರೂರು ಶ್ರೀ ವೀರಭದ್ರಪ್ಪ ವೃತ್ತದವರೆಗೂ ಕಾಲ್ನಡಿಗೆಯ ಮುಕಾಂತರ ನೆಡೆದು ಬಂದು ತಾಸಿಲ್ದಾರರಿಗೆ ಮನವಿ ಸಲ್ಲಿಸಲಾಯಿತು. ಈ ವೇಳೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಈಶಪ್ಪ ಸಬರದ ಮಾತನಾಡುತ್ತಾ ಕುಕನೂರ ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಹೆಸರಿಗೆ ಮಾತ್ರ ಸ್ಥಾಪನೆಯಾಗಿದ್ದು ಇಲ್ಲಿಯ ತನಕ ಟೆಂಡರ್ ಪ್ರಕ್ರಿಯೆ ಪ್ರಾರಂಭಗೊಂಡಿರುವುದಿಲ್ಲ. ಕೇವಲ ಹೆಸರಿಗೆ ಮಾತ್ರ ದೃಷ್ಟಿ ಬೊಂಬೆಯಂತಿದ್ದು ಇಲ್ಲಿಯತನಕ ರೈತರಿಗೆ ಯಾವುದೇ ರೀತಿಯ ಪ್ರಯೋಜನವಾಗಿರುವುದಿಲ್ಲ. ಆದ್ದ–ರಿಂದ ತಕ್ಷಣ ಟೆಂಡರ್ ಪ್ರಕ್ರಿಯೆ ನಡೆಸುವುದರೊಂದಿಗೆ ಹೆಸರು ಮತ್ತು ಇತರ ಬೆಳೆಗಳಿಗೆ ಬೆಂಬಲ ಬೆಲೆ ನೊಂದಣಿ ಪ್ರಕ್ರಿಯೆಯನ್ನು ಬೆಳೆ ಬರುವ ಪೂರ್ವದಲ್ಲಿ ಘೋಷಿಸಬೇಕು ಪ್ರತಿಸಲ ರೈತರ ಬೆಳೆ ಮಾರಾಟವಾಗುವ ವೇಳೆಗೆ ಬೆಂಬಲ ಬೆಲೆ ಘೋಷಣೆ ಮಾಡಿ ರೈತರಿಗೆ ಸರ್ಕಾರ ಅನ್ಯಾಯ ಮಾಡುತ್ತಿದೆ ಆದ್ದರಿಂದ ಬೆಳೆ ಬರುವ ಪೂರ್ವದಲ್ಲಿ ಬೆಂಬಲ ಬೆಲೆ ಘೋಷಿಸಬೇಕು ಎಂದು ಒತ್ತಾಯಿಸಿದರು. ಪಟ್ಟಣದ ಕಸ ವಿಲೇವಾರಿ ಘಟಕದ ಕಾಮಗಾರಿ ಸಂಪೂರ್ಣ ಕಳಪೆ ಮಟ್ಟದಿಂದ ಕೂಡಿದ್ದು ಸಾಕಷ್ಟು ಬಾರಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸುತ್ತಿದ್ದರು ಸಹಿತ ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಸಂಶಯ ಆಸ್ಪದವಾಗಿದ್ದು ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ ಅಧಿಕಾರಿಗಳ ವಿರುದ್ಧವೇ ಪ್ರತಿಭಟನೆ ಪ್ರಾರಂಭಿಸಲಾಗುವುದು ಎಂದು ಹೇಳಿದರು. ಮನವಿ ಸ್ವೀಕರಿಸಿದ ತಹಸಿಲ್ದಾರ ಪ್ರಾಣೇಶ್ ಮಾತನಾಡಿ ಪ್ರತಿಭಟನಾಕಾರರು ನೀಡಿದ ಮನವಿಯನ್ನು ಶೀಘ್ರದಲ್ಲಿ ಮೇಲಾಧಿಕಾರಿಗಳಿಗೆ ರವಾನಿಸುವುದರೊಂದಿಗೆ ರೈತರ ಸಮಸ್ಯೆಗೆ ಸ್ಪಂದಿಸುವುದಾಗಿ ಮನವಿ ಮಾಡಲಾಗುವುದು ಎಂದು ಹೇಳಿದರು.

ವೇಳೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಉಪಾಧ್ಯಕ್ಷ ಅಂದಪ್ಪ ಹುರಳಿ, ರೈತ ಮುಖಂಡರಾದ ಬಸವರಾಜ ಸಬರದ, ಶಿವು ಭಂಗಿ, ಹನುಮಪ್ಪ ಮರಡಿ ಉಪಾಧ್ಯಕ್ಷರು, ಬಸಪ್ಪ ಲಾಲ್ ಗುಂಡೂರ , ವೀರಯ್ಯ ತೆ–ೂಂಟದಾರ್ಯ ಮಠ, ಈರಪ್ಪ ಈಬೇರಿ, ಮಹಮ್ಮದ್ ರಫಿ ಸವಣೂರು, ಉಮೇಶ್ ಬಿದವಟ್ಟಿ, ಶಿವಪ್ಪ ಯತ್ನಟ್ಟಿ, ಕೆಂಚಪ್ಪ, ಈರಪ್ಪ ಗುಳಗಣ್ಣನವರ್, ಮಹದೇವಪ್ಪ ಕುರಿ, ವೀರಪ್ಪ ಕೂಡ್ಲೂರು, ಬಸಪ್ಪ ಮಂಡಲಗೇರಿ, ಪದಾಧಿಕಾರಿಗಳು ಕಾರ್ಯಕರ್ತರು ಮತ್ತು ರೈತರು ಪಾಲ್ಗೊಂಡಿದ್ದರು.

# ಜೆಸ್ಕಾಂ ಗ್ರಾಹಕರ ಕುಂದುಕೊರತೆ ಸಭೆ

ರಾಯಚೂರು ಜೂನ್ 10– ಜಿಲ್ಲೆಯ ವಿವಿಧ ತಾಲೂಕಿನ ಜೆಸ್ಕಾಂ ಉಪ ವಿಭಾಗಗಳ ಕಚೇರಿಯಲ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಅಭಿಯಂತರರ ಅಧ್ಯಕ್ಷತೆಯಲ್ಲಿ ಜೂನ್ 23 ರಿಂದ ಜೂನ್ 27ರವರೆಗೆ ಗ್ರಾಹಕರ ಕುಂದು–ಕೊರತೆ ಸಭೆ ಏರ್ಪಡಿಸಲಾಗಿದೆ.

ಜೂನ್ 23ರ ಬೆಳಿಗ್ಗೆ 11 ಗಂಟೆಗೆ ರಾಯಚೂರು ನಗರ ಉಪ ವಿಭಾಗ ಕಚೇರಿ 01, ಜೂನ್ 25ರ ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ಸಿಂಧನೂರು ಹಾಗೂ ಜೂನ್ 27ರ ಬೆಳಿಗ್ಗೆ 11ಗಂಟೆಗೆ ಮಸ್ಕಿಯಲ್ಲಿ ಗ್ರಾಹಕರ ಕುಂದು–ಕೊರತೆ ಸಭೆ ಹಮ್ಮಿಕೊಳ್ಳಲಾಗಿದೆ

# ನಿಧನ ವಾರ್ತೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : – ಜೂ 10 ನಗರದ ನಿವಾಸಿ ಪ್ರಲ್ಹಾದರಾವ ಬುಯೆ ( 75 ವರ್ಷ) ಮಂಗಳವಾರ ಅನಾರೋಗ್ಯದಿಂದ ನಿಧನ ಹೊಂದಿದ್ದು , ಇವರಿಗೆ ಇಬ್ಬರು ಪುತ್ರರು ಹಾಗೂ ಐದು ಜನ ಪುತ್ರಿಯರು ಸೇರಿ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅವರ ಅಂತ್ಯ ಸಂಸ್ಕಾರ ಜೂನ್ 11 ರ ಬೆಳಗ್ಗೆ 11 ಗಂಟೆಗೆ ಖಾನಾಪುರ ರಸ್ತೆಯಲ್ಲಿರುವ ಸಾರ್ವಜನಿಕ ಸ್ಮಶಾನದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

# ಕೆಲಸದ ಜೊತೆಗೆ ಆರೋಗ್ಯದ ಸುರಕ್ಷತೆ ವಹಿಸಿ–ಪ್ರಿಯದರ್ಶಿನಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲ್ಲೂಕಿನ ಕಿಡದಾಳ ಮುಖ್ಯ ರಸ್ತೆಯ ಬದಿಯಲ್ಲಿರುವ ಕೋಳಿ ಪೌಲ್ಟ್ರಿಫಾರ್ಮನ ಮಹಿಳಾ ಕಾರ್ಮಿಕರಿಗೆ ಶುಚಿತ್ವ,ಆರೋಗ್ಯ ಜಾಗೃತಿ ಮತ್ತು ಕೌಟುಂಬಿಕ ಕಾನೂನು ಸಲಹಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಮಾತನಾಡಿ ಮಹಿಳೆಯರು ಶ್ರಮ ಜೀವಿಗಳಾಗಿದ್ದು ಹೆಚ್ಚು ಒತ್ತಡದೊಂದಿಗೆ ಕುಟುಂಬ ನಿರ್ವಹಣೆ ಮಾಡುತ್ತೇವೆ. ಮಾನಸಿಕ ಒತ್ತಡವು ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ನಾವು ಕೆಲಸ ಮಾಡುವ ಸ್ಥಳದಲ್ಲಿ ನಮ್ಮ ರಕ್ಷಣೆ ಮತ್ತು ಆರೋಗ್ಯ ಸುರಕ್ಷತಾ ಕ್ರಮಗಳನ್ನು ತಿಳಿದುಕೊಂಡಿರಬೇಕು. ದೌರ್ಜನ್ಯದ ವಿರುದ್ಧ ಧ್ವನಿಯಾಗಬೇಕು ಕೌಟುಂಬಿಕ ಗುಪ್ತ ಸಮಸ್ಯೆಗಳನ್ನು ಆಪ್ತ ಸಮಾಲೋಚನೆ ಮೂಲಕ ಪರಿಹಾರ ಕೊಂಡುಕೊಳ್ಳಬೇಕು. ಕುಟುಂಬದಲ್ಲಿ ದುಶ್ಚಟಗಳಿಗೆ ಬಲಿಯಾದವರಿಗೆ ಸೂಕ್ತ ಸಲಹೆ ಮಾರ್ಗದರ್ಶನದೊಂದಿಗೆ ನಶಾಮುಕ್ತರನ್ನಾಗಿ ಮಾಡಲು ಶ್ರಮವಹಿಸಿ. ಮಹಿಳೆಯರು ಸ್ವಾವಲಂಬಿ ಬದುಕು ಸಾಗಿಸುವ ಯೋಚನೆಯೊಂದಿಗೆ ಇತರರಿಗೆ ಮಾದರಿಯಾಗಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಸಮಾಜದ ಮುಖ್ಯ ವಾಹಿನಿಗೆ ಪರಿಚಯವಾಗಬೇಕೆಂದರು. ಕೆಲಸ ಮಾಡುವ ಜಾಗದಲ್ಲಿ ಆರೋಗ್ಯ ಸುರಕ್ಷತೆಗೆ ಹೆಚ್ಚಿನ ಕಾಳಜಿ ವಹಿಸಿ ಎಂದರು.

ಕಾರ್ಯಕ್ರಮದಲ್ಲಿ ಕೌಟುಂಬಿಕ ಸಲಹೆಯನ್ನು ಜಾಗೃತಿ ಸಂಸ್ಥೆಯ ಕಾರ್ಯಕರ್ತೆಯಾದ ಹುಸೇನಬಿ ತಿಳಿಸಿದರು. ಕಾರ್ಯಕ್ರಮದಲ್ಲಿ ಮಹಿಳಾ ಕಾರ್ಮಿಕರಿಗೆ ಆರೋಗ್ಯ ಸಲಹೆಯೊಂದಿಗೆ ಸುರಕ್ಷತಾ ಸಲಕರಣೆಗಳ ಬಗ್ಗೆ ಮಾಹಿತಿ ಒದಗಿಸಲಾಯಿತು. ಬಿ.ಎನ್. ಹೊರಪೇಟಿ ಮತ್ತಿರರು ಉಪಸ್ಥಿತಿ ಇದ್ದರು.

# ಸಾಹಿತ್ಯ ಓದುವ ಆಸಕ್ತಿ ಬೆಳೆಸಿಕೊಳ್ಳಿ

ಬೀದರ. ಜೂ. 10 : ಕನ್ನಡ ಸಾಹಿತ್ಯದ ಅಭಿವೃದ್ಧಿಗೆ ಎಲ್ಲರೂ ಪುಸ್ತಕ ಓದುವ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ ಹೇಳಿದರು.



ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದ ಗೌರಿಶಂಕರ ಹೋಟೆಲ್ ಸಭಾಂಗಣದಲ್ಲಿ ಈಚೆಗೆ ನಡೆದ ಸಾಹಿತಿ ವೀರೇಶ್ವರಿ ಮೂಲಗೆ ರಚಿತ ಅರಳಿದ ಸುಮ ಕಾದಂಬರಿ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಭಾಷೆ ಹಾಗೂ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾರ್ಯಕ್ರಮಗಳು ಹೆಚ್ಚು ಹೆಚ್ಚು ನಡೆಯಬೇಕು ಎಂದು ತಿಳಿಸಿದರು.

ಯುವ ಸಾಹಿತಿಗಳು ಒಂದೇ ಪ್ರಕಾರದ ಸಾಹಿತ್ಯಕ್ಕೆ ಸೀಮಿತರಾಗಬಾರದು. ವಿವಿಧ ಪ್ರಕಾರಗಳಲ್ಲಿ ಸಾಹಿತ್ಯ ಕೃಷಿ ಮಾಡಬೇಕು. ರಾಜ್ಯಮಟ್ಟದಲ್ಲಿ ಹೆಸರು ಗಳಿಸಬೇಕು ಎಂದು ಪುಸ್ತಕ ಬಿಡುಗಡೆಗೊಳಿಸಿದ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಹೇಳಿದರು.

ವೀರೇಶ್ವರಿ ಮೂಲಗೆ ಉತ್ತಮ ಸಾಹಿತಿಗಳಲ್ಲಿ ಒಬ್ಬರಾಗಿದ್ದಾರೆ. ಕಾದಂಬರಿ, ಕಥೆ, ಗಜಲ್ ಮೊದಲಾದ ಪ್ರಕಾರದ ಸಾಹಿತ್ಯ ರಚಿಸಿ ಗಮನ ಸೆಳೆದಿದ್ದಾರೆ ಎಂದು ತಿಳಿಸಿದರು.

ಉತ್ತಮ ಸಾಹಿತಿಯಾಗಿ ಹೊರ ಹೊಮ್ಮಲು ಸಾಹಿತ್ಯ ಪರಂಪರೆಯ ಅಧ್ಯಯನ ಬಹಳ ಅವಶ್ಯಕವಾಗಿದೆ ಎಂದು ಹಿರಿಯ ಸಾಹಿತಿ ಡಾ. ಎಂ.ಜಿ. ದೇಶಪಾಂಡೆ ಹೇಳಿದರು.

ಜಿಲ್ಲೆಯ ಸಾಹಿತ್ಯ ಲೋಕಕ್ಕೆ ಮಹಿಳಾ ಸಾಹಿತಿಗಳ ಕೊಡುಗೆ ಹಿರಿದಾಗಿದೆ ಎಂದು ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಭಾರತಿ ವಸ್ತ್ರದ್ ತಿಳಿಸಿದರು. ಔರಾದ್ ತಹಶೀಲ್ದಾರ್ ಮಹೇಶ ಪಾಟೀಲ ಮಾತನಾಡಿದರು. ಕಾದಂಬರಿ ಲೇಖಕಿ ವೀರೇಶ್ವರಿ ಮೂಲಗೆ ತಮ್ಮ ಅನುಭವಗಳನ್ನು ಹಂಚಿಕೊಂಡರು. ಡಾ. ಶ್ರೇಯಾ ಮಹೇಂದ್ರಕರ್ ಕಾದಂಬರಿ ಪರಿಚಯ ಮಾಡಿಕೊಟ್ಟರು.

ವಿವಿಧ ಕ್ಷೇತ್ರಕ್ಕೆ ನೀಡಿದ ಕೊಡುಗೆಗಾಗಿ ರಮೇಶ ಬಿರಾದಾರ, ಸಂತೋಷಕುಮಾರ ಜೋಳದಾಪಕೆ, ಸುಶೀಲ್ ಮೊಟ್ಟಿ ಅವರನ್ನು ಸನ್ಮಾನಿಸಲಾಯಿತು.

ಸಾಹಿತಿ ಜಗದೇವಿ ದುಬಲಗುಂಡೆ ಅಧ್ಯಕ್ಷತೆ ವಹಿಸಿದ್ದರು. ನಿರ್ಮಲಾ ಮೊಟ್ಟಿ, ವಿಶಾಲ್ ಮೊಟ್ಟಿ, ಸುಶೀಲ್ ಮೊಟ್ಟಿ, ಅಮರ ದುರ್ಗೆ ಉಪಸ್ಥಿತರಿದ್ದರು.

ಡಾ. ರಮೇಶ ಮೂಲಗೆ ಸ್ವಾಗತಿಸಿದರು. ಮಹೇಶ ಮಜಗೆ ನಿರೂಪಿಸಿದರು. ಪುಷ್ಪ ಕನಕ ವಂದಿಸಿದರು.

# ಬೈಕ್ ಸವಾರರಿಗೆ ಹೆಲ್ಮೆಟ್, ಹುಟ್ಟೂರಿಗೆ ಸಿಸಿ ಟಿವಿ ಕ್ಯಾಮೆರಾ ಕೊಡುಗೆ



ಹೆಲ್ಮೆಟ್ ವಿತರಿಸಿ ಜನ್ಮದಿನ ಆಚರಿಸಿಕೊಂಡಿದ್ದಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಕರೆ ಮಾಡಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಇದರಿಂದ ಸಾಮಾಜಿಕ ಚಟುವಟಿಕೆಯಲ್ಲಿ ತೊಡಗಲು ಇನ್ನಷ್ಟು ಪ್ರೇರಣೆ ಸಿಕ್ಕಿದೆ.

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 10 : ತಾಲ್ಲೂಕಿನ ನಾಗೋರಾ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ನರಸಪ್ಪ ಜಾನಕನೋರ ಬೈಕ್ ಸವಾರರಿಗೆ ಹೆಲ್ಮೆಟ್ ಹಾಗೂ ಹುಟ್ಟೂರಿಗೆ ಸಿಸಿ ಟಿವಿ ಕ್ಯಾಮೆರಾ ಕೊಡುಗೆಯಾಗಿ ನೀಡುವ ಮೂಲಕ ತಮ್ಮ ಜನ್ಮದಿನವನ್ನು ಈಚೆಗೆ ಅರ್ಥಪೂರ್ಣವಾಗಿ ಆಚರಿಸಿಕೊಂಡರು.

33ನೇ ಜನ್ಮದಿನದ ಪ್ರಯುಕ್ತ ತಮ್ಮ ಹುಟ್ಟೂರು ಯಾಕತಪುರದಲ್ಲಿ 33 ಬೈಕ್ ಸವಾರರಿಗೆ ಹೆಲ್ಮೆಟ್ ಉಚಿತವಾಗಿ ವಿತರಿಸಿದರು. ಗ್ರಾಮಕ್ಕೆ ವೈಯಕ್ತಿಕವಾಗಿ 3 ಸಿಸಿ ಟಿವಿ ಕ್ಯಾಮೆರಾಗಳನ್ನು ಕೊಡುಗೆಯಾಗಿ ಕೊಟ್ಟರು.

ರಸ್ತೆ ಸುರಕ್ಷತೆ ಜಾಗೃತಿ ಹಾಗೂ ಜನರ ಜೀವ ಉಳಿಸಲು ಬೈಕ್ ಸವಾರರಿಗೆ ಹೆಲ್ಮೆಟ್ ವಿತರಿಸಲಾಗಿದೆ. ಗ್ರಾಮದಲ್ಲಿ ಅಹಿತಕರ ಘಟನೆಗಳು ನಡೆಯುವುದನ್ನು ತಪ್ಪಿಸಲು ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಅಳವಡಿಸುವುದಕ್ಕಾಗಿ ಸಿಸಿ ಟಿವಿ ಕ್ಯಾಮೆರಾ ಕೊಡಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಪಿಎಸ್‌ಐ ನಂದಿನಿ ಅವರು, ನರಸಪ್ಪ ಅವರು ಸಾಮಾಜಿಕ ಕಾರ್ಯಗಳೊಂದಿಗೆ ಜನ್ಮದಿನ ಆಚರಿಸಿಕೊಂಡು ಇತರರಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.

ಪಿಡಿಒ ರಾಮಣ್ಣ, ಪಂಚಾಯಿತಿ ಸದಸ್ಯ ಸಲೀಮೊದ್ದಿನ್, ಪ್ರಮುಖರಾದ ಪಂಢರಿ ವರ್ಮಾ, ಚಂದ್ರಶೇಖರ ಪಾಟೀಲ, ಸುಧಾಕರ ರಾಜ–ಗೀರಾ, ಅಶೋಕ ಜಾನಕನೋರ ಮತ್ತಿತರರು ಇದ್ದರು.

# ಮಾಜಿ ಸಭಾಪತಿ ಡೇವಿಡ್ ಸಿಮೆಯೋನ್ ಅಂತ್ಯಕ್ರಿಯೆ ಜೂ. 12 ರಂದು

ಕಲಬುರಗಿ: ಜೂ.10: ವಿಧಾನ ಪರಿಷತ್ತಿನ ಮಾಜಿ ಸಭಾಪತಿಗಳಾದ ಡೇವಿಡ್ ಸಿಮೆಯೋನ್ ಇವರು ಬೆಂಗಳೂರಿನಲ್ಲಿ ಅನಾರೋಗ್ಯದ ನಿಮಿತ್ಯ ಜೂನ್ 10.ರಂದು ಮಂಗಳವಾರ ಮಧ್ಯಾಹ್ನ 12.15 ಗಂಟೆಗೆ ನಿಧನ ಹೊಂದಿದ್ದಾರೆ. ಅವರ ಅಂತ್ಯಕ್ರೀಯೇಯು ಅವರ ಕುಟುಂಬ ಸದಸ್ಯರು ಕಲಬುರಗಿಯಲ್ಲಿ ಜೂನ್ 12 ರಂದು ಜರುಗಿಸಲು ನಿರ್ಧರಿಸಿದ್ದಾರೆ.



ದಿ. ಡೇವಿಡ್ ಸಿಮೆಯೋನ್ ಅವರ ಜೂನ್ 12 ರಂದು ಗುರುವಾರ ಕಲಬುರಗಿಯ ಕ್ರೈಸ್ತ ಮೆಥೋಡಿಸ್ಟ ಚರ್ಚ ಆವರಣ ಐವಾನ್–ಇ–ಶಾಹಿ ರಸ್ತೆ, ಕಲಬುರಗಿಯಲ್ಲಿ ಬೆಳಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯವರೆಗೆ ಸಾರ್ವಜನಿಕರ ಅಂತಿಮ ದರ್ಶನ, ಮಧ್ಯಾಹ್ನ 3.00 ಗಂಟೆಗೆ ಕಲಬುರಗಿ ನಗರದ ಕ್ರೈಸ್ತರುದ್ರಭೂಮಿ ವೆಂಕಟೇಶ ನಗರದಲ್ಲಿ ಸಕಲ ಸರಕಾರಿ ಗೌರವಗಳೊಂದಿಗೆ ಅವರ ಅಂತ್ಯಕ್ರಿಯೆ ಜರುಗಿಸಲಾಗುವುದು.

ಸದರಿ ವಿಷಯವನ್ನು ಕಾಂಗ್ರೆಸ್ ಕ್ರೈಸ್ತ ಮುಖಂಡರಾದ ಸಿಮೆಯೋನ್ ಸಾಮ್ಯೂವೆಲ್, ಜ್ಞಾನಮಿತ್ರ ಸಾಮ್ಯೂವೆಲ್, ಸಂಧ್ಯಾರಾಜ ಸಾಮ್ಯೂವೆಲ್ ಹಾಗೂ ಮೆಥೋಡಿಸ್ಟ ಚರ್ಚಿನ ಕಾರ್ಯದರ್ಶಿಗಳಾದ ಐ. ವಿಜಯಕುಮಾರವರು ಪ್ರಕಟಣೆಯ ಮುಖಾಂತರ ತಿಳಿಸಿದ್ದಾರೆ.

# ಸರಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸಿ:ಸಚಿವ ಬಂಗಾರಪ್ಪ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.11– ಜನಪ್ರತಿನಿಧಿಗಳು ಹಾಗೂ ಅಧಿಕಾರಿ ವರ್ಗದವರ ಸಹಯೋಗದೊಂದಿಗೆ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಹೆಚ್ಚಿಸುವ ಕಾರ್ಯ ಮಾಡಬೇಕು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿಕ್ಷಕರು ತಮ್ಮ ಸರಕಾರಿ ಶಾಲಾ ವ್ಯಾಪ್ತಿಯಲ್ಲಿರುವ ಮನೆ ಮನೆಗೆ ಭೇಟಿ ನೀಡಿ ಸರಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗಾಗಿ ಸರಕಾರ ವಿವಿಧ ಸೌಲಭ್ಯಗಳನ್ನು ಒದಗಿಸುತ್ತಿದೆ ಎಂದು ಪಾಲಕರು ಮತ್ತು ಮಕ್ಕಳಲ್ಲಿ ಮನವರಿಕೆ ಮಾಡಿದಲ್ಲಿ ಸರಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಾಗಲು ಸಾಧ್ಯವಾಗುತ್ತದೆ. ಜುಲೈ ಕೊನೆಯವರೆಗೂ ಶಾಲಾ ಪ್ರವೇಶಕ್ಕೆ ಅವಕಾಶ ಇರುವದರಿಂದ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚಿಸುವದರೊಂದಿಗೆ ಮುಂದಿನ ದಿನಗಳಲ್ಲಿ ಅವರ ಹಾಜರಾತಿ ಕೂಡ ಸ್ಥಿರವಾಗಿರುವಂತೆ ನೋಡಿಕೊಳ್ಳಬೇಕು. ಯಾವುದೇ ಮಗು ಶಾಲೆಯಿಂದ ಹೊರಗೆ ಉಳಿಯುವಂತಾಗಬಾರದು ಎಂದರು.

ವಿದ್ಯಾರ್ಥಿಗಳ ಕಲಿಕೆಗೆ ಮಹತ್ವ ನೀಡಿ, ಈ ವರ್ಷದ ಶೈಕ್ಷಣಿಕ ಸಾಲಿನಿಂದ ನೈತಿಕ ವಿಜ್ಞಾನ ವಿಷಯವನ್ನು ಅಳವಡಿಸಲಾಗುತ್ತಿದೆ. ವಿದ್ಯಾರ್ಥಿಗಳಲ್ಲಿ ನೈತಿಕತೆ ಮೂಡಿಸುವದೇ ಅದರ ಉದ್ದೇಶವಾಗಿದೆ. ಪರೀಕ್ಷೆಗಳಲ್ಲಿ ನಕಲು ಮಾಡಲು ಯಾವುದೇ ಕಾರಣಕ್ಕೂ ಅವಕಾಶ ನೀಡಬೇಡಿ, ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ನಡೆಸಲು ಕ್ರಮಕೈಗೊಳ್ಳಬೇಕು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೂರು ಬಾರಿ ಫೇಲ್ ಆದರೆ ಆ ವಿದ್ಯಾರ್ಥಿಗೆ ಪುನಃ ತರಗತಿಗೆ ತೆಗೆದುಕೊಂಡು ಸಮವಸ್ತ್ರ, ಪಠ್ಯ ಪುಸ್ತಕ ನೀಡಿ ಮತ್ತೆ ಪರೀಕ್ಷೆಗೆ ತಯಾರಿಗೊಳ್ಳುವಂತೆ ಪ್ರೇರೆಪಿಸಬೇಕು ಎಂದು ಸಚಿವರು ಹೇಳಿದರು.

ಶಿಕ್ಷಕರು ಮತ್ತು ಅಧಿಕಾರಿಗಳು ಹೊಸ ಹೊಸ ಪ್ರಯೋಗಗಳನ್ನು ಮಾಡಬೇಕು. ಮಕ್ಕಳ ಪಾಲಕರಲ್ಲಿ ಭರವಸೆ ತುಂಬುವ ಕಾರ್ಯ ಮಾಡಿ, ವಿಶೇಷ ತರಗತಿಗಳ ಮೂಲಕ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳತ್ತ ಹೆಚ್ಚಿನ ಗಮನ ಹರಿಸಬೇಕು. ಕಳೆದ ಬಾರಿ ಜಿಲ್ಲೆಯ ವಿದ್ಯಾರ್ಥಿನಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಳು, ಅಲ್ಲದೇ ಈ ಬಾರಿಯ ಫಲಿತಾಂಶವು ಉತ್ತಮವಾಗಿದ್ದು, ಜಿಲ್ಲೆಯ ಶೈಕ್ಷಣಿಕ ಪ್ರಗತಿ ಚೆನ್ನಾಗಿದೆ. ಸರ್ಕಾರ ಅಥವಾ ಇಲಾಖೆಯಿಂದ ಯಾವುದೇ ರೀತಿಯ ಸಹಕಾರ ಬೇಕಾಗಿದ್ದಲ್ಲಿ ಯಾವಾಗ ಬೇಕಾದರೂ ನಮ್ಮನ್ನು ಸಂಪರ್ಕಿಸಬಹುದು. ಒಟ್ಟಾರೆ–ಯಾಗಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ' ಎಂದರು.

ಸಭೆಯಲ್ಲಿ ಜಿಲ್ಲೆಗೆ ಅಗತ್ಯವಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರು, ಎಸ್ ಎಸ್ ಎಲ್ ಸಿ ಎರಡು ಮತ್ತು ಮೂರನೇ ಪರೀಕ್ಷೆಗಳ ಫಲಿತಾಂಶ, ಜಿಲ್ಲೆಯಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಅನುಪಾತ, ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಗೈರು ಹಾಜರಾದ ವಿದ್ಯಾರ್ಥಿಗಳು, ಮಕ್ಕಳ ಸಂ–ಖ್ಯೆ ಕಡಿಮೆ ಇರುವ ಸಣ್ಣ ಶಾಲೆಗಳ ವಿಲೀನೀಕರಣ, ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ತರಗತಿಗಳ ಆರಂಭ, ಕಳಪೆ ಫಲಿತಾಂಶ ದಾಖಲಿಸಿದ ಶಾಲೆಗಳು, ಸಿಎಸ್‌ಆರ್ ಅನುದಾನ, ಆರ್‌ಟಿಇ ಅಂಕಿಅಂಶ ಮತ್ತು ಶಾಲಾ ಕಟ್ಟಡ ನಿರ್ವಹಣೆ ಸೇರಿ ಇತರೇ ಪ್ರಮುಖ ವಿಷಯಗಳ ಕುರಿತು ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಸಿಇಓ ಹಾಗೂ ಡಿಡಿಪಿಐ ಮತ್ತು ಬಿಇಓ ಅವರೊಂದಿಗೆ ಚರ್ಚಿಸಿದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ, ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಜಿಲ್ಲಾಧಿಕಾರಿ ಜಾನಕಿ ಕೆ ಎಂ, ಜಿಲ್ಲಾ ಪಂಚಾಯತ ಸಿಇಓ ಶಶಿಧರ ಕುರೇರ, ಡಿಡಿಪಿಐ ಹೆಚ್.ಜಿ.ಮಿರ್ಜಿ ಸೇರಿದಂತೆ ಇತರರು ಇದ್ದರು.

# ಪಡಿತರ ಚೀಟಿದಾರರು ಇ-ಕೆವೈಸಿ ಮಾಡಿಸುವುದು ಕಡ್ಡಾಯ: ಜೂ.30 ರವರೆಗೆ ಕಾಲಾವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.10: ಜಿಲ್ಲೆಯ ಪಡಿತರ ಚೀಟಿದಾರರು ತಮ್ಮ ಕುಟುಂಬದ ಎಲ್ಲಾ ಸದಸ್ಯರ ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿರುವುದರಿಂದ ನಿಮ್ಮ ಪಡಿತರ ಚೀಟಿಯಲ್ಲಿನ ಎಲ್ಲಾ ಸದಸ್ಯರ ಇ–ಕೆವೈಸಿ ಬೆರಳಚ್ಚು(ಬಯೋಮೆಟ್ರಿಕ್) ಆಗಿದೆಯೇ ಅಥವಾ ಇಲ್ಲವೇ ಎಂಬುದನ್ನು ನಿಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಗೆ ಹೋಗಿ ಪರಿಶೀಸಿಕೊಳ್ಳಬೇಕೆಂದು ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲ್ಲೂಕುವಾರು ಬಾಕಿ ಇರುವ ಇ–ಕೆವೈಸಿ ವಿವರ: ಔರಾದ (1636), ಬಸವಕಲ್ಯಾಣ (4691), ಭಾಲ್ಕಿ (2919), ಬೀದರ (12873), ಹುಮನಾಬಾದ (2585), ಕಮಲನಗರ (1245), ಹುಲಸೂರ (160), ಚಿಟಗುಪ್ಪಾ (1379) ಸೇರಿ ಒಟ್ಟು 27488 ಬಾಕಿ ಇರುತ್ತದೆ.

ಇ–ಕೆವೈಸಿ ಸಂಗ್ರಹಣೆಯ ಕಾರ್ಯ ಪ್ರತಿ ದಿನ ಬೆಳಿಗ್ಗೆ 7 ರಿಂದ ರಾತ್ರಿ 8 ಗಂಟೆಯವರೆಗೆ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಮಾಡಿಸಿಕೊಳ್ಳಲು ಜೂನ್.30 ರತನಕ ಕಾಲಾವಕಾಶ ನೀಡಲಾಗಿದೆ. ಇದಕ್ಕೆ ಸರ್ಕಾರವೇ ನ್ಯಾಯಬೆಲೆ ಅಂಗಡಿಯವರಿಗೆ ಹಣ ಪಾವತಿ ಮಾಡುತ್ತಿರುವುದರಿಂದ ಪಡಿತರ ಚೀಟಿದಾರರು ಈ ಪ್ರಕ್ರಿಯೆಗೆ ಯಾವುದೇ ಹಣ ಸಂದಾಯ ಮಾಡುವ ಅವಶ್ಯಕತೆ ಇರುವುದಿಲ್ಲ. ಇದು ಸಂಪೂರ್ಣ ಉಚಿತವಾಗಿರುತ್ತದೆ.

ಆಧಾರ್ ಮತ್ತು ಪಡಿತರ ಚೀಟಿಯಲ್ಲಿ ಕುಟುಂಬದ ಮುಖ್ಯಸ್ಥರ ಹೆಸರು ವ್ಯತ್ಯಾಸವಿದ್ದಲ್ಲಿ ಅಂತಹವರು ತಮ್ಮ ನ್ಯಾಯಬೆಲೆ ಅಂಗಡಿಗೆ ಹೋಗಿ ಇ–ಕೆವೈಸಿ ಮಾಡಿಸಿಕೊಂಡಲ್ಲಿ ಸರಿಯಾಗುವುದು. ಬೆರಳಚ್ಚು ಹೊಂದಾಣಿಕೆ ಆಗದ ಪಡಿತರ ಚೀಟಿ ಸದಸ್ಯರು ಗ್ರಾಮ ಒನ್ /ಕರ್ನಾಟಕ ಒನ್ ಕೇಂದ್ರಗಳಲ್ಲಿ ರೇಷನ್ ಕಾರ್ಡ ತಿದ್ದುಪಡಿ ಅರ್ಜಿ ಅಪಡೇಟ್ ಮಾಡಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿ ಸಮೀಕ್ಷೆ ಅವಧಿ ವಿಸ್ತರಣೆ

ಬೀದರ. ಜೂ. 10 : ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಅವಧಿಯನ್ನು ಜೂನ್ 22 ರ ವರೆಗೆ ವಿಸ್ತರಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಔರಾದ್ ತಾಲ್ಲೂಕು ಸಹಾಯಕ ನಿರ್ದೇಶಕ ಅನಿಲಕುಮಾರ ಮೇಲ್ದೊಡ್ಡಿ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯಲ್ಲಿ ಇರುವ 101 ಜಾತಿಯವರು ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬಹುದು ಎಂದು ಹೇಳಿದ್ದಾರೆ.

ಆನ್‌ಲೈನ್ ಮೂಲಕವೂ ಸಮೀಕ್ಷೆಯಲ್ಲಿ ಭಾಗವಹಿಸಬಹುದು. ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರದ ಆರ್‌ಡಿ ಸಂಖ್ಯೆ ಹಾಗೂ ಪಡಿತರ ಚೀಟಿ ಸಂಖ್ಯೆಯೊಂದಿಗೆ https://schedulecastesurvey.karnataka.gov.in/self-declarationನಲ್ಲಿ ಸ್ವಯಂ ಘೋಷಣೆ ಮಾಡಿಕೊಳ್ಳಲು ಅವಕಾಶ ಇದೆ. ಪರಿಶಿಷ್ಟ ಜಾತಿಯವರು ಸಮೀಕ್ಷೆಯ ಪ್ರಯೋಜನ ಪಡೆಯಬೇಕು ಎಂದು ತಿಳಿಸಿದ್ದಾರೆ.


ಔರಾದ್ ವಿಧಾನಸಭಾ ಕ್ಷೇತ್ರದಲ್ಲಿ ಮೇ 5 ರಿಂದ ಮನೆ ಮನೆ ಸಮೀಕ್ಷೆ ನಡೆಸಲಾಗಿದೆ. ಈಗಾಗಲೇ ಶೇ 90 ರಷ್ಟು ಸಮೀಕ್ಷೆ ಪೂರ್ಣಗೊಂಡಿದೆ. ಶೇ 100 ರಷ್ಟು ಗುರಿ ಸಾಧನೆಗೆ ಎಲ್ಲರೂ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

# ಪ್ರಾದೇಶಿಕ ಅಸಮತೋಲನ ಸಮಿತಿಯ ಸಂವಾದ ಸಮಿತಿ ಸಭೆ ಆಶಯ ಫಲಪ್ರದವಾಗಲಿ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಜೂ.10: ಬೀದರ ಜಿಲ್ಲೆಯಲ್ಲಿ ಪ್ರಾದೇಶಿಕ ಅಸಮತೋಲನ ಸಮಿತಿಯ ಸಂವಾದ ಸಮಿತಿ ಸಭೆ ಕುರಿತು. ಮಾನ್ಯ ಜಿಲ್ಲಾಧಿಕಾರಿಗಳವರ ಸಭಾ ಸೂಚನಾ ಪತ್ರದ ಅನ್ವಯ ಸಂಖ್ಯೆಕಂ/ಸಭೆಸಿಆರ್–2025–26 ಈ ಮೇಲಿನ ವಿಷಯ ಹಾಗು ಉಲ್ಲೇಖದ ಅನ್ವಯ ನಮ್ಮ ಸಂಸ್ಥೆಯಿಂದ ಬೀದರ ಜಿಲ್ಲೆಯಲ್ಲಿಯ ಹಲವಾರು ಕ್ಷೇತ್ರಗಳಲ್ಲಿಯ ಪ್ರಗತಿಯ ಹಾಗು ನ್ಯೂನತೆಗಳ ಕುರಿತು ತಮ್ಮ ಗಮನ ಸೆಳೆಯುತ ಕಲ್ಯಾಣ ಕರ್ನಾಟಕವು ವಿಶೇಷ ಪ್ರಾತಿನಿಧ್ಯದಡಿ ಅಂದರೆ 371–ಜೆ ಕಲ್ಪಿಸಿದನಂತರ ಕಲ್ಯಾಣ ಕರ್ನಾಟಕದಲ್ಲಿ ಅಭಿವೃದ್ಧಿಯ ಹೊಸಯುಗ ಆರಂಭವಾಗಿದುದು ಅಭಿನಂದನಾರ್ಹ ಹಾಗು ಸ್ವಾಗತಾರ್ಹವಾಗಿದೆ. ಡಾ. ಡಿ.ಎಂ ನಂಜುಂಡಪ್ಪಾ ಪ್ರಾದೇಶಿಕ ಅಸಮತೋಲನಾ ನಿವಾರಣಾ ಉನ್ನತಾಧಿಕಾರಿ ಸಮಿತಿ ರಚಿಸಲಾಯಿತು. ಶ್ರೀಯುತರ ಅಧ್ಯಕ್ಷತೆಯ ಸಮಿತಿಯು 2002ರಲ್ಲಿ ವರದಿ ನೀಡಿ ಶಿಫಾರಸ್ಸು ಮಾಡಲಾಯಿತು. ಆದರೂ ಸಹ ಗತ ಹತ್ತು ವರ್ಷಗಳು ಗತಿಸಿಹೋದರೂ ಸಹ ಹೇಳಿಕೊಳ್ಳುವ ಅಭಿವೃದ್ಧಿ ಸಾಧಿಸಿರುವುದಿಲ್ಲ. ಕಲ್ಯಾಣ ಕರ್ನಾಟಕ ಭಾಗ ಇನ್ನೂ ಸಹ ಸರ್ವಕ್ಷೇತ್ರಗಳಲ್ಲಿ ಮಂದಗತಿ ಹಾಗು ಹಿಂದುಳಿದುದ್ದು ಕಂಡುಬಂದಿದೆ. ಸ್ವಲ್ಪ ಸಮಾಧಾನ ತಂದ ಅಂಶಗಳೇಂದರೆ ಉನ್ನತ ಶಿಕ್ಷಣದ ಕ್ಷೇತ್ರದಲ್ಲಿ ಈ ಭಾಗದ ಯುವಕರು ಸಾಧನೆ ಮಾಡುತ್ತಿರುವುದು ಹರ್ಷದಾಯಕವಾಗಿದೆ.





ಆದರೆ ಉದ್ಯೋಗವಕಾಶಗಳು, ತರಬೇತಿ ಹಾಗು ಮಾಹಿತಿ ಕೇಂದ್ರಗಳ ಕೊರತೆ ಇದೆ. ಉದ್ಯೋಗ ಅವಕಾಶ ಹಾಗು ಮುಂಬಡ್ತಿಯಲ್ಲಿ ಕಲ್ಯಾಣ ಕರ್ನಾಟಕ ಕ್ಷೇತ್ರದ ಶೇ 80 ಖಾಲಿ ಹುದ್ದೆಗಳು ಸಂಪೂರ್ಣ ಸ್ಥಳೀಯರಿಗೆ ಹಾಗು ಮುಂಬಡ್ತಿ ಸಹ ಸ್ಥಳೀಯರಿಗೆ ನ್ಯಾಯುತವಾಗಿ ದೊರೆಯುತ್ತಿಲ್ಲ. ಜೊತೆಗೆ ಈ ಭಾಗದ ಜನರಿಗೆ ರಾಜ್ಯದ ಪಾಲು ಶೇ 8ಅನ್ನು ನ್ಯಾಯುತ್ತವಾಗಿ ದೊರೆಯದೆ ಅನ್ಯಾಯ ಮತ್ತು ವಂಚನೆಯಾಗುತ್ತಿದೆ. ಅಲ್ಲದೇ ಕಲ್ಯಾಣ ಕರ್ನಾಟಕಕ್ಕೆ ಮೀಸಲಿಟ್ಟಿರುವ ಅನುದಾನದ ಪಾಲು ಸರಿಯಾದ ಸಮಯ ಹಾಗು ಸಮರ್ಪಕವಾಗಿ ದೊರೆಯುತಿಲ್ಲ. ಮತ್ತು ಪತಿ ವರ್ಷ ಮುಂಗಡ ಪತ್ರದಲ್ಲಿ ರಾಜ್ಯದ ಜಿಲ್ಲೆಗಳಿಗೆ ಹಂಚಿಕೆ ಮಾಡುವ ಪ್ರತ್ಯೇಕ ಅನುದಾನ ಸಹ ಎಷ್ಟರ ಮಟ್ಟಿಗೆ ಪಾಲು ಹಂಚಿಕೆಯಾಗಿದೆ. ಎಂಬುದು ನಿಖರ ಮಾಹಿತಿಯಿಲ್ಲ. ಆದ್ದರಿಂದ ನಂಜುಂಡಪ್ಪ ವರದಿ ಸಂಪೂರ್ಣವಾಗಿ ಕಾರ್ಯಗತವಾಗದೇ ಇನ್ನೂ ಈ ಭಾಗ ಪ್ರಾದೇಶಿಕವಾಗಿ ಅಸಮತೋಲನದ ಕಪ್ಪು ಚುಕ್ಕೆ ಅಳಿಸದಿರದು ಕಳವಳಕಾರಿಯಾಗಿದೆ ಕಾರಣ ಇಂದಿನ ನೂತನ ಸಮಿತಿ ಪ್ರಾದೇಶಿಕ ಅಸಮೋತೋಲನ ನಿವಾರಣೆ, ಸುಧಾರಣೆ ಮತ್ತು ಯೋಜನೆ ರೂಪಿಸಿ ಈ ಭಾಗದ ಸಮಸ್ಯೆಗಳನ್ನು ಬಗೆಹರಿಸಿ, ನವ್ಯಯುಗದ ಸಾದನೆ ಆಪೇಕ್ಷಿಸುತ್ತೇವೆ.

# ಔಷಧ ವ್ಯಾಪಾರಿಗಳ ಸಂಘಕ್ಕೆ ಬಸವರಾಜ ಪಾಟೀಲ ಅಧ್ಯಕ್ಷ






ಬೀದರ. ಜೂ. 10 : ಜಿಲ್ಲಾ ಔಷಧ ವ್ಯಾಪಾರಿಗಳ ಸಂಘದ ನೂತನ ಅಧ್ಯಕ್ಷರಾಗಿ ಬಸವರಾಜ ಪಾಟೀಲ ಹಾರೂರಗೇರಿ ಆಯ್ಕೆಯಾಗಿದ್ದಾರೆ.

ಪಾಟೀಲ ಸಂಘದ ವಿವಿಧ ಹುದ್ದೆಗಳಲ್ಲಿ ಸಕ್ರಿಯವಾಗಿ ಕಾರ್ಯ ನಿರ್ವಹಿಸಿದ್ದರು. ಸಂಘದ ಸಾರಥ್ಯದ ಹೊಣೆ ಈಗ ಅವರ ಹೆಗಲೇರಿದೆ.

ಸಂಘದ ನೂತನ ಪದಾಧಿಕಾರಿಗಳ ಆಯ್ಕೆಗೆ ನಗರದಲ್ಲಿ ನಡೆದ ಸಭೆಯಲ್ಲಿ ಅವರು ಅವಿರೋಧವಾಗಿ ಆಯ್ಕೆಯಾದರು.

ಸಂಘದ ನೂತನ ಪದಾಧಿಕಾರಿಗಳ ಹೆಸರು ಹೀಗಿವೆ. ಅಶೋಕಕುಮಾರ ನಾಗರಾಳೆ (ಉಪಾಧ್ಯಕ್ಷ), ವಿಜಯಕುಮಾರ ಬಿರಾದಾರ (ಪ್ರಧಾನ ಕಾರ್ಯದರ್ಶಿ), ಮಹಮ್ಮದ್ ಎತೆಶಾಮುಲ್ ಹಕ್ (ಜಂಟಿ ಕಾರ್ಯದರ್ಶಿ), ಸಿದ್ರಾಮಪ್ಪ ಆನಂದೆ (ಖಜಾಂಚಿ), ರಾಜೇಂದ್ರ ನಮೋಶಿ, ಸಾಯಿಬಣ್ಣ ಅಂಬಾಟೆ, ಸೂರ್ಯಕಾಂತ ಆಗ್ರೆ, ಕಿರಣ ಉಪ್ಪೆ, ಮಹಮ್ಮದ್ ಇಲಿಯಾಸ್, ಬಸವರಾಜ ಭೂಶೆಟ್ಟಿ, ರಾಜಕುಮಾರ ನವಾಡೆ, ದತ್ತಾತ್ರೆ ಕದಂ, ಜಗನ್ನಾಥ ಕಾಡಾದೆ, ಗಣೇಶ ಐನಾಪುರೆ ಹಾಗೂ ಎಂ.ಡಿ. ನಯಿಮುದ್ದೀನ್ (ಸದಸ್ಯರು).

# ಜಿ.ಪಂ ಸಿಇಓ ಆದೇಶಕ್ಕೆ ಕ್ಯಾರೆ ಎನ್ನದ ಪಿಡಿಒ ಹಾಗೂ ಸಿಬ್ಬಂಧಿಗಳು






ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸೋಮವಾರ ತಾಲ್ಲೂಕಿನ ಹತ್ತಿಕುಣಿ ಗ್ರಾಮಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಾಡಿಯಾ ಭೇಟಿ ನೀಡಿ, ಗ್ರಾಮದ ಪ್ರಮುಖ ಸಮಸ್ಯೆಗಳನ್ನು ವಿಕ್ಷೀಸಿ, ಪರಿಸರ ಸ್ವಚ್ಚತೆಗೆ ಮೊದಲು ಆಧ್ಯತೆ ನೀಡಿ ಎಂದು ಪಂಚಾಯತ ಅಭಿವೃದ್ಧಿ ಅಧಿಕಾರಿ ನಿಂಗಣ್ಣ ಕಣಮೇಶ್ವರ ಹಾಗೂ ಸಿಬ್ಬಂಧಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದ್ದರು,

ಮಂಗಳವಾರ ಬೆಳಿಗ್ಗೆ ಜೆಸಿಬಿ ಯಂತ್ರವನ್ನು ಬಳಸಿ, ಶುದ್ಧ ಕುಡಿಯುವ ನೀರಿನ ಘಟಕದ ಹತ್ತಿರ ಕೆಲ ಸಮಯ ಸ್ವಚ್ಚತೆ ಮಾಡಿ, ಅಧಿಕಾರಿಯ ಆದೇಶಕ್ಕೆ ನಿರ್ಲಕ್ಷ ವಹಿಸಿದ್ದಾರೆ.

ಭಾರತ ದೇಶ ವಿಶ್ವದಲ್ಲಿಯೇ ಹಳ್ಳಿಗಳ ಪ್ರಧಾನವಾದ ದೇಶ, ಇಲ್ಲಿ ಹೆಚ್ಚಾಗಿ ಜನರು ಕೃಷಿಯನ್ನೆ ಅವಲಂಬಿಸಿ ಆನಾದಿ ಕಾಲದಿಂದ ಜೀವನ ಸಾಗಿಸುತ್ತಾ ಬಂದಿದ್ದಾರೆ, ಅನಕ್ಷರತೆ, ಮೂಡನಂಬಿಕೆ ಹೆಚ್ಚಾಗಿದೆ, ಇಂದು ನಾವೂ ದೇಶ ಸ್ವಾತಂತ್ರಗೊಂಡ 75ನೇ ವರ್ಷದ ಸಂಭ್ರಮ ಆಚರಿಸಿದ್ದೇವೆ, ಗ್ರಾಮೀಣಾಭಿವೃದ್ಧಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಪ್ರತಿ ವರ್ಷ ಕೊಟ್ಯಾಂತರ ರೂ. ಅನುದಾನ ನೀಡುತ್ತದೆ, ಆದರೆ ಪಂಚಾಯತ ಮಟ್ಟದಿಂದ ರಾಜ್ಯ, ಹಾಗೂ ಕೇಂದ್ರ ಸರ್ಕಾರದ ಉನ್ನತ ಅಧಿಕಾರಿಗಳ ನಿರ್ಲಕ್ಷ –ಭ್ರಷ್ಟಾಚಾರ ಆಡಳಿಯ ವ್ಯವಸ್ಥೆಯಿಂದ ಅವರು ಜಾರಿಗೆ ತಂದಿರುವ ಯೋಜನೆಗಳ ಬಗ್ಗೆ ಜನರಿಗೆ ಮಾಹಿತಿನೇ ಇಲ್ಲ,

ಹಳ್ಳಿಗಳಲ್ಲಿ ಆಡಳಿತ ಶಕ್ತಿ ಕೇಂದ್ರವಾಗಿರುವ ಗ್ರಾಮ ಪಂಚಾಯತ ಅಧ್ಯಕ್ಷ–ಪಿಡಿಒ ಅವರು ಎಲ್ಲಾ ಸದಸ್ಯರ ಹಾಗೂ ಎಲ್ಲಾ ಸಮುದಾಯದ ಜನರ ಸಭೆಗಳನ್ನು ಆಗಾಗ ಕರೆದು, ಜನರು ಎದುರಿಸುತ್ತಿರುವ ಸಮಸ್ಯೆಗಳನ್ನು ಅರಿಯಬೇಕು, ಜೊತೆಗೆ ಯೋಜನೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು, ಅದು ಪ್ರಾಮಾಣಿಕವಾಗಿ ಅನುಷ್ಟಾನಗೊಳ್ಳದಿರುವುದು ಅಭಿವೃದ್ಧಿಗೆ ಹಿನ್ನಡೆಯಾಗಿದೆ.

ಪಂಚಾಯತ ಮೇಲ್ಮಟ್ಟದ ಅಧಿಕಾರಿಗಳಾದ ತಾಲ್ಲೂಕಾ ಪಂಚಾಯತ ಹಾಗೂ ಜಿಲ್ಲಾ ಪಂಚಾಯತ, ಜಿಲ್ಲಾಧಿಕಾರಿ, ಶಾಸಕರು ಆಗಾಗ ಗ್ರಾಮ ಪಂಚಾಯತಗಳಿಗೆ ಭೇಟಿ ನೀಡಿ, ಅಲ್ಲಿನ ಸ್ಥಿತಿ–ಗತಿ ಮಾಹಿತಿ ಪಡೆದು, ಜನರ ಕುಂದು–ಕೊರತೆಗಳನ್ನು ಆಲಿಸಿ, ಕೆಲಸ ಮಾಡದ ಅಧಿಕಾರಿಗಳಿಗೆ ಹಾಗೂ ಸಿಬ್ಬಂಧಿಗಳಿಗೆ ಚಾಟಿ ಬೀಸಿದಾಗ ಮಾತ್ರ ಸ್ವಲ್ಪ ಮಟ್ಟಿನ ಆಡಳಿತ ಯಂತ್ರ ಚುರುಕುಗೊಂಡು ಬದಲಾವಣೆಗೆ ಪ್ರೇರಣೆ ಸಿಗುತ್ತದೆ, ಆದರೆ ಅದು ಆಗದಿರುವುದು ಈ ದೇಶದ ದುರಂತವಾಗಿದೆ,

ಈಗಾಗಲೇ ಮುಂಗಾರು ಮಳೆ ಆರಂಭವಾಗಿ 15 ದಿನ ಕಳೆಯುತ್ತಾ ಬಂದಿದೆ, ಗುರುಮಿಠಕಲ್ ಮತಕ್ಷೇತ್ರದ ಅತೀ ದೊಡ್ಡ ಹೋಬಳಿ ಕೇಂದ್ರವಾಗಿರುವ ಹತ್ತಿಕುಣಿಯಲ್ಲಿ ಮಳೆ ನೀರು ಸುಗಮವಾಗಿ ಹರಿಯಲು ಹಲವಾರು ವಾರ್ಡಗಳಲ್ಲಿ ಚರಂಡಿಗಳಿಲ್ಲ, ಪರಿಣಾಮ ಮಳೆ ಬಂದ–ರೇ ಮಳೆ ನೀರು ನಿವಾಸಿಗಳ ಮನೆ ಮುಂದೆ ಸಂಗ್ರಹವಾಗಿ ಸಾಂಕ್ರಾಮಿಕ ರೋಗ ಉತ್ಪಾದನಾ ಕೇಂದ್ರಗಳಾಗಿ ಮಾರ್ಪಟ್ಟಿವೆ,

ಈ ಕುರಿತು ಪಂಚಾಯತನವರನ್ನು ಪ್ರಶ್ನಿಸಿದರೇ, ನಮಗೆ ಸರ್ಕಾರದಿಂದ ಸರಿಯಾಗಿ ಅನುದಾನ ಬರುತ್ತಿಲ್ಲ, ಉದ್ಯೋಗ ಖಾತ್ರಿ ಯೋಜನೆ ಕೆಲಸ ಮಾಡಲು ಜನರು ಬರುತ್ತಿಲ್ಲ, ಇದರಿಂದಏನು ಕೆಲಸ ಮಾಡುವುದು ಎಂದು ತಮ್ಮ ಬಳಿ ಸಮಸ್ಯೆಗಳನ್ನು ಹೊತ್ತು ಬಂದಿರುವ ಜನರನ್ನೆ ಪ್ರಶ್ನಿಸುತ್ತಾರೆ.


ಹತ್ತಿಕುಣಿ ಗ್ರಾಮದಲ್ಲಿ ಕಳೆದ 35 ವರ್ಷಗಳಿಂದ ಪ್ರಾಥಮಿಕ ಆರೋಗ್ಯ ಕೇಂದ್ರವಿದೆ, ಗ್ರಾಮಕ್ಕೆ ಸುತ್ತು–ಮುತ್ತಲಿನ ಗ್ರಾಮಗಳ ಹಾಗೂ ತಾಂಡಾಗಳ ಜನರು ಚಿಕಿತ್ಸೆಪಡೆಯಲು ಆಗಮಿಸುತ್ತಾರೆ, ಆದರೆ ಯಾದಗಿರಿ–ಸೇಡಂ ಮುಖ್ಯರಸ್ತೆಯಿಂದ ಆಸ್ಪತ್ರೆಗೆ ರೋಗಿಗಳು ತೆರಳಲು ಸುಗಮ ರಸ್ತೆಯಿಲ್ಲ, ಇದರಿಂದ ಹಲವಾರು ರೋಗಿಗಳಿಗೆ ತೊಂದರೆಯಾಗಿದೆ.

ಸರ್ಕಾರ ಜನರಿಗೆ ಶುದ್ಧ ಕುಡಿಯುವ ನೀರುನ ಪೂ–ರೈಕೆಗೆ ಮೊದಲ ಆದ್ಯತೆ ಎಂದು ಹೇಳುತ್ತದೆ, ಆದರೆ 8 ಸಾವಿರಕ್ಕೂ ಹೆಚ್ಚು ಜನರು ವಾಸಿಸುತ್ತಿದ್ದಾರೆ, ಆದರೆ ಪಂಚಾಯತನಿಂದ 3 ಬೊರವೆಲ್‌ಗಳ ಮೂಲಕ ಮಾತ್ರ ನೀರು ಪೂರೈಸುತ್ತಿದ್ದಾರೆ, ಆ ನೀರು ಎಲ್ಲಾ ವಾರ್ಡ್ಗಳ ಜನರಿಗೆ ತಲುಪುತ್ತಿಲ್ಲ, ಆಕಸ್ಮಿಕ ಮೋಟಾರಗಳು ಕೆಟ್ಟರೇ ಜನರು ಕುಡಿಯುವ ನೀರಿಗಾಗಿ ಪರದಾಡುವಂತ ಸ್ಥಿತಿ ನಿರ್ಮಾಣವಾಗಿದೆ, ಕಳೆದ 2 ವರ್ಷಗಳ ಹಿಂದೆ ಗ್ರಾಮೀಣ ಕುಡಿಯುವ ನೀರು ಪೂರೈಕೆ ಇಲಾಖೆಯಿಂದ ಜಲ–ಜೀವನ್ ಮಿಶನ್(ಜೆಜೆಎಂ)ನಿಂದ 2 ಕೋಟಿ ರೂ. ಟೆಂಡರ್ ಕರೆಯಲಾಯಿತು, ಆದರೆ ಇಲಾಖೆ ಅಧಿಕಾರಿಗಳ ಹಾಗೂ ಗುತ್ತಿಗೆದಾರರ ಭ್ರಷ್ಟಾಚಾರ ಪರಿಣಾಮ ಕಳಪೆ ಕಾಮಗಾರಿ ಕೆಲ ಭಾಗದಲ್ಲಿ ಕೈಗೊಂಡಿ–ದ್ದಾರೆ, ಅದು ಕೂಡ ಯಾವಾಗ ಪೂರ್ಣಗೊಳ್ಳುತ್ತದೆ ಎಂಬ ಪ್ರಶ್ನೆ ಜನರಲ್ಲಿ ಕಾಡುತ್ತಿದೆ, ಗ್ರಾಮದಲ್ಲಿ ಕಂದಾಯ ಇಲಾಖೆಯ ನಾಡ ಕಛೇರಿ ಇದ್ದರೂ ಕ್ಷೇತ್ರದ ವ್ಯಾಪ್ತಿಯ ರೈತರ ಸಮಸ್ಯೆಗಳು ಪರಿಹಾರವಾಗುತ್ತಿಲ್ಲ, ಉದಾಹರಣೆಗೆ 1 ಕುಟುಂಬದ ಹಿರಿಯರು ತೀರಿಕೊಂಡರೇ ಅವರ ಆಸ್ತಿ, ಅವರ ಮಕ್ಕಳಿಗೆ ಸಕಾಲದಲ್ಲಿ ವರ್ಗಾವಣೆಯಾಗುತ್ತಿಲ್ಲ, ಕೆಲ ಕುಟುಂಬಗಳಲ್ಲಿ ಆಸ್ತಿ ಕುಟುಂಬ ಕಲಹ ಉಂಟಾಗಿ ಅವರ ಜಮೀನು ಪಹಣಿ ತಿದ್ದುಪಡಿಯಾಗುತ್ತಿಲ್ಲ, ಇದಕ್ಕಾಗಿ 1 ವರ್ಷದವರೆಗೆ ಅವರ ಸಮಸ್ಯೆಗೆ ಮುಕ್ತಿ ಸಿಗದೇ ಕಂದಾಯ ಅಧಿಕಾರಿಗಳಿಗೆ ಹಿಡಿ ಶಾಪ ಹಾಕುತ್ತಾ ಯಾದಗಿರಿ ತಹಸಿಲ್ದಾರ ಹಾಗೂ ಸಹಾಯಕ ಆಯುಕ್ತರ ಕಛೇರಿಗೆ ರೈತರು ಅಲೆದಾಡುತ್ತಿದ್ದಾರೆ,

ಹತ್ತಿಕುಣಿ ಭಾಗದ ರೈತರ ಜೀವನಾಡಿಯಾಗಿರುವ ಹತ್ತಿಕುಣಿ–ಸೌಧಾಗರ ಜಲಾಶಯಗಳನ್ನು ಸರ್ಕಾರದುರಸ್ಥಿಗೊಳಿಸದಪರಿಣಾಮ ಪ್ರತಿ ವರ್ಷ ಜಲಾಶಯ ವ್ಯಾಪ್ತಿಯ ಕೊನೆಯ ಭಾಗದ ರೈತರು ತಮ್ಮ ಬೆಳೆಗಳಿಗೆ ನೀರು ತಲುಪುತ್ತಿಲ್ಲ ಎಂದು ಅನೇಕ ಭಾರಿ ನೀರಾವರಿ ಇಲಾಖೆ, ಜಿಲ್ಲಾಡಳಿತ, ಕ್ಷೇತ್ರದ ಶಾಸಕರ ಮುಂದೆ ತಮ್ಮ ಅಳಲು ತೋಡಿಕೊಂಡು ಬರುತ್ತಿದ್ದಾರೆ.

ಈಗಾಗಲೇ ದೇಶದಲ್ಲಿ 2019ರಲ್ಲಿ ಕರೋನಾ ವೈರಸ್ ದಾಳಿಯಿಂದ ಇಡೀ ವಿಶ್ವದ ಜನರೇ ತೊಂದರೆ ಅನುಭವಿಸಿದರು, ಅದರಲ್ಲೂ ಹಿಂದುಳಿದ ಜಿಲ್ಲೆಯಾಗಿರುವ ಗಿರಿ ಜಿಲ್ಲೆಯ ಹಸಿರು ನಾಡು ಎಂದು ಕರೆಯುವ ಹತ್ತಿಕುಣಿ ಗ್ರಾಮದಲ್ಲಿ 200 ಕ್ಕೂ ಹೆಚ್ಚು ಜನರು ಸೊಂಕಿನಲ್ಲಿ ಬಳಲಿ ಚಿಕಿತ್ಸೆ ಪಡೆದರೂ, ಹೆಚ್ಚಿನ ಸಂಖ್ಯೆಯಲ್ಲಿ ಜನರು ಕೂಡ ಸಾವರನ್ನಪ್ಪಿರುವ ಘಟನೆ ಇಡೀ ರಾಜ್ಯ ಗಮನ ಸೆಳೆಯಿತು, ಮೊದಲು ರಾಜ್ಯ ಹಾಗೂ ಕೇಂದ್ರ ಸರ್ಕಾರ ಹಳ್ಳಿಗಳಲ್ಲಿ ಪರಿಸರ ಸ್ವಚ್ಚತೆ ಬಗ್ಗೆ ಸೂಕ್ತ ಪರಿಣಾಮಕಾರಿಯಾದ ಜಾಗೃತಿ ಮೂಡಿಸಬೇಕು, ಈ ವಿಷಯದಲ್ಲಿ ಸಮುದಾಯದ ಪಾತ್ರ ಕೂಡ ಎಚ್ಚೆತ್ತುಕೊಳ್ಳುವುದು ಅಗತ್ಯವಾಗಿದೆ, ಮತ್ತೆ ಕರೋನಾ ವೈರಸ್ ದಾಳಿ, ಸೋಂಕಿತರ ಸಂಖ್ಯೆ ರಾಜ್ಯದಲ್ಲಿ ದಿನ–ದಿನಕ್ಕೆ ಹೆಚ್ಚಾಗುತ್ತಿದೆ, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಪ್ರತಿ ವರ್ಷ 5 ಸಾವಿರ ಕೋಟಿ ರೂ. ಅನುದಾನ ಮಂಡಳಿಗೆ ನೀಡುತ್ತಿದೆ, ಗ್ರಾಮೀಣ ಭಾಗದಲ್ಲಿ ಶುದ್ಧ ಪರಿಸರ, ಆರೋಗ್ಯಕ ವಾತಾವರಣ ನಿರ್ಮಾಣ ಮಾಡಲು ಮಂಡಳಿಯ ಅಧ್ಯಕ್ಷರು, 40 ಶಾಸಕರು, ಪರಿಷತ ಸದಸ್ಯರು, ಸಂಸದರು, ಮಂಡಳಿಯ ಸಭೆಯಲ್ಲಿ ಗ್ರಾಮೀಣ ಭಾಗದ ಜನರಿಗೆ ಅನುಕೂಲ ಮಾಡುವ ದೃಷ್ಟಿಯಿಂದ ಪರಿಸರ ಸ್ವಚ್ಚತೆಗೆ ಇಂತಿಷ್ಟು ಅನುದಾನ ಮೀಸಲಿಟ್ಟು, ತಾಲ್ಲೂಕಾ ಮಟ್ಟದಲ್ಲಿ ಒಬ್ಬ ಪ್ರಾಮಾಣಿಕ ಅಧಿಕಾರಿಯನ್ನು ನೇಮಕ ಮಾಡಿ, ಗ್ರಾಮೀಣ ಭಾಗದಲ್ಲಿರುವ ಖಾಸಗಿ ಸಂಘ–ಸಂಸ್ಥೆಗಳು, ಮಹಿಳಾ ಸ್ವ–ಸಹಾಯ ಸಂಘದವರಿಂದ ಹಾಗೂ ವಿಧ್ಯಾವಂತ ಯುವಕರ ಸಹಭಾಗಿತ್ವದಲ್ಲಿ ಪರಿಸರ ಸ್ವಚ್ಚತೆಗೆ ಹೊಸಪ್ರಯೋಗಕ್ಕೆಮುಂದಾಗುವುದು ಅವಶ್ಯಕವಾಗಿದೆ, ಅಂದಾಗ ಮಾತ್ರ ಜನರು ತಮ್ಮ ಜವಾಬ್ದಾರಿಗಳನ್ನು ಅರಿತು ಆರೋಗ್ಯದಿಂದ ಬಾಳುವ ಮೂಲಕ ಅಧೃಢ ಸಮಾಜ ನಿರ್ಮಾಣವಾಗಿದ ಬದಲಾವಣೆಗೆ ಪ್ರೇರಣೆ ಸಿಗುತ್ತದೆ, ಈ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯವರು ಹಾಗೂ ಚುನಾಯಿತ ಜನಪ್ರತಿನಿಧಿಗಳು, ಅಧಿಕಾರಿಗಳು ಗಮನ ಹರಿಸುವರೇ ಎಂಬ ಪ್ರಶ್ನೆ ಜನರಲ್ಲಿ ಮೂಡಿದೆ ?

# ವೈದ್ಯರು ಜೀವದ ಹಂಗು ತೊರೆದು ಉಪಚಾರ ಮಾಡುಬೇಕು:ಅಮರೇ ಗೌಡ ಪಾಟೀಲ್ ಬಯ್ಯಾಪೂರ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಪಟ್ಟಣದ ವಿಜಯ ಮಹಾಂತೇಶ್ವರ ಮಠದಲ್ಲಿ ಆಯೋಜಿಸಿದ ಅದ್ವಿಕಾ ನರ್ಸಿಂಗ್ ಕಾಲೇಜಿನ ಉದ್ಘಾಟನೆ ದೀಪದಾನ ಕಾರ್ಯಕ್ರಮವನ್ನು ಮಾಜಿ ಸಚಿವ ಅಮರೇಗೌಡ ಪಾಟೀಲ ಬಯ್ಯಾಪೂರ ಉದ್ಘಾಟಿಸಿದರು.

ಮನುಷ್ಯನಿಗೆ ಜೀವನದಲ್ಲಿ ಆರೋಗ್ಯ ಏರುಪೇರು ಆಗುವುದು ಸಹಜ. ಅಂತಹ ಸಂದರ್ಭದಲ್ಲಿ ವೈದ್ಯರು ಜೀವದ ಹಂಗು ತೊ–ರೆದು ಉಪಚಾರ ಮಾಡುತ್ತಾರೆ. ವೈದ್ಯರು ಸೇವೆಯಲ್ಲಿ ಪ್ರಾಮಾಣಿಕತೆ ಇರಬೇಕು ಎಂದು ಮಾಜಿ ಸಚಿವ ಹಾಗೂ ಕೊಪ್ಪಳ ಜಿಲ್ಲಾ ಕಾಂಗ್ರೆಸ್ಸ ಅಧ್ಯಕ್ಷರಾದ ಅಮರೇಗೌಡ ಪಾಟೀಲ್ ಬಯ್ಯಾಪೂರ ಹೇಳಿದರು. ಅವರು ಪಟ್ಟಣದ ವಿಜಯ ಮಹಾಂತೇಶ್ವರ ಶಾಖಾ ಮಠದಲ್ಲಿ ಆಯೋಜಿದ ಶ್ರೀ ಅದ್ವಿಕಾ ನರ್ಸಿಂಗ ಕಾಲೇಜಿನ ಉದ್ಘಾಟನೆ ದೀಪದಾನ ಹಾಗೂ ಪ್ರತಿಜ್ಞಾವಿಧಿ ಕಾರ್ಯಕ್ರಮವನ್ನು "ಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಂತರ ಹಿರಿಯ ವೈದ್ಯರಾದ ಡಾ ಶಿವಶರಣಪ್ಪ ಇತ್ತಿ, ನಗರಯೋಜನಾ ಪ್ರಾಧಿಕಾರ ಅಧ್ಯಕ್ಷ ಭೂಪನಗೌಡ ಪಾಟೀಲ ಮಾತನಾಡಿದರು. ಕಾರ್ಯಕ್ರಮದ ಸಾನಿಧ್ಯವನ್ನು ವಿಜಯ ಮಹಾಂತೇಶ್ವರ ಇಲಕಲ ಸಂಸ್ಥಾನಮಠ ಗುರು ಮಹಾಂತ ಮಹಾಸ್ವಾಮಿಗಳು, ಬೂದಿಬಸವೇಶ್ವರ ಮಠ ಗಬ್ಬರನ ಬೂದಿಬಸವ ಶಿವಾಚಾರ್ಯ ಮಹಾಸ್ವಾಮಿಗಳು, ವಿಜಯಮಾಹಂತೇಶ್ವರ ಮಠ ಲಿಂಗಸುಗೂರ ಸಿದ್ದಲಿಂಗಾ ಸ್ವಾಮಿಗಳು ವಹಿಸಿದರು.

ಅಧ್ಯಕ್ಷತೆಯನ್ನು ಎಸ.ವಿ.ಎಂ ಟ್ರಸ್ಟನ ಅಧ್ಯಕ್ಷರಾದ ಡಾ.ಭಾರತಿ ಮಲ್ಲೇಶಗೌಡ ಯದ್ಧಲದಿನ್ನಿ ಟ್ರಸ್ಟನ ಲೋಗೋ ಬಿಡುಗಡೆಯನ್ನು ಎಸ.ವಿ.ಎಂ ಉಪಾಧ್ಯಕ್ಷರಾದ ಶಾರದ ಮಲ್ಲಿಕಾರ್ಜುನ ಪಾಟೀಲ ಯದ್ಧಲದಿನ್ನಿ ಮಾಡಿದರು. ನಂತರ ನರಸಿಂಗ ಕಾಲೇಜು ವಿದ್ಯಾರ್ಥಿಗಳಿಂದ ದೀಪದಾನ ಕಾರ್ಯಕ್ರಮ ಜರಗಿತು. ಸಿದ್ದರಾಮಪ್ಪ ಸಾಹುಕಾರ, ಗಿರಿಮಲ್ಲಣ್ಣಗೌಡ ಕರಡಕಲ್, ವೈದ್ಯಾಧಿಕಾರಿಯಾದ ಡಾ. ರುದ್ರಗೌಡ ಪಾಟೀಲ, ಡಾ ಆನಂದ ಚೌದ್ರಿ, ಡಾ.ಲಕ್ಷಪ್ಪ, ಡಾ ಕಡದಲ್ಲಿ, ಅವಿನಾಶ ಅಕ್ಕಿ, ಡಾ ಭೀಮಾಶಂಕರ ಸಂಗೇಪಾಗ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಅಂಬಿಕಾ ವಟಗಲ್, ಶಕುಂತಲಾ ಬಾಳೆಗೌಡ್ರು ಇದ್ದರು. ಶೋಭಾ ನಿರೂಪಿಸಿದರು.

# ಅತಿಥಿ ಉಪನ್ಯಾಸಕ ನೇಮಕಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್– 10 : ಯಾದಗಿರಿ ಜಿಲ್ಲೆಯ 2025–26ನೇ ಸಾಲಿನ ಸರಕಾರಿ ಪದವಿ ಪೂರ್ವ ಕಾಲೇಜುದಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕರು ಪಂಡಿತ್ ಆರ್.ಪವರ್ ಅವರು ತಿಳಿಸಿದ್ದಾರೆ.

ದಾಖಲಾತಿಗಳು : ಹೆಸರು, ಪೂರ್ಣ ವಿಳಾಸ (ದೂರವಾಣಿ, ಮೋಬೈಲ್ ಸಂಖ್ಯೆಯೊಂದಿಗೆ), ಜನ್ಮ ದಿನಾಂಕ, ವಿದ್ಯಾರ್ಹತೆ ಮತ್ತು ವಾಸಸ್ಥಳದ ಬಗ್ಗೆ ಮಾಹಿತಿ ಅರ್ಜಿ ಸಲ್ಲಿಸಬೇಕು, ಸ್ನಾತಕೋತ್ತರ ಪದವಿಯ ದೃಢೀಕೃತ ಅಂಕಪಟ್ಟಿಗಳು. ಬಿ.ಎಡ್. ಪದವಿ ಪಡೆದ ದೃಢೀಕೃತ ಅಂಕಪಟ್ಟಿಗಳು. ಜನ್ಮ ದಿನಾಂಕಕ್ಕೆ ಸಂಬಂಧಿಸಿದ ದಾಖಲೆಯ (ಎಸ್.ಎಸ್.ಎಲ್.ಸಿ ಅಂಕ ಪಟ್ಟಿ) ದೃಢೀಕೃತ ಪ್ರತಿ ಲಗತ್ತಿಸಬೇಕು, ಅರ್ಹ ಅಭ್ಯರ್ಥಿಗಳು 2025ರ ಜೂನ್ 13ರ ಒಳಗೆ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಅರ್ಜಿ ಸಲ್ಲಿಸಬೇಕು. ಕಾಲೇಜಿನ ಪ್ರಾಂಶುಪಾಲರು ಮೇರಿಟ್ ಆಧಾರದಲ್ಲಿ ನೇಮಕ ಮಾಡಿರುವ ಆಯ್ಕೆ ಪಟ್ಟಿಯನ್ನು ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಯಾದಗಿರಿ 2025ರ ಜೂನ್ 16ರ ಒಳಗೆ ಅನುಮೋದನೆ ಪಡೆಯಬೇಕು, ಯಾದಗಿರಿ ಜಿಲ್ಲೆಯ ಸರಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಷಯವಾರು ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳುವ ಭಾಷೆ, ವಿಷಯಗಳ ಕಾಲೇಜುವಾರು ಹುದ್ದೆಗಳ ಮಾಹಿತಿಯನ್ನು ಉಪನಿರ್ದೇಶಕರ ಕಛೇರಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಯಾದಗಿರಿ ಸೂಚನಾ ಫಲಕದಲ್ಲಿ ಪ್ರಕಟಿಸಿದೆ ಹಾಗೂ ಸಂಬಂಧಿಸಿದ ಪದವಿ ಪೂರ್ವ ಕಾಲೇಜುಗಳ ಸೂಚನಾ ಫಲಕದಲ್ಲಿ ಪ್ರಕಟಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರಸಭೆ 1884 ಅರ್ಜಿಗಳಲ್ಲಿ 1034 ಬಿ,ಖಾತೆ ವಿತರಣೆ –ಪೌರಾಯುಕ್ತ ಜೀವನಕುಮಾರ ಕಟ್ಟಿಮನಿ,

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಬಿ,ಖಾತೆಪ್ರಾರಂಭದಿಂದ ಇಂದಿನವರೆಗೂ ನಗರಸಭೆಗೆ ಒಟ್ಟು 1884 ಅರ್ಜಿಗಳನ್ನು ಸ್ವೀಕರಿಸಲಾಗಿತ್ತು, ಅವುಗಳಲ್ಲಿ ಇಲ್ಲಿಯವರೆಗೂ 1034 ಬಿ,ಖಾತೆಗಳನ್ನು ನೀಡಲಾಗಿದೆ, 230 ಅರ್ಜಿಗಳು ಸಮಪರ್ಕವಾದ ಸೂಕ್ತ ದಾಖಲೆಗಳಿಲ್ಲದೆ ಉಳಿದುಕೊಂಡಿದ್ದು, ಇನ್ನೂಳಿದ 638 ಅರ್ಜಿಗಳನ್ನು ಅಧಿಕಾರಿಗಳ ಲಾಗೀನಗಳಲ್ಲಿ ಚಾಲ್ತಿಯಲ್ಲಿದೆ ಎಂದು ನಗರಸಭೆ ಪೌರಾಯುಕ್ತರಾದ ಜೀವನಕುಮಾರ ಕಟ್ಟಿಮನಿಯವರು



ಪತ್ರಿಕೆಗೆ ತಿಳಿಸಿದ್ದಾರೆ,

ನಗರಸಭೆಗೆಬರುವಸಾರ್ವಜನಕರು ತಮ್ಮ ಕಾರ್ಯ ಕೇಲಸಗಳಿಗೆ ಮಧ್ಯವರ್ತಿಗಳನ್ನುಕರೆ ತರದೆ ನೇರವಾಗಿ ಸಂಭಂಧಪಟ್ಟ ಅಧಿಕಾರಿಗಳ ಹತ್ತಿರ ಹೋಗಿ ನಿಮ್ಮ ಕೇಲಸಗಳನ್ನು ಮಾಡಿಸಿಕೊಳ್ಳಬೇಕು, ಯಾರಾದರೂ ಮಧ್ಯವರ್ತಿಗಳು ಕೇಲಸಗಳಿಗೆ ಅಡ್ಡಿಪಡಿಸಿದಲ್ಲಿ ಅಂತವರ ವಿರುದ್ಧ ಕ್ರೀಮಿನಲ್ ಮೋಕ್ಕದ್ದೆಮ್ಮೆ ದಾಖಲು ಮಾಡಲಾಗುತ್ತದೆ, ಜನರು ಪರಸ್ಪರ ಸಹಕಾರಗಳೊಂದಿಗೆ ಅಧಿಕಾರಿಗಳೊಂದಿಗೆ ತಮ್ಮ ಅವಶ್ಯಕ ಕಾರ್ಯ ಚಟುವಟಿಕೆಗಳನ್ನು ಮಾಡಿಸಿಕೊಂಡು ಅನೂಕೂಲ ಮಾಡಿಕೊಡಬೇಕು ಎಂದು ಪೌರಾಯುಕ್ತರಾದ ಜೀವನಕುಮಾರ ಕಟ್ಟಿಮನಿಯವರು ತಿಳಿಸಿದ್ದಾರೆ,

# ಕುಡಿಯುವ ನೀರು ಶುದ್ಧ ಪೂರೈಸಿ : ನೀರಿನ ಸಮಸ್ಯೆ ಬಗೆಹರಿಸಲು ಮುಂಜಾಗೃತ ಕ್ರಮ ವಹಿಸಿ : ಸಚಿವ ಶರಣಬಸಪ್ಪ ದರ್ಶನಾಪೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 10– : ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಲ್ಲಿ ನೀರಿನ ಸಮಸ್ಯೆ ಬಗೆಹರಿಸಲು ಮುಂಜಾಗ್ರತೆ ಕ್ರಮಗಳ ವಹಿಸುವ ಮೂಲಕ ಅಧಿಕಾರಿಗಳು ಸಾರ್ವಜನಿಕರ ಕಷ್ಟಗಳಿಗೆ ಸ್ಪಂದಿಸಬೇಕು ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ದರ್ಶನಾಪೂರ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಇಂದು ಜಿಲ್ಲೆಯ ಕುಡಿಯುವ ನೀರಿನ ಸ್ಥಿತಿಗತಿಗಳ ಬಗ್ಗೆ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅವರು ಕುಡಿಯುವ ನೀರಿನ ಸಮಸ್ಯೆ ಮತ್ತು ಪರಿಹಾರವಾಗಿ ಬಾಡಿಗೆ ಕೊಳವೆಬಾವಿಗಳ ಮೂಲಕ ನೀರು ಪೂರೈಸುತ್ತಿರುವ ಗ್ರಾಮಗಳಿಗೆ ಸ್ವಚ್ಚ, ಶುದ್ಧ ನೀರು ಒದಗಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು. ಯಾದಗಿರಿ ಜಿಲ್ಲೆಯಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಅಮೃತ 2.0 ಯೋಜನೆಯಡಿ ಒಟ್ಟು 7 ಪಟ್ಟಣಗಳು ಆಯ್ಕೆಯಾಗಿದ್ದು, ಒಟ್ಟು 340.92 ಕೋ.ರೂ.ಗಳ ಹಂಚಿಕೆಯಾಗಿರುತ್ತದೆ. ಕೇಂದ್ರ ಸರ್ಕಾರದ ಪಾಲು ಶೇ.50 ರಷ್ಟು, ರಾಜ್ಯ ಸರ್ಕಾರದ ಪಾಲು ಶೇ.40 ರಷ್ಟು, ಸ್ಥಳೀಯ ಸಂಸ್ಥೆಯ ಪಾಲು ಶೇ.10 ರಷ್ಟು ಇರುತ್ತದೆ ಎಂದು ತಿಳಿಸಿದರು.

ಅಮೃತ 2.0 ಯೋಜನೆಯಡಿಯಲ್ಲಿ ನೀರು ಸರಬರಾಜು ಕಾಮಗಾರಿಗಳನ್ನು ಒಟ್ಟು 5 ಹಂತಗಳಲ್ಲಿ ಕೈಗೊಳ್ಳಲಾಗಿದೆ, ಈ ಯೋಜನೆಯಡಿ 7 ಪಟ್ಟಣಗಳಾದ ಹುಣಸಗಿ, ಕೆಂಭಾವಿ, ಕಕ್ಕೇರಾ, ಶಹಾಪೂರ, ಭೀಮರಾಯನಗುಡಿ, ಯಾದಗಿರಿ, ಗುರುಮಿಠಕಲ್ ಕಾಮಗಾರಿಗಳು ಪ್ರಗತಿಯಲ್ಲಿವೆ, ಈ ಕಾಮಗಾರಿಗಳನ್ನು 2 ವರ್ಷಗಳಲ್ಲಿ ಪೂರ್ಣಗೊಳಿಸಲು ಉದ್ದೇಶಿಸಿದೆ ಎಂದರು. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ, 1ನೇ ಕಂತು ಅನುದಾನ ಕ್ರಿಯಾ ಯೋಜನೆಗೆ ನೀಡಲಾಗಿದ್ದು, ಒಟ್ಟು 8 ಕಾಮಗಾರಿಗಳಲ್ಲಿ 4 ಪೂರ್ಣಗೊಂಡಿದ್ದು, ಉಳಿದ ಕಾಮಗಾರಿಗಳು ಶೀಘ್ರದಲ್ಲಿ ಮುಗಿಯುವ ಹಂತದಲ್ಲಿರುತ್ತದೆ. 2ನೇ ಕಂತು ಅನುದಾನಕ್ಕೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ.

ಒಟ್ಟು 8 ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. 3 ಮತ್ತು 4ನೇ ಕಂತು ಅನುದಾನ ನೇರವಾಗಿ ನಗರ ಸ್ಥಳೀಯ ಸಂಸ್ಥೆಗಳಿಗೆ ಬಿಡುಗಡೆಯಾಗಲಿದ್ದು, ಕೆಂಭಾವಿ, ಗುರುಮಿಠಕಲ್, ಹುಣಸಗಿ, ಸಂಸ್ಥೆಗಳ ಕ್ರಿಯಾ ಯೋಜನೆ ಅನುಮೋದನೆಯಾಗಿದ್ದು, ಶಹಾಪೂರ, ಸುರಪುರ, ನಗರಸಭೆಗಳು ಕ್ರಿಯಾ ಯೋಜನೆ ಸಲ್ಲಿಸಿದ್ದು, ಅನುಮೋದನೆ ನೀಡಬೇಕಾಗಿದೆ, ಯಾದಗಿರಿ ಕಕ್ಕೇರಾ ನಗರ ಸ್ಥಳೀಯ ಸಂಸ್ಥೆಗಳಿಂದ ಕ್ರಿಯಾ ಯೋಜನೆ ಪಡೆಯಬೇಕಾಗಿದೆ ಸೂಚಿಸಿದರು. ಪ್ರಸ್ತುತ ಸಾಲಿನ ಯಾದಗಿರಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರಿಗಾಗಿ ಬಿಡುಗಡೆ ಮಾಡಿರುವ ಅನುದಾನ ಯಾದಗಿರಿ, ಶಹಾಪೂರ, ಸುರಪುರ, ನಗರಸಭೆ ಹಾಗೂ ಗುರುಮಿಠಕಲ್, ಕೆಂಭಾವಿ, ಕಕ್ಕೇರಾ ಪುರಸಭೆ, ಮತ್ತು ಹುಣಸಗಿ ಪಟ್ಟಣ ಪಂಚಾಯತ್ ಸೇರಿ ಜಿಲ್ಲೆಯಾದ್ಯಂತ ಒಟ್ಟು 50.96 ಕೋ.ರೂ.ಗಳ ಅನುದಾನ ಸರ್ಕಾರದಿಂದ ಬಿಡುಗಡೆಯಾಗಿದೆ ಎಂದು ತಿಳಿಸಿದರು.

ಎಚ್‌ಎಫ್‌ಸಿ ಕುಡಿಯುವ ನೀರು ಅನುದಾನವು ನೇರವಾಗಿ ನಗರ ಸ್ಥಳೀಯ ಸಂಸ್ಥೆಗಳಿಗೆ ಬಿಡುಗಡೆ–ಯಾಗಿದ್ದು, ಶಹಾಪೂರ, ಗುರುಮಿಠಕಲ್, ಕೆಂಭಾವಿ, ಕಕ್ಕೇರಾ ಸಂಸ್ಥೆಗಳ ಕ್ರಿಯಾ ಯೋಜನೆ ಅನುಮೋದನೆಯಾಗಿದ್ದು, ಸುರಪುರ ಹಾಗೂ ಹುಣಸಗಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಬೇಕಾಗಿದೆ, ಯಾದಗಿರಿಯಿಂದ ಮಾತ್ರ ಕ್ರಿಯಾ ಯೋಜನೆ ಪಡೆಯಬೇಕಾಗಿದೆ ಸೂಚಿಸಿದರು.

ಕುಡಿಯುವ ನೀರು ಸರಬರಾಜು ಯೋಜನೆಗಳು ಮಂಡಳಿಯಿಂದ ಅನುಷ್ಠಾನಗೊಂಡು ನಿರ್ವಹಣೆಯಲ್ಲಿರುವ ಯೋಜನೆಗಳಡಿ ಸುರಪುರ ನಗರದ 2ನೇ ಹಂತದ ಕುಡಿಯುವ ನೀರು ಸರಬರಾಜು ಯೋಜನೆಯನ್ನು 2023ರ ಮಾರ್ಚ್ 18 ರಂದು ಪೂರ್ಣಗೊಳಿಸಿ ಚಾಲನೆಗೊಳಿಸಿದೆ. ಈ ಯೋಜನೆಯ 5 ವರ್ಷದ ನಿರ್ವಹಣೆಯಂತೆ 2023ರ ಏಪ್ರಿಲ್ 1 ರಿಂದ ಪ್ರಾರಂಭಿಸಲಾಗಿದೆ. ಈ ಯೋಜನೆಯಿಂದ ಸುರಪುರ ನಗರಕ್ಕೆ 24*7 ನಿರಂತರ ನೀರು ಸರಬರಾಜು ಮಾಡಲಾಗುತ್ತಿದೆ ಎಂದರು. ಶಹಾಪೂರ ನಗರಕ್ಕೆ ಸನ್ನತ್ತಿ ಬ್ರಿಡ್ಜ ಕಮ್ ಬ್ಯಾರೇಜ್ ಮೂಲಕ ಸಗಟು ಕುಡಿಯುವ ನೀರು ಸರಬರಾಜು ಯೋಜನೆಯ ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ. ಈ ಯೋಜನೆಯನ್ನು 2025ರ ಜೂನ್ 30 ರಂದು ಚಾಲನೆಗೊಳಿಸಲು ಉದ್ದೇಶಿಸಿದೆ. ಶಹಾಪೂರ ನಗರದ ಒಳಚರಂಡಿ ಯೋಜನೆಯ ಸರ್ಕಾರದಿಂದ ಅನುಮೋದನೆಯಾಗಿರುತ್ತದೆ, ಈ ಯೋಜನೆಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು, ಗುರುಮಿಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶರಣಗೌಡ ಕಂದುಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲ ನಾಯಕ, ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಯಾದಗಿರಿ ನಗರಸಭೆ ಪೌರಾಯುಕ್ತ ಉಮೇಶ ಚವ್ಹಾಣ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಜೂ.12 ರಂದು 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.10–ಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ವಕೀಲರ ಸಂಘ, ವಿವಿಧ ಇಲಾಖೆಗಳು ಮತ್ತು ಇತರೆ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕಾರ್ಯಕ್ರಮವನ್ನು ಜೂ.12 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ. ಇದಕ್ಕೂ ಮುನ್ನ ಅಂದು ಬೆಳಿಗ್ಗೆ 09.30 ಗಂಟೆಗೆ ಹಳೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ಗಡಿಗಿ ಚೆನ್ನಪ್ಪ ವೃತ್ತ–ಬೆಂಗಳೂರು ರಸ್ತೆ–ತೇರು ಬೀದಿ ಹಾಗೂ ಗಡಿಗಿ ಚೆನ್ನಪ್ಪ ವೃತ್ತ ಮಾರ್ಗವಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ಜಾಥಾ ನಡೆಯಲಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಜಾಥಾಗೆ ಚಾಲನೆ ನೀಡುವರು. ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಉದ್ಘಾಟಿಸುವರು.

ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಬಳ್ಳಾರಿ ಉಪ ವಿಭಾಗ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಜಿ. ಖೈನೂರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕಿ ಉಮಾದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮ ಬ್ರಹ್ಮಂ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಸಿ.ಎಂ. ಗುರುಬಸವರಾಜ್, ಸಂಪನ್ಮೂಲ ವ್ಯಕ್ತಿಯಾಗಿ ವಕೀಲರು ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮಾಜಿ ಸದಸ್ಯರಾದ ತ್ರಿವೇಣಿ ಪತ್ತಾರ್ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ಕಾರ್ಮಿಕ ನಿರೀಕ್ಷಕರಾದ ಪರಶುರಾಮ್, ರಮೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಇದ್ದರು.

# ದಶಕ ಪೂರೈಸಿದ ಅಂತಾರಾಷ್ಟ್ರೀಯ ಯೋಗ ದಿನ

ಇಂದು ವಿಶ್ವದ ಎಲ್ಲಾ ಜನಾಂಗದವರನ್ನುಭಾರತೀಯ ಸಂಸ್ಕೃತಿಕಲೆಯಾದಯೋಗವು ಬಲವಾಗಿ ಆಕರ್ಷಿಸುತ್ತಾ ಇದೆ. ಯೋಗದಿಂದ ದೈಹಿಕ, ಮಾನಸಿಕ, ಸಾಮಾಜಿಕ ಹಾಗೂ ಆಧ್ಯಾತ್ಮಿಕವಾಗಿ ವಿಕಸನಗೊಳ್ಳಲು ಸಹಕಾರಿಯಾಗುತ್ತದೆ.

ಯೋಗವನ್ನು ಜೂನ್ 21 ರಂದು ವಿಶ್ವ ಯೋಗ ಅಂತಾರಾಷ್ಟ್ರೀಯ ದಿನವನ್ನಾಗಿ ಆಚರಿಸಬೇಕೆಂದು ಭಾರತದ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ 193 ಸದಸ್ಯರ ವಿಶ್ವ ಸಂಸ್ಥೆಯ ಮಹಾಸಭೆ ಸೆಪ್ಟೆಂಬರ್ 27, 2014 ರಂದು ತಿಳಿಸಿದರು. ಈ ಬಗ್ಗೆ ವಿಶ್ವಸಂಸ್ಥೆ ಸಾಮಾನ್ಯ ಸಭೆಯಲ್ಲಿ ಡಿಸೆಂಬರ್ 11, 2014 ರಂದು ಚರ್ಚಿಸಿ ಸುಮಾರು 175ಕ್ಕೂ ಹೆಚ್ಚು ರಾಷ್ಟ್ರಗಳು ಈ ಸಭೆಯಲ್ಲಿ ಒಪ್ಪಿಗೆ ಸೂಚಿಸಿತು. ಒಟ್ಟಾರೆಯಾಗಿ 183 ರಾಷ್ಟ್ರಗಳು ವಿಶ್ವ ಯೋಗ ದಿನವನ್ನಾಗಿ ಆಚರಿಸಲು ಸಹಮತ ನೀಡಿದರು.

ವಿಶ್ವ ಆರೋಗ್ಯ ಸಂಸ್ಥೆಯು 'ಆರೋಗ್ಯ'ವನ್ನು ದೈಹಿಕ, ಮಾನಸಿಕ, ಸಾಮಾಜಿಕವಾಗಿ ಸದೃಢವಾಗಿರುವಸ್ಥಿತಿಯೇಹೊರತು ಕೇವಲ ದೇಹದಾರ್ಢ್ಯ ಅಥವಾ ರೋಗವಿಲ್ಲದ ಸ್ಥಿತಿಯಲ್ಲವೆಂದು ವಿವರಿಸಿದೆ. ಆರೋಗ್ಯವು ಸೂಕ್ತವಾದ ಆಹಾರಕ್ರಮ, ಚಲನೆ, ಚಟುವಟಿಕೆಗಳು ಮತ್ತು ವಿಶ್ರಾಂತಿಯನ್ನು ಆಧರಿಸಿದೆ. ಈ ಮೂರರ ನಡುವೆ ಯಾವುದೇ ಅಸಮತೋಲನವಾದರೆ ಅನಾರೋಗ್ಯಕ್ಕೆ ಕಾರಣವಾಗುತ್ತದೆ ವಿಶ್ರಾಂತಿ ನಡವಳಿಕೆಯ ಶಿಸ್ತಿನೊಂದಿಗೆ ಸಂಬಂಧವಿರುವುದರಿಂದ ಪ್ರಾಯಶಃ ಆಸನಗಳು, ಮತ್ತು ಬಂಧಗಳನ್ನು ಯೋಗದ ಅಭ್ಯಾಸಗಳಲ್ಲಿ ಅಳವಡಿಸಲಾಗಿದೆ.

ಯೋಗವನ್ನು ಪ್ರಪಂಚದಾದ್ಯಂತ ವಿವಿಧ ರೂಪಗಳಲ್ಲಿ ಪ್ರಶಂಸಿಸಲಾಗುತ್ತದೆ. ಇಂದು ವಿಶ್ವವೇ ಯೋಗದ ಕಡೆಗೆ ಮುಖ ಮಾಡುತ್ತಿದೆ. ಯೋಗದ ಬಗ್ಗೆ ಅರಿವು ಮೂಡಿದೆ. ಅಭ್ಯಾಸ ಮಾಡುವವ ಸಂಖ್ಯೆ ಹೆಚ್ಚಾಗುತ್ತದೆ. ಯೋಗ ಕಲಿತವರು (ನಿತ್ಯ ಅಭ್ಯಾಸ ಮಾಡುವವರು) ಅದರ ಪ್ರಯೋಜನಗಳನ್ನು ಇನ್ನೊಬ್ಬರಿಗೆ ಹಂಚುತ್ತಿರುವುದು ಕಂಡುಬಂದಿದೆ. ಹೆಚ್ಚಿನ ಆರೋಗ್ಯ ಸಮಸ್ಯೆ ಉಂಟಾಗುವುದು ಮನಸ್ಸಿನ ದೋಷದಿಂದಲೇ ಎಂಬುದು ದೃಢಪಟ್ಟಿದೆ. ಮನಸ್ಸಿನ ಶಾಂತಿ ನೆಮ್ಮದಿಗೆ ಹಾಗೂ ನಿಯಂತ್ರಣಕ್ಕೆ ನಮ್ಮ ಭಾರತೀಯ ಸಂಸ್ಕೃತಿ ಕಲೆಯಾದ ಯೋಗ ಎಂಬುದೇ ರಾಜಮಾರ್ಗವಾಗಿದೆ. ವೈದ್ಯರು ಈಗ ಔಷಧಗಳೊಂದಿಗೆ ನಡಿಗೆ, ವ್ಯಾಯಾಮ ಹಾಗೂ ಯೋಗ ಮಾಡಿ ಎಂದು ಸೂಚಿಸುತ್ತಾರೆ. ಈಗ ವಿಶ್ವಸಂಸ್ಥೆ ಯೋಗವನ್ನು ಅಂಗೀಕರಿಸಿದೆ.

ಯೋಗದ ಉದ್ದೇಶಗಳು:–ಜೀವನದ ದು:ಖಗಳಿಂದ ಮುಕ್ತವಾಗುವುದು. ಶಾಂತಗೊಳಿಸುವ ವ್ಯವಸ್ಥಿತ ಮತ್ತು ಜಾಗೃತ ಪ್ರಕ್ರಿಯೆ. ಮನಸ್ಸಿನ ದೌರ್ಬಲ್ಯಗಳನ್ನು ಅಳಿಸುತ್ತದೆ. ಅಡಚಣೆಯನ್ನು ಎದುರಿಸಲು ಅಪಾರ ಶಕ್ತಿಯನ್ನು ಉಂಟುಮಾಡುತ್ತದೆ.

ಉಸಿರಾಟವನ್ನು ನಿಧಾನಗೊಳಿಸುತ್ತದೆ ಮತ್ತು ಸಮತೋಲನವನ್ನು ಕಾಯ್ದುಕೊಳ್ಳುತ್ತದೆ. ಸೃಜನಶೀಲತೆಯನ್ನು ಹೆಚ್ಚಿಸುತ್ತದೆ. ಮತ್ತು ಮಾನಸಿಕ ಶಕ್ತಿಯನ್ನು ನೀಡುತ್ತದೆ. ಯೋಗವು ಬುದ್ಧಿಶಕ್ತಿಯನ್ನು ತೀಕ್ಷ್ಣಗೊಳಿಸುತ್ತದೆ ಮತ್ತು ಮನಸ್ಸನ್ನು ಶಾಂತಗೊಳಿಸುತ್ತದೆ. ಬೌದ್ಧಿಕ ಮಟ್ಟದಲ್ಲಿ ಯೋಗವು ಜೀವನದಲ್ಲಿ ಸಂತೋಷವನ್ನು ಹೆಚ್ಚಿಸುತ್ತದೆ. ಭಾವನಾತ್ಮಕ ಮಟ್ಟದಲ್ಲಿ ಮನಸ್ಸಿನಲ್ಲಿ ಅಂತರ್ಗತ ದೈವತ್ವವನ್ನು ಪ್ರಕಟಿಸುತ್ತದೆ.

ಯೋಗದ ಯಮ–ನಿಯಮ, ಆಸನ, ಪ್ರಾಣಾಯಾಮ ಧ್ಯಾನವನ್ನು ಸಾಕಷ್ಟು ನೆಮ್ಮದಿ, ಶಾಂತಿ ದೊರಕುತ್ತದೆ.

ಯೋಗವು ಗುರಿ:–ಯೋಗವು ಸಂಸ್ಕೃತದ 'ಯುಜ್' ಎಂಬ ಧಾತುವಿನಿಂದಾಗಿದ್ದು ಸೇರು, ಜೋಡಿಸು, ಅಥವಾ ಒಂದಾಗು ಎಂಬ ಅರ್ಥ ಹೊಂದಿದೆ. ನಿತ್ಯ ಸತ್ಯದೊಂದಿಗೆ ಆತ್ಮದ ಸಂಯೋಗ, ದ್ವಂದ್ವಗಳ ಗೆಲುವಿನಿಂದ ಏಳುವ ಕಲಬೆರಕೆಯಿಲ್ಲದ ಒಟ್ಟಾರೆ ಪರಮಾನಂದದ ಸ್ಥಿತಿಯ ಸಂಯೋಜನೆಯೇ ಯೋಗವಾಗಿದೆ. ಯೋಗದ ಅಧ್ಯಯನದಿಂದ ಸೂಕ್ಷ್ಮ ಗ್ರಹಿಕೆ ಶಕ್ತಿಯ ಮೊನಚನ್ನು ಶಿಸ್ತುಬದ್ಧಗೊಳಿಸುತ್ತದೆ ಹಗೂ ಆತ್ಮದ ನೈಜ ಪ್ರಕೃತಿಯನ್ನು ತಿಳಿಯುವೆಡೆಗೆ ಕೊಂಡೊಯ್ಯುತ್ತದೆ ಈ ಆತ್ಮವು ಮಾನವ ಜ್ಞಾನದಿಂದ ಅಥವಾ ಬುದ್ಧಿಮಾತ್ರದಿಂದಲೂ ಪೂರ್ಣವಾಗಿ ಅರಿಯಲು ಸಾಧ್ಯವಿಲ್ಲ. ಯೋಗದ ಅಧ್ಯಯನ ಮತ್ತು ಅಭ್ಯಾಸ ಶುದ್ಧ ಜ್ಞಾನದ ಸ್ಥಿತಿಯನ್ನು ಪಡೆಯಲು ಹಾಗೂ ಆಂತರಿಕವಾಗಿ ಅರಿಯಲು ಸಾಧ್ಯವಾಗಿಸುತ್ತದೆ.

ಯೋಗವು ವೈವಿಧ್ಯಮಯ ಶ್ರೇಣಿಯ ವಿಷಯಗಳನ್ನು ಹೊಂದಿದೆ. ಒಬ್ಬರ ಜೀವನದಲ್ಲಿ ಸಮತೋಲನ ಮತ್ತು ನಿಯಂತ್ರಣವನ್ನು ಪಡೆಯುವುದು ಯೋಗದ ಪ್ರಾಥಮಿಕ ಗುರಿಯಾಗಿದೆ ಎಂದು ಹೇಳಬಹುದು. ಗೊಂದಲ ಮತ್ತು ತೊಂದರೆಯಿಂದ ಒಬ್ಬರನ್ನು ಮುಕ್ತಗೊಳಿಸಲು ಯೋಗ ಮತ್ತು ವ್ಯಾಯಾಮ ಮತ್ತು ಉಸಿರಾಟದ ನಿಯಂತ್ರಣದ ಅಭ್ಯಾಸದಿಂದ ಬರುವ ಶಾಂತತೆಯ ಭಾವವನ್ನು ಒದಗಿಸುವುದು.

ಯೋಗದ ಅಭ್ಯಾಸವು ನಿಮ್ಮೊಳಗೆ ಆಶಾವಾದವನ್ನು ಸ್ಥಾಪಿಸುತ್ತದೆ. ಪರಿಪೂರ್ಣ ಆರೋಗ್ಯ, ಆಧ್ಯಾತ್ಮಿಕ ನೆಮ್ಮದಿ ಮತ್ತು ಒಟ್ಟು ಯೋಗಕ್ಷೇಮದ ಹಾದಿಯಲ್ಲಿರುವಾಗ ಉತ್ತಮವಾಗಿ ಗಮನಹರಿಸಲು ಮತ್ತು ನಿಮ್ಮ ದಾರಿಯಲ್ಲಿನ ಯಾವುದೇ ಅಡೆತಡೆಗಳನ್ನು ನಿವಾರಿಸಲು ಇದು ನಿಮಗೆ ಸಹಾಯ ಮಾಡುತ್ತದೆ.

ಯೋಗವನ್ನು ಅಭ್ಯಾಸ ಮಾಡುವುದರಿಂದ ದೇಹವನ್ನು ಶುದ್ಧೀಕರಿಸುತ್ತದೆ ಮತ್ತು ನಿರ್ವಿಷಗೊಳಿಸುತ್ತದೆ. ದೇಹದ ಮೂಲಕ ತಾಜಾ ರಕ್ತ ಪರಿಚಲನೆ ಹೆಚ್ಚಿಸುವ ಮೂಲಕ, ಅನಿಯಮಿತ ಜೀವನಶೈಲಿ, ಅನಾರೋಗ್ಯಕರ ಅಭ್ಯಾಸಗಳು ಮತ್ತು ಕಳಪೆ ಭಂಗಿಗಳ ನೇರ ಪರಿಣಾಮವಾಗಿರುವ ಜೀವಾಣುಗಳನ್ನು ಶುದ್ಧೀಕರಿಸಲು ಮತ್ತು ಹೊರಹಾಕಲು ನಿಮಗೆ ಸಾಧ್ಯವಾಗುತ್ತದೆ.

**ಅಂತಾರಾಷ್ಟ್ರೀಯ ಯೋಗ ದಿನದ ಉದ್ದೇಶಗಳು**

ಯೋಗ ದಿನವು ಜನರಿಗೆ ಯೋಗದ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸಲು ಮತ್ತು ಅವುಗಳನ್ನು ಪ್ರಕೃತಿಯೊಂದಿಗೆ ಸಂಪರ್ಕಿಸಲು ಸಹಾಯ ಮಾಡುತ್ತದೆ. ವಿಶ್ವ ಆರೋಗ್ಯ ಸವಾಲಿನ ಕಾಯಿಲೆಗಳ ಪ್ರಮಾಣವನ್ನು ಕಡಿಮೆ ಮಾಡಲು ಅಂತಾರಾಷ್ಟ್ರೀಯ ಯೋಗವು ಸಹಾಯ ಮಾಡುತ್ತದೆ ಮತ್ತು ಯೋಗ ದಿನವನ್ನು ಆಚರಿಸುವ ಮೂಲಕ ಜನರಲ್ಲಿ ಆಧ್ಯಾತ್ಮಿಕ ಜಾಗೃತಿಯನ್ನು ಬೆಳೆಸುವ ಗುರಿಯನ್ನು ಹೊಂದಿದೆ.

ದೈಹಿಕ ಮತ್ತು ಮಾನಸಿಕ ಕಾಯಿಲೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಮತ್ತು ಯೋಗದ ಮೂಲಕ ಪರಿಹಾರಗಳನ್ನು ಒದಗಿಸಲು ಯೋಗ ಸಹಾಯ ಮಾಡುತ್ತದೆ. ಇದು ಮನಸ್ಸಿನ ಶಾಂತಿ, ಒತ್ತಡ ರಹಿತ ವಾತಾವರಣದಲ್ಲಿ ಬದುಕಲು ಅಗತ್ಯವಾದ ಸ್ವಯಂ ಅರಿವುಗಾಗಿ ಧ್ಯಾನದ ಅಭ್ಯಾಸವನ್ನು ಬೆಳೆಸುವ ಗುರಿಯನ್ನು ಹೊಂದಿದೆ.

ಯೋಗವು ಭಾರತದ ಪ್ರಾಚೀನ ಸಂಪ್ರದಾಯದ ಅಮೂಲ್ಯ ಕೊಡುಗೆಯಾಗಿದೆ. ಇದು ಮನಸ್ಸು ಮತ್ತು ದೇಹದ ಏಕತೆಯನ್ನು ಸಾರುತ್ತದೆ. ಚಿಂತನೆ ಮತ್ತು ಕ್ರಿಯೆ; ಸಂಯಮ ಮತ್ತು ನೆರವೇರಿಕೆ; ಮನುಷ್ಯ ಮತ್ತು ಪ್ರಕೃತಿಯ ನಡುವಿನ ಸಾಮರಸ್ಯ; ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಸಮಗ್ರ ವಿಧಾನ. ಇದು ವ್ಯಾಯಾಮದ ಬಗ್ಗೆ ಅಲ್ಲ, ನಿಮ್ಮೊಂದಿಗೆ, ಜಗತ್ತು ಮತ್ತು ಪ್ರಕೃತಿಯೊಂದಿಗೆ ಏಕತೆಯ ಭಾವವನ್ನು ಕಂಡುಹಿಡಿಯುವುದು. ನಮ್ಮ ಜೀವನಶೈಲಿಯನ್ನು ಬದಲಾಯಿಸುವ ಮೂಲಕ ಮತ್ತು ಪ್ರಜ್ಞೆಯನ್ನು ಸೃಷ್ಟಿಸುವ ಮೂಲಕ, ಅದು ಯೋಗಕ್ಷೇಮಕ್ಕೆ ಸಹಾಯವಾಡುತ್ತದೆ.

2025 ರ ಥೀಮ್ ದೈಹಿಕ, ಮಾನಸಿಕ ಮತ್ತು ಪರಿಸರ ಯೋಗಕ್ಷೇಮವನ್ನು ಉತ್ತೇಜಿಸುವಲ್ಲಿ ಯೋಗದ ಪಾತ್ರವನ್ನು ಎತ್ತಿ ತೋರಿಸುತ್ತದೆ. ಸುಸಿರತೆ; ಮತ್ತು ಏಕಾಗ್ರತೆ–ಗಾಗಿ ಜಾಗತಿಕ ಕರೆಗಳೊಂದಿಗೆ ಹೊಂದಿಕೆಯಾಗುತ್ತದೆ. 2014ರಲ್ಲಿ ಭಾರತದ ಪ್ರಸ್ತಾವನ್ನು ಅನುಸರಿಸಿ ವಿಶ್ವಸಂಸ್ಥೆಯು ಜೂನ್ 21ನ್ನು ಅಂತರಾಷ್ಟ್ರೀಯ ಯೋಗ ದಿನವೆಂದು ಗುರುತಿಸಿದಾಗಿನಿಂದ ಒಂದು ದಶಕದ ಯಶಸ್ಸಿನ ಮೇಲೆ ಇದು ನಿರ್ಮಿಸಲ್ಪಟ್ಟಿದೆ.

2025 ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಮಾರ್ಗದರ್ಶನ ನೀಡಲು 10 ವಿಶಿಷ್ಟ ಕ್ರಾರ್ಯಕ್ರಮಗಳು "2025ರ ಯೋಗ ದಿನದ ಥೀಮ್ 'ಒಂದು ಭೂಮಿಗಾಗಿ ಯೋಗ ಒಂದು ಆರೋಗ್ಯ' ಎಂದು ಇರಿಸಲಾಗಿದೆ.

ಈ ವರ್ಷದ ಚಟುವಟಿಕೆಗಳು ಜಾಗತಿಕ ಕಾರ್ಯಕ್ರಮದ 11ನೇ ಆವೃತ್ತಿಯನ್ನು ಗುರುತಿಸಲು 10 ವಿಶಿಷ್ಟ ಸಹಿ ಕಾರ್ಯಕ್ರಮಗಳ ಸುತ್ತ ಸುತ್ತುತ್ತವೆ. ಅವುಗಳೆಂದರೆ

* ಯೋಗ ಸಮಾವೇಶ : ದಿವ್ಯಾಂಗರು, ಹಿರಿಯ ನಾಗರಿಕರು, ಮಕ್ಕಳಿಗಾಗಿ ವಿಶೇಷ ಯೋಗ ಕಾರ್ಯಕ್ರಮಗಳು.
* ಯೋಗ ಪ್ರಭಾವ – ಸಾರ್ವಜನಿಕ ಆರೋಗ್ಯದಲ್ಲಿ ಯೋಗದ ಪಾತ್ರದ ಮೇಲೆ ದಶಕದ ಪ್ರಭಾವದ ಮೌಲ್ಯಮಾಪನ.
* ಯೋಗ ಸಂಪರ್ಕ – ಪ್ರಸಿದ್ಧ ಯೋಗ ತಜ್ಞರು ಮತ್ತು ಆರೋಗ್ಯ ವೃತ್ತಿಪರರನ್ನು ಒಳಗೊಂಡ ವರ್ಚುವಲ್ ಜಾಗತಿಕ ಯೋಗ ಶೃಂಗಸಭೆ.
* ಹರಿತ್ ಯೋಗ – ಯೋಗವನ್ನು ಮರ ನೆಡುವಿಕೆ ಮತ್ತು ಶುಚಿಗೊಳಿಸುವ ಅಭಿಯಾನಗಳೊಂದಿಗೆ ಸಂಯೋಜಿಸುವ ಸುಸ್ಥಿರತೆ–ಚಾಲಿತ ಉಪಕ್ರಮ.
* ಯೋಗ ಅನ್‌ಪ್ಲಗ್ಡ್ – ಯುವಜನರನ್ನು ಯೋಗದತ್ತ ಆಕರ್ಷಿಸುವ ಕಾರ್ಯಕ್ರಮ
* ಯೋಗ ಮಹಾ ಕುಂಭ –10 ಸ್ಥಳಗಳಲ್ಲಿ ವಾರಪೂರ್ತಿ ನಡೆಯುವ ಉತ್ಸವ, ಗೌರವಾನ್ವಿತ ಪ್ರಧಾನ ಮಂತ್ರಿಗಳ ನೇತೃತ್ವದಲ್ಲಿ ಕೇಂದ್ರ ಆಚರಣೆಯಲ್ಲಿ ಮುಕ್ತಾಯಗೊಳ್ಳುತ್ತದೆ.
* ಸಂಯೋಗ–ಸಮಗ್ರ ಯೋಗಕ್ಷೇಮಕ್ಕಾಗಿ ಆಧುನಿಕ ಆರೋಗ್ಯ ರಕ್ಷಣೆಯೊಂದಿಗೆ ಯೋಗವನ್ನು ಸಂಯೋಜಿಸುವ 100 ದಿನಗಳ ಉಪಕ್ರಮ.

2025ರ ಅಂತಾರಾಷ್ಟ್ರೀಯ ಯೊಗ ದಿನಾಚರಣೆಗೆ ಜಗತ್ತು ಸಜ್ಜಾಗುತ್ತಿದ್ದಂತೆ, 'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ವಿಷಯವು ಕೇಂದ್ರ ಹಂತವನ್ನು ತೆಗೆದುಕೊಳ್ಳುತ್ತದೆ ಮತ್ತು ಅದರ ಸುತ್ತ ಸುತ್ತುವ ವ್ಯಾಪಕ ಶ್ರೇಣಿಯ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ. 2025ರ ವಿಷಯವು ದೈಹಿಕ, ಮಾನಸಿಕ ಮತ್ತು ಪರಿಸರ ಯೋಗಕ್ಷೇಮವನ್ನು ಉತ್ತೇಜಿಸುವಲ್ಲಿ ಯೋಗದ ಪಾತ್ರವನ್ನು ಎತ್ತಿ ತೋರಿಸುತ್ತದೆ. ಸುಸ್ಥಿರತೆ ಮತ್ತು ಏಕತೆಗಾಗಿ ಜಾಗತಿಕ ಕರೆಗಳೊಂದಿಗೆ ಹೊಂದಿಕೊಳ್ಳುತ್ತದೆ. 2014ರಲ್ಲಿ ಭಾರತದ ಪ್ರಸ್ತಾಪವನ್ನು ಅನುಸರಿಸಿ ವಿಶ್ವಸಂಸ್ಥೆಯು ಜೂನ್ 21 ಅನ್ನು ಅಂತರರಾಷ್ಟ್ರೀಯ ಯೊಗ ದಿನವೆಂದು ಗುರುತಿಸಿದಾಗಿನಿಂದ ಇದು ಒಂದು ದಶಕದ ಯಶಸ್ಸಿನ ಮೇಲೆ ನಿರ್ಮಿಸಲ್ಪಟ್ಟಿದೆ.

**ಯೋಗ ದಿನಾಚರಣೆ – ಯೋಗಾಭ್ಯಾಸದ ಪ್ರಯೋಜನಗಳು:**

ಯೋಗ, ವ್ಯಾಯಾಮವನ್ನು ಮಾಡುವುದರಿಂದ ಮೆದುಳಿನ ಕಾರ್ಯವನ್ನು ಸುಧಾರಿಸುತ್ತದೆ. ನಮ್ಯತೆಯನ್ನು ಹೆಚ್ಚಿಸುತ್ತದೆ ಮತ್ತು ದೇಹದ ತೂಕವನ್ನು ಸಹ ಕಡಿಮೆ ಮಾಡುತ್ತದೆ. ಯೋಗವನ್ನು ಅಭ್ಯಾಸ ಮಾದುವುದರಿಂದ ದೈಹಿಕ ಮತ್ತು ಮಾನಸಿಕ ಸ್ಥಿತಿಯ ನಡುವೆ ಸಮತೋಲನವನ್ನು ಕಾಯ್ದುಕೊಳ್ಳಲು ಸಹಾಯ ಮಾಡುತ್ತದೆ.

ಇದು ಮೂಲತಃ ದೇಹ ಮತ್ತು ಮನಸ್ಸಿನ ಸ್ವಾಸ್ಥ್ಯಕ್ಕೆ ಕಾರಣವಾಗುವ ಅಭ್ಯಾಸವಾಗಿದೆ. ಯೋಗವನ್ನು ಅಭ್ಯಾಸ ಮಾಡುವುದರಿಂದ ದೇಹ, ಆತ್ಮ ಮತ್ತು ಮನಸ್ಸಿನ ನಡುವೆ ಸಮತೋಲನ ಬರುತ್ತದೆ. ಒತ್ತಡ, ದೈಹಿಕ ದೌರ್ಬಲ್ಯ ಮತ್ತು ಇತರ ಹಲವಾರು ಸಮಸ್ಯೆಗಳನ್ನು ಎದುರಿಸಲು ಯೋಗ ನಮಗೆ ಸಹಾಯ ಮಾಡುತ್ತದೆ. ಯೋಗದ ದೈನಂದಿನ ಅಭ್ಯಾಸವು ಆರೋಗ್ಯಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳಿಂದ ದೂರವಿರಲು ನಮಗೆ ಸಹಾಯ ಮಾಡುತ್ತದೆ. ಯೋಗವು ಸ್ವಯಂ ಗುಣಪಡಿಸುವಿಕೆಯನ್ನು ಉತ್ತೇಜಿಸುತ್ತದೆ, ವೈಯಕ್ತಿಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಸ್ವಯಂ ಪರಿವನ್ನು ಹೆಚ್ಚಿಸುತ್ತದೆ. ಯೋಗವು ಒತ್ತಡದ ಮಟ್ಟ, ನಕಾತಾತ್ಮಕ ಆಲೋಚನೆಗಳು ಮತ್ತು ದೇಹದಿಂದ ನಕಾರಾತ್ಮಕ ಶಕ್ತಿಯನ್ನು ಕಡಿಮೆ ಮಾಡುತ್ತದೆ. ಯೋಗ ಅಧಿವೇಶನದ ನಂತರ, ಒಬ್ಬರು ಪುನರ್ ಯೌವನಗೊಂಡರು ಮತ್ತು ಚೈತನ್ಯವನ್ನು ಅನುಭವಿಸುತ್ತಾರೆ. ಯೋಗವನ್ನು ಅಭ್ಯಾಸ ಮಾಡುವುದರಿಂದ ಮನಸ್ಸಿನ ಸ್ನಾಯುಗಳು ಬಲಗೊಳ್ಳುತ್ತವೆ ಮತ್ತು ವಿಭಿನ್ನ ಸಮಸ್ಯೆಗಳನ್ನು ಎದುರಿಸಲು ಶಕ್ತಿಯನ್ನು ನೀಡುತ್ತದೆ. ಯೋಗಾಭ್ಯಾಸವು ಹೃದಯ ಸಂಬಂಧಿತ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

ಅಂತಾರಾಷ್ಟ್ರೀಯ ಯೋಗ ದಿನದ ಕ್ಷಣಗಣನೆ ಮುಂದುವರೆದಂತೆ, ಐಡಿವೈ ಆಚರಣೆಯ 75 ದಿನಗಳು ಒಂದು ಮಹತ್ವದ ಆರಂಭವನ್ನು ಸೂಚಿಸುತ್ತದೆ. ಸಮಾನ ಉತ್ಸಾಹದಿಂದ, 50ನೆ ಮತ್ತು 25ನೇ ದಿನದ ಮೈಲಿಗಲ್ಲುಗಳನ್ನು ಸ್ಮರಿಸಲಾಗುತ್ತದೆ. ಇದು ಜಾಗತಿಕ ಯೋಗ ಆಂದೋಲವನ್ನು ಹುಟ್ಟುಹಾಕುವ ಭರವಸೆ ನೀಡುವ ಮುಖ್ಯ ಕಾರ್ಯಕ್ರಮಕ್ಕೆ ಕಾರಣವಾಗುತ್ತದೆ. ಈ ಆಚರಣೆಗಳು ಯೋಗದ ಪರಿವರ್ತಕ ಶಕ್ತಿಯನ್ನು ಹರಡುವ ಗುರಿಯನ್ನು ಹೊಂದಿವೆ. ರಾಷ್ಟ್ರಗಳು ಮತ್ತು ಹೃದಯಗಳನ್ನು ಯೋಗಕ್ಷೇಮ ಮತ್ತು ಸಾಮರಸ್ಯದ ಕಡೆಗೆ ಸಾಮೂಹಿಕ ಪ್ರಯಾಣದಲ್ಲಿ ಒಗ್ಗೂಡಿಸುವ ಗುರಿಯನ್ನು ಹೊಂದಿವೆ.

**ವಿಶ್ವದಾದ್ಯಂತ ಜೂನ್ 21 ರಂದು ಅಭ್ಯಾಸ ಮಾಡುವ ಪ್ರಮುಖ ಯೋಗಗಳು ;**

ಆರಂಭದಲ್ಲಿ ಪ್ರಾರ್ಥನೆ, ನಿಂತುಕೊಂಡು ಕುತ್ತಿಗೆಗೆ ವ್ಯಾಯಾಮ, ಭುಜಗಳಿಗೆ ವ್ಯಾಯಾಮ ಸೊಂಟಕ್ಕೆ ವ್ಯಾಯಾಮ (ತಿರುಚುವಿಕೆ) ಮತ್ತು ಮೊಣಕಾಲುಗಳಿಗೆ ವ್ಯಾಯಾಮಗಳು.

ಆಯ್ದ ಆಸನಗಳ ಪಟ್ಟಿ : ನಿಂತುಕೊಂಡು(ಆಸನಗಳು) :– ತಾಡಾಸನ, ವೃಕ್ಷಾಸನ, ಪಾದ ಹಸ್ತಾಸನ, ಅರ್ಧ ಚಕ್ರಾಸನ, ತ್ರಿಕೋಣಾಸನ.

ಕುಳಿತುಕೊಂಡು ಮಾಡುವ ಆಸನಗಳು :– ದಂಡಾಸನ, ಬದ್ಧಕೋಣಾಸನ,(ಭದ್ರಾಸನ), ವಜ್ರಾಸನ, ಅರ್ಧ ಉಷ್ಟ್ರಾಸನ, ಶಶಾಂಕಾಸನ, ಮಂಡೂಕಾಸನ, ವಕ್ರಾಸನ.

ಹೊಟ್ಟೆಯ ಆಧಾರದಲ್ಲಿ ಮಾಡುವ ಆಸನಗಳು :– ಮಕಾರಾಸನ, ಭುಜಾಂಗಾಸನ, ಶಲಭಾಸನ.

ಬೆನ್ನಿನ ಆಧಾರದಲ್ಲಿ ಅಭ್ಯಾಸ ಮಾಡುವ ಆಸನಗಳು :– ಸೇತು ಬಂಧ ಸರ್ವಾಂಗಾಸನ, ಪವನಮುಕ್ತಾಸನ, ಶವಾಸನ.

ಆಮೇಲೆ ಕಪಾಲಭತಿ, ನಾಡೀಶುದ್ಧಿ ಪ್ರಾಣಾಯಾಮ, ಭ್ರಮರೀ ಪ್ರಾಣಾಯಾಮ, ಶೀತಲೀ ಪ್ರಾಣಾಯಾಮ ಹಾಗೂ ಉಸಿರನ್ನು ಗಮನಿಸುವ ಧ್ಯಾನ (ಬೆನ್ಮುದ್ರೆಯಲ್ಲಿ).

ಶಾಂತಿ ಮಂತ್ರದೊಂದಿಗೆ ಸಮಾಪನಗೊಳ್ಳುತ್ತದೆ.(ಸುಮಾರು ಒಟ್ಟು 45 ನಿಮಿಷದ ಒಳಗಿನ ಯೋಗವಾಗಿದೆ.)

ಈ ಭಾರತದ ಸಂಸ್ಕೃತಿ ಕಲೆಯಾದ ಯೋಗವನ್ನು ಉಳಿಸೋಣ, ಬೆಳೆಸೋಣ.

ಯೋಗ ಆರೋಗ್ಯವರ್ಧಕ, ರೋಗ ನಿವಾರಕ, ರೋಗ ನಿರೋಧಕ ಎಂದು ನಮ್ಮ ಹಿರಿಯರು ತಿಳಿಸಿದ್ದಾರೆ. ಉತ್ತಮ ಜೀವನ ಶೈಲಿಗೆ ಯೋಗವನ್ನು ನಮ್ಮ ಜೀವನದಲ್ಲಿ ಅಳವಡಿಸೋಣ.



**ಉಚಿತ ಸಾಧನ ಸಲಕರಣೆಗಳ ವಿತರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಕೆ.ಇ ಚಿದಾನಂದಪ್ಪ ಅಭಿಮತ**

# ದಿವ್ಯಾಂಗರಿಗೆ ಗೌರವ ಮತ್ತು ಪ್ರೋತ್ಸಾಹ ಅಗತ್ಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.10–ದಿವ್ಯಾಂಗಜನರು ಶ್ರೇಷ್ಠರು ಮತ್ತು ದೇವರ ಮಕ್ಕಳಿದ್ದಂತೆ. ಅವರಿಗೆ ಗೌರವ ಮತ್ತು ಪ್ರೋತ್ಸಾಹ ನೀಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಅಭಿಮತ ವ್ಯಕ್ತಪಡಿಸಿದರು.



ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ಮತ್ತು ಜಿಲ್ಲಾಡಳಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ಸಬಲೀಕರಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಕೇಂದ್ರದ ವಿಶೇಷ ಅಡಿಪ್ ಯೋಜನೆಯಡಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಮಂಗಳವಾರ ಏರ್ಪಡಿಸಿದ್ದ ವಿಶೇಷಚೇತನರಿಗೆ ಉಚಿತವಾಗಿ ಸಾಧನ ಸಲಕರಣೆಗಳ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪುಟ್ಟರಾಜ ಗವಾಯಿ ಮತ್ತು ಅವರ ಗುರು ಪಂಚಾಕ್ಷರಿ ಗವಾಯಿಗಳು ಅಂಗವಿಕಲತೆಯನ್ನು ಮೆಟ್ಟಿ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಸಾಧನೆಗಳನ್ನು ಪ್ರೇರಣೆಯಾಗಿ ಪರಿಗಣಿಸಬೇಕು. ಇದಕ್ಕೆ ವಿಶೇಷಚೇತನರು ಮುಖ್ಯವಾಗಿ ಹಿಂಜರಿಕೆ ಮತ್ತು ಕೀಳರಿಮೆ ಬೀಡಬೇಕು. ತಮ್ಮಲ್ಲಿನ ವಿಶೇಷ ಪ್ರತಿಭೆಗಳಿಂದ ತಮ್ಮ ಸಾಮರ್ಥ್ಯ ಅರಿತು ಸಮಾಜದಲ್ಲಿ ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸಮಾಜದಲ್ಲಿ ವಿಶೇಷಚೇತನರನ್ನು ಕಡೆಗಣಿಸಬಾರದು. ಸಾಮಾಜ್ಯ ಜನರಿಗೆ ಏನಾದರೂ ನೀಡಿದರೆ ಅದು ಸಹಾಯ. ವಿಶೇಷಚೇತನರಿಗೆ ನೀಡಿದರೆ ಅದು ಸೇವೆಯಾಗುತ್ತದೆ. ಅಂತಹ ಸೇವೆಯನ್ನು ಸರ್ಕಾರಗಳು ಮಾಡುತ್ತಿವೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿನ ವಿಶೇಷಚೇತನರು ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಿಂದ ವಂಚಿತರಾಗಿದ್ದಲ್ಲಿ ಈ ಕೂಡಲೇ ನನ್ನ ಗಮನಕ್ಕೆ ತನ್ನಿ ಎಂದು ಹೇಳಿದ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು, ಯೋಜನೆಗಳನ್ನು ತಲುಪಿಸಲು ವಿಶೇಷ ಮುತುವರ್ಜಿ ವಹಿಸಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್ ಕೆ.ಹೆಚ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಶೇಷಚೇತನರು ತಮ್ಮ ಜೀವನವನ್ನು ಸ್ಪೂರ್ತಿಯಾಗಿ ಸ್ವೀಕರಿಸಬೇಕು. ಇತರರಿಗೂ ಮಾದರಿಯಾಗಬೇಕು. ಸಾಧನ ಸಲಕರಣೆಗಳನ್ನು ಬಳಸಿಕೊಂಡು ಉತ್ತಮ ಜೀವನ ಸಾಗಿಸಬೇಕು ಎಂದು ಹೇಳಿದರು.

ನಗರದಲ್ಲಿ ಬುದ್ಧಿಮಾಂದ್ಯ ಮಕ್ಕಳ ಸರ್ಕಾರಿ ವಸತಿ ಶಾಲೆಯ ನೂತನ ಕಟ್ಟಡ ನಿರ್ಮಾಣಕ್ಕೆ ರೂ.2 ಕೋಟಿ ಅನುದಾನವು ಜಿಲ್ಲಾಧಿಕಾರಿಯವರು ಬಿಡುಗಡೆ ಮಾಡಲಾಗಿದ್ದು, ಗುಣಮಟ್ಟದ ಕಟ್ಟಡ ನಿರ್ಮಾಣಕ್ಕೆ ಆದ್ಯತೆಯಾಗುವಂತೆ ನೋಡಿಕೊಳ್ಳೋಣ ಎಂದರು.

ಗಾಂಧಿನಗರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ರವಿಚಂದ್ರ ಅವರು ಮಾತನಾಡಿ, ಹೋರಾಟದ ಬದುಕಿನಲ್ಲಿ ಅಂಗವೈಕಲ್ಯತೆ ಕಾರಣವಾಗಬಾರದು. ಬದಲಾಗಿ ತಮ್ಮಲ್ಲಿನ ಜ್ಞಾನದ ಸಾಮರ್ಥ್ಯ ಬಳಸಿಕೊಂಡು ಮುನ್ನಡೆಯಬೇಕು. ಸಾಧನೆಯ ಗುರಿ ಕಂಡುಕೊಳ್ಳಬೇಕು ಎಂದರಲ್ಲದೇ, ಬ್ಯಾಟರಿ ಚಾಲಿತ ವಾಹನ ವಿತರಣೆ ಮಾಡಲಾಗುತ್ತಿರುವುದರಿಂದ ತಾವು ಕಡ್ಡಾಯವಾಗಿ ಹೆಲ್ಮೆಟ್ ಬಳಸಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 429 ಫಲಾನುಭವಿಗಳಿಗೆ 931 ವಿವಿಧ ಬಗೆಯ ಸಾಧನ ಸಲಕರಣೆಗಳು ಮಂಜೂರಾಗಿದ್ದು, ತಾಲ್ಲೂಕುವಾರು ಹಂತ–ಹಂತವಾಗಿ ವಿತರಿಸಲಾಗುತ್ತದೆ. ಇದೇ ವೇಳೆ ಸಾಂಕೇತಿಕವಾಗಿ ಐದು ಫಲಾನುಭವಿಗಳಿಗೆ ಸಾಧನ ಸಲಕರಣೆ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ., ಶಿಕ್ಷಣ ಇಲಾಖೆಯ ಅಧಿಕಾರಿ ಮೆಹಬೂಬ್, ಮಹಾನಗರ ಪಾಲಿಕೆಯ ವಲಯ 02 ರ ಅಧಿಕಾರಿ ಗುರುರಾಜ, ಅಲಿಂಕೋ ಸಂಸ್ಥೆಯ ಮುಖ್ಯಸ್ಥ ಆದರ್ಶ ಸಿಂಗ್, ಸ್ಮೈಲ್ ಸಂಸ್ಥೆಯ ಮುಖ್ಯಸ್ಥ ಪ್ರಭುರಾಜ, ಅನುಗ್ರಹ ಸಂಸ್ಥೆ ಮತ್ತು ಸಮರ್ಥನ್ ಸಂಸ್ಥೆಯ ಮುಖ್ಯಸ್ಥರು ಸೇರಿದಂತೆ ವಿಕಲಚೇತನರು ಮತ್ತು ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಪದಾಧಿಕಾರಿಗಳು, ವಿಶೇಷಚೇತನರು ಹಾಗೂ ಮತ್ತೀತರರು ಉಪಸ್ಥಿತರಿದ್ದರು.

## ಜೂ.12 ರಂದು 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.10–ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ವಕೀಲರ ಸಂಘ, ವಿವಿಧ ಇಲಾಖೆಗಳು ಮತ್ತು ಇತರೆ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕಾರ್ಯಕ್ರಮವನ್ನು ಜೂ.12 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ.

ಇದಕ್ಕೂ ಮುನ್ನ ಅಂದು ಬೆಳಿಗ್ಗೆ 09.30 ಗಂಟೆಗೆ ಹಳೆ ಜಿಲ್ಲಾಧಿಕಾರಿಗಳ ಕಚೇರಿಯಿಂದ ಗಡಿಗಿ ಚೆನ್ನಪ್ಪ ವೃತ್ತ–ಬೆಂಗಳೂರು ರಸ್ತೆ–ತೇರು ಬೀದಿ ಹಾಗೂ ಗಡಿಗಿ ಚೆನ್ನಪ್ಪ ವೃತ್ತ ಮಾರ್ಗವಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ಜಾಥಾ ನಡೆಯಲಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಜಾಥಾಗೆ ಚಾಲನೆ ನೀಡುವರು.

ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಉದ್ಘಾಟಿಸುವರು.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಬಳ್ಳಾರಿ ಉಪ ವಿಭಾಗ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಜಿ. ಖೈನೂರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕಿ ಉಮಾದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮ ಬ್ರಹ್ಮಂ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಸಿ.ಎಂ. ಗುರುಬಸವರಾಜ್, ಸಂಪನ್ಮೂಲ ವ್ಯಕ್ತಿಯಾಗಿ ವಕೀಲರು ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮಾಜಿ ಸದಸ್ಯರಾದ ತ್ರಿವೇಣಿ ಪತ್ತಾರ್ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ಕಾರ್ಮಿಕ ನಿರೀಕ್ಷಕರಾದ ಪರಶುರಾಮ್, ರಮೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಕ್ಯಾನ್ಸರ್ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಲು ಅಧಿಕಾರಿಗಳು ಶ್ರಮಿಸಬೇಕು:ಅಧ್ಯಕ್ಷ: ಶರವಣ ಟಿ.ಎ.

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜೂನ್.10-ಕಲ್ಯಾಣ ಕರ್ನಾಟಕದ ಭಾಗದಲ್ಲಿ ಕ್ಯಾನ್ಸರ್ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಲು ಅಧಿಕಾರಿಗಳು ಶ್ರಮಿಸಬೇಕೆಂದು ಕರ್ನಾಟಕ ವಿಧಾನ ಪರಿಷತ್ತು ಭರವಸೆಗಳ ಸಮಿತಿಯ ಅಧ್ಯಕ್ಷರಾದ ಶರವಣ ಟಿ.ಎ ಅವರು ಹೇಳಿದರು.

ಮಂಗಳವಾರದಂದುಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ವಿಧಾನ ಪರಿಷತ್ತು ಭರವಸೆಗಳ ಸಮಿತಿಯ ಅಧ್ಯಯನ,ವೈದ್ಯಕೀಯ ಶಿಕ್ಷಣ ಇಲಾಖೆಯ ಸಂಬಂಧಿಸಿದಂತೆ ಸಭೆ ನಡೆಸಿ ಮಾತನಾಡಿದ ಅವರು ಫೆರಿಫೆರಲ್ ಕ್ಯಾನ್ಸರ್ ಕೇಂದ್ರದಿಂದ ರೀಜನಲ್ ಕ್ಯಾನ್ಸರ್ ಕೇಂದ್ರವಾಗಿ ಪರಿವರ್ತಿಸಲು 80 ಹಾಸಿಗೆ ಸಾಮರ್ಥ್ಯಕ್ಕೆ ಹೆಚ್ಚಿಸಲು ಉದ್ದೇಶಿಸಲಾಗಿದೆ ಎಂದು ಅವರು ತಿಳಿಸಿದರು. ಬಡವರು ಆರ್ಥಿಕವಾಗಿ ಹಿಂದುಳಿದವರು ಬಿ.ಪಿ.ಎಲ್. ಕಾರ್ಡದಾರರ ಮತ್ತು ಈ ಭಾಗದ ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ಪಡೆಯಲು ಬೆಂಗಳೂರಿಗೆ ಪ್ರಯಾಣಿಸುವ ಸಂದರ್ಭದಲ್ಲಿ ಸಾವನ್ನಪ್ಪ ಸಂಭವ ಇರುತ್ತದೆ ಇದನ್ನು ಮನಗಂಡ ಸರ್ಕಾರ ಈ ಭಾಗದ ಜನರಿಗೆ ಕ್ಯಾನ್ಸರ್ ಚಿಕ್ಸಿತೆಗೆ ಅನುಕೂಲವಾಗಲಿ 210 ಬೆಡ್‌ಗಳ ಪೆರಿಫರಲ್ ಕ್ಯಾನ್ಸರ್ ಆಸ್ಪತ್ರೆಯನ್ನು ಇನ್ನೂ ಮೂರು ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ಇಲ್ಲಿನ ಆಸ್ಪತ್ರೆಗೆ ಯಂತ್ರೋಪಕರಣಗಳು ವೈದ್ಯಾಧಿಕಾರಿಗಳ ಸಮಸ್ಯೆ ಪ್ರತಿಯೊಂದು ಕೊರತೆಗಳ ಬಗ್ಗೆ ಸರ್ಕಾರ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು. ಪ್ರತಿಯೊಬ್ಬ ಅಧಿಕಾರಿಯೂ ಸಿಕ್ಕ ಅಧಿಕಾರ ಅವಕಾಶ ಬಳಸಿ ಉಸಿರು ಹೋದ ಮೇಲೆ ಹೆಸರು ಉಳಿಯುವಂತಹ ಶಾಶ್ವತ ಕಾರ್ಯಗಳನ್ನು ಮಾಡಿ ಪ್ರತಿಯೊಬ್ಬರ ಸಹಕಾರದಿಂದ ಈ ಭಾಗದ ಜನರಿಗೆ ಕ್ಯಾನ್ಸರ್ ರೋಗಿಗಳಿಗೆ ರೋಗದಿಂದ ಗುಣಮುಖರಾಗಲು ಪ್ರತಿಯೊಬ್ಬರು ಶ್ರಮವಹಿಸಿ ಪ್ರಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು.ಕರ್ನಾಟಕ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿಯೂ ಕ್ಯಾನ್ಸರ್ ಆಸ್ಪತ್ರೆಗಳು ಸ್ಥಾಪಿಸುವ ಉದ್ದೇಶವಿದ್ದು ಎಲ್ಲಿ ಸ್ಥಳದ ಅವಕಾಶ ಇರುವುದಿಲ್ಲ ಅಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ಥಳವನ್ನು ತೆಗೆದು-ಕೊಂಡು ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಿದ್ದೇನೆ ಎಂದರು.

ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಯ ನಿರ್ದೇಶಕ ಡಾ. ನವೀನ ಟಿ., ಆಡಳಿತಾಧಿಕಾರಿ ಡಾ. ನವೀನ ಭಟ್ ಆಸ್ಪತ್ರೆಯಲ್ಲಿ ಮಾಡಿದ ಶಸ್ತ್ರಚಿಕಿತ್ಸೆಗಳು, ಉಪಕರಣಗಳು ಸಿಬ್ಬಂದಿಗಳ ಕೊರತೆ ಪ್ರತಿಯೊಂದ ಮಾಹಿತಿಯನ್ನು ಪಿ.ಪಿ.ಟಿ ಮೂಲಕ ಮಾಹಿತಿ ನೀಡಿದರು.

ಈ ಭಾಗದಲ್ಲಿ ಸಾಮಾನ್ಯ ಪುರುಷರಿಗೆ ತಲೆ ಮತ್ತು ಕುತ್ತಿಗೆ ಕ್ಯಾನ್ಸರ್, ಶ್ವಾಸಕೋಶ,ಅನ್ನನಾಳ ಮತ್ತು ಹೊಟ್ಟೆ ಕ್ಯಾನ್ಸರ್, ಕೊಲೋರೆಕ್ಟಲ್, ಮಹಿಳೆಯರ ಸ್ತನ ಕ್ಯಾನ್ಸರ್ ಗರ್ಭಕೋಶ ಕ್ಯಾನ್ಸರ್ ಅಂಡಾಶಯದ ಕ್ಯಾನ್ಸರ್ ತಲೆ ಮತ್ತು ಕುತ್ತಿಗೆ ಕ್ಯಾನ್ಸರ್ ಹೆಚ್ಚಿನ ಪ್ರಕರಣಗಳು ಕಂಡು ಬರುತ್ತಿದ್ದು ಇದಕ್ಕೆ ಚಿಕಿತ್ಸೆ ಪಡೆಯಲು ಕರ್ನಾಟಕ ನಿವಾಸಿಗಳು ಹೊರತು ಬೇರೆ ರಾಜ್ಯಗಳಾದ ಮಹಾರಾಷ್ಟ್ರ,ಆಂಧ್ರಪ್ರದೇಶ ಹಾಗೂ ತೇಲಂಗಾಣ ಹೊರರಾಜ್ಯಗಳು ಬರುತ್ತಿದ್ದು ಇವರಿಗೆ ಅಗತ್ಯ ಸೌಲಭ್ಯಗಳನ್ನು ನೀಡುತ್ತಿದೆ ವೈದ್ಯಾಧಿಕಾರಿಗಳು ಎಂದು ಸಭೆಯ ಗಮನಕ್ಕೆ ತಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ಸರ್ಕಾರ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹಸೀನ್ ಅವರು ಮಾತನಾಡಿ,ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ಪಡೆಯಲು ಶೇಕಡ 70 ರಷ್ಟು ರೋಗಿಗಳಿಗೆ ಬೇರೆಕಡೆ ಪ್ರಯಾಣಿಸಿ ಚಿಕಿತ್ಸೆ ಪಡೆಯಲು ಸಮಸ್ಯೆಯಾಗುತ್ತಿದ್ದು ಅದಕ್ಕಾಗಿ ಸರ್ಕಾರದ ಆಶಾಯದಂತೆ ಪ್ರತಿ ಜಿಲ್ಲೆಗೂ ಫೆರಿಫೆರಲ್ ಕ್ಯಾನ್ಸರ್ ಆಸ್ಪತ್ರೆ ಸ್ಥಾಪಿಸಿ ಪ್ರತಿಯೊಬ್ಬ ರೋಗಿಗಳಿಗೆ ಚಿಕಿತ್ಸೆ ನೀಡಿ ಗುಣಮುಖರಾಗುವಂತೆ ಮಾಡುವ ಉದ್ದೇಶ ಹೊಂದಿದೆ ಅದೇ ರೀತಿಯಾಗಿ ಮೈಸೂರು, ತುಮಕೂರ,ಹಾಸನದಲ್ಲಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದರು. ವಿಧಾನ ಪರಿಷತ್ ಸದಸ್ಯರಾದ ತಿಪ್ಪಣಪ್ಪ ಕಮಕನೂರ ಬೆಂಗಳೂರಿಗೆ ಅಲೆದಾಡದ ಕಲಬುರಗಿಯಲ್ಲಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಚಿಕಿತ್ಸೆಗೆಬೇಕಾದ ಯಂತ್ರೋಪಕರಣಗಳು ಇದ್ದರು ನುರಿತ ಸಿಬ್ಬಂದಿಗಳ ಕೊರತೆ ಇದೆ ಇದನ್ನು ಹೋಗಲಾಡಿಸಲು ವೈದ್ಯಾಧಿಕಾರಿಗಳು ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕೆಂದರು.

ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಮಾತನಾಡಿ, ಈ ಭಾಗದ ಕ್ಯಾನ್ಸರ್ ರೋಗಿಗಳಿಗೆ ಆರ್ಥಿಕವಾಗಿ ಬಡವರು ಮತ್ತು ಬಿ,ಪಿ. ಎಲ್.ಕಾರ್ಡುದಾರರ ಪೆರಿಫೆರಲ್ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ಪಡೆದುಕೊಂಡು ರೋಗದಿಂದ ಗುಣಮುಖ ಹೊಂದುತ್ತಿದ್ದಾರೆ ಎಂದರು. ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಗೆ ಭರವಸೆ ಸಮಿತಿಯ ಅಧ್ಯಕ್ಷರು, ವಿಧಾನ ಪರಿಷತ್ ಸದಸ್ಯರು, ವೈದ್ಯಾಧಿಕಾರಿಗಳು ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿದರು.

# ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಯಾವುದೇ ದೂರು, ಸಮಸ್ಯೆಗಳಿಗೆ ಅಧಿಕಾರಿಗಳು ತಕ್ಷಣವೇ ಸ್ಪಂದಿಸಿ ಜನರಿಗೆ ಅನುಕೂಲ ಮಾಡಿಕೊಡಬೇಕು ಎಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹೇಳಿದರು. ಅವರು ಮಂಗಳವಾರ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗ್ಯಾರಂಟಿ ಯೋಜನೆಗಳು ರಾಜ್ಯ ಸರ್ಕಾರದ ಮಹತ್ವಕಾಂಕ್ಷೆಯ ಸಾಮಾಜಿಕ ಕಾರ್ಯಕ್ರಮವಾಗಿದೆ. ಸಮಾಜದ ಕಟ್ಟಕಡೆ ವ್ಯಕ್ತಿಗೂ ಆರ್ಥಿಕ ಸಬಲೀಕರಣಕ್ಕೆ ತುಂಬಾ ಸಹಕಾರಿಯಾಗಿರುವ ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು. ಅರ್ಹರೆಲ್ಲರೂ ಗ್ಯಾರಂಟಿ ಯೋಜನೆಗಳ ವ್ಯಾಪ್ತಿಗೆ ಒಳಪಡಬೇಕು ಎಂಬುದು ಸರ್ಕಾರದ ಉದ್ದೇಶವಾಗಿದ್ದು,ಯಾವುದೇ ಅರ್ಹ ಫಲಾನುಭವಿಗಳು ಈ ಯೋಜನೆಯಿಂದ ಹೊರಗುಳಿಯಬಾರದು.ಶಕ್ತಿ,ಗೃಹಲಕ್ಷ್ಮಿ, ಅನ್ನಭಾಗ್ಯ,ಗೃಹಜ್ಯೋತಿ ಹಾಗೂ ಯುವನಿಧಿ ಸೇರಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಉಂಟಾಗುತ್ತಿರುವ ಸಣ್ಣ-ಪುಟ್ಟ ತಾಂತ್ರಿಕ ಸಮಸ್ಯೆಗಳನ್ನು ಕೂಡಲೇ ಬಗೆಹರಿಸಿ,ಅರ್ಹ ಫಲಾನುಭವಿಗಳಿಗೆ ಯೋಜನೆಯ ಲಾಭ ದೊರಕಿಸಿ, ಶೇ.100 ರಷ್ಟು ಪ್ರಗತಿ ಸಾಧಿಸಬೇಕು ಎಂದರು.

ಅನ್ನಭಾಗ್ಯ ಯೋಜನೆಯಡಿ ಅರ್ಹ ಪಡಿತರ ಚೀಟಿದಾರರಿಗೆ ಪ್ರತಿ ಸದಸ್ಯರಿಗೆ ಹೆಚ್ಚುವರಿ ಐದು ಕೆ.ಜಿ ಒಳಗೊಂಡಂತೆ ಒಟ್ಟು ಹತ್ತು ಕೆ.ಜಿ ಅಕ್ಕಿಯನ್ನು ವಿತರಣೆ ಮಾಡಲಾಗುತ್ತಿದೆ. ಜನರು ಈ ಅಕ್ಕಿಯನ್ನು ಮಾರಾಟ ಮಾಡಿಕೊಳ್ಳುತ್ತಿರುವ ಬಗ್ಗೆ ಹಲವಾರು ಪ್ರಕರಣಗಳು ಕಂಡು ಬರುತ್ತಿದ್ದು, ಇದಕ್ಕಾಗಿ ಹೆಚ್ಚುವರಿ ಐದು ಕೆ.ಜಿ ಅಕ್ಕಿ ಬದಲಿಗೆ ತೊಗರಿಬೇಳೆ, ಅಡುಗೆ ಎಣ್ಣೆ, ಸಕ್ಕರೆ ಅಥವಾ ಇತರೆ ಆಹಾರ ಸಾಮಗ್ರಿಗಳನ್ನು ವಿತರಣೆ ಮಾಡಿದರೆ ಜನರಿಗೆ ತುಂಬಾ ಅನುಕೂಲವಾಗಲಿದೆ. ಇದರ ಜೊತೆಗೆ ಅನ್ನಭಾಗ್ಯ ಯೋಜನೆಯ ಅಕ್ಕಿಯ ಅನಧಿಕೃತ ಮಾರಾಟವನ್ನು ಸಹ ತಡೆಯಬಹುದು. ಈ ಕುರಿತು ಅನ್ನಭಾಗ್ಯ ಯೋಜನೆಯಡಿ ಐದು ಕೆ.ಜಿ ಅಕ್ಕಿ ಜೊತೆಗೆ ಇತರೆ ಆಹಾರ ಸಾಮಗ್ರಿ ವಿತರಣೆ ಮಾಡಲು ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ಮಾತನಾಡಿ, ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ ಐದು ಕೆ.ಜಿ ಅಕ್ಕಿಯ ಬದಲಿಗೆ ಇತರೆ ಆಹಾರ ಸಾಮಗ್ರಿಗಳನ್ನು ವಿತರಣೆ ಮಾಡಲು ಜಿಲ್ಲೆಯ ಎಲ್ಲಾ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯಲ್ಲಿಯೂ ಈ ವಿಷಯ ಪ್ರಸ್ತಾಪಿಸಿ,ಸಾರ್ವಜನಿಕರಿಂದ ಅನಿಸಿಕೆ ಪಡೆದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳಬೇಕು ಎಂದರು.

**ಐದು ಗ್ಯಾರಂಟಿ ಯೋಜನೆಗಳ ಪ್ರಗತಿ:**ಗೃಹಲಕ್ಷ್ಮಿ ಯೋಜನೆಯಡಿ ಕೊಪ್ಪಳ ಜಿಲ್ಲೆಯ 3,26,014 ಫಲಾನುಭವಿಗಳಿಗೆ ಏಪ್ರಿಲ್-2025ರ ಅಂತ್ಯದವರೆಗೆ ಡಿಬಿಟಿ ಮೂಲಕ 1098,44,56,600/- ರೂ.ಗಳನ್ನು ಪಾವತಿಸಲಾಗಿದೆ.

ಗೃಹಜ್ಯೋತಿ ಯೋಜನೆಯಡಿ ಏಪ್ರಿಲ್-2025ರ ಅಂತ್ಯದವರೆಗೆ 2,75,936 ಗ್ರಾಹಕರಿಗೆ ಉಚಿತ ವಿದ್ಯುತ್ ಸೌಲಭ್ಯ ದೊರೆತಿದ್ದು, ಇದಕ್ಕಾಗಿ 243.37 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ.

ಅನ್ನಭಾಗ್ಯ ಯೋಜನೆಯಡಿ ಹಣದ ಬದಲಾಗಿ 2,99,213 ಕಾರ್ಡುದಾರರಿಗೆ. 2025ರ ಫೆಬ್ರವರಿ ಮಾಹೆಯಿಂದ ಇಲ್ಲಿಯವರೆಗೂ ಹೆಚ್ಚುವರಿ 5 ಕೆ.ಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ.

ಶಕ್ತಿ ಯೋಜನೆಯಡಿ 2025ರ ಮೇ ಮಾಹೆಯಲ್ಲಿ 34,77,996 ಮಹಿಳೆಯರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದು, ಇದಕ್ಕಾಗಿ 15,04,44,105 ರೂ.ಗಳ ಖರ್ಚಾಗಿದೆ. ಯುವನಿಧಿ ಯೋಜನೆಯಡಿ ಇಲ್ಲಿಯವರೆಗೆ (ಮೇ-2025)8,881 ಫಲಾನುಭವಿಗಳು ನೋಂದಣಿಯಾಗಿದ್ದು, ಒಟ್ಟು ಮೊತ್ತ ರೂ. 11.58 ಕೋಟಿಗಳನ್ನು ಪಾವತಿಸಲಾಗಿರುತ್ತದೆ ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಬಿ.ಖಾದ್ರಿ, ಮಂಜುನಾಥ ಗೊಂಡಬಾಳ, ಅಮರೇಶಪ್ಪ ಎಸ್.ಜಿ. ಮತ್ತು ಖಾಸಿಂಸಾಬ ಮರ್ದಾನಸಾಬ, ಗ್ಯಾರಂಟಿ ಯೋಜನೆಗಳ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಸೇರಿದಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು, ಜಿಲ್ಲೆಯ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರ ಹುದ್ದೆಗಳ ನೇಮಕಾತಿಗಾಗಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.10-ಪ್ರಸಕ್ತ 2025-26ನೇ ಸಾಲಿಗೆ ಕಲಬುರಗಿ ಜಿಲ್ಲೆಯ 38 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ 99 ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಹಾಗೂ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭಿಸಲಾದ 07 ಆದರ್ಶ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 28 ವಿವಿಧ ವಿಷಯಗಳ ಅತಿಥಿ ಉಪನ್ಯಾಸಕರ ಹುದ್ದೆಗಳನ್ನು (ಪ್ರಾಂಶುಪಾಲರ ಹಂತದಲ್ಲಿ) ನೇಮಕ ಮಾಡಿಕೊಳ್ಳಲು ಆಸಕ್ತಿಯುಳ್ಳ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ದಿನಾಂಕ: 25-05-2025ರ ಆದೇಶದನ್ವಯ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರನ್ನು ಆಯಾ ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡಲು ಅನುಮತಿ ನೀಡಲಾಗಿದ್ದು, ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ಅವಶ್ಯಕ ದಾಖಲೆಗಳೊಂದಿಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ 2025ರ ಜೂನ್ 16 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಪ್ರಾಂಶುಪಾಲರು ಆಯ್ಕೆ ಮಾಡಿದ ಉಪನ್ಯಾಸಕರ ವಿಷಯವಾರು ಪಟ್ಟಿಯನ್ನು ಸಲ್ಲಿಸಲು ಜೂನ್ 17 ಕೊನೆಯ ದಿನವಾಗಿದೆ.

ಅತಿಥಿ ಉಪನ್ಯಾಸಕರ ನೇಮಕಾತಿಯು ಸರ್ಕಾರದ/ಇಲಾಖೆಯ ಆದೇಶದ ಷರತ್ತುಗಳಿಗೊಳಪಟ್ಟಿರುತ್ತದೆ.ಜಿಲ್ಲೆಯ ಕಾಲೇಜುವಾರು ಖಾಲಿಯಿರುವ ವಿಷಯವಾರು ಶಿಕ್ಷಕರ ವಿವರ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಿನಿ ವಿಧಾನ ಸೌಧ ಆವರಣದಲ್ಲಿರುವ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಜಿಲ್ಲಾ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ರಾಜ್ಯಪಾಲರಿಂದ ಮೂರು ಅಧ್ಯಾದೇಶಗಳಿಗೆ ಒಪ್ಪಿಗೆ - ಗಿಗ್ ಕಾರ್ಮಿಕರಿಗೆ ಅಭಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿಯ ಹಿತದೃಷ್ಟಿಯಿಂದ ಕರ್ನಾಟಕ ಸರ್ಕಾರ ಗಿಗ್ ಕಾರ್ಮಿಕರ ಹಕ್ಕುಗಳನ್ನು ರಕ್ಷಿಸಲು ಮುಂದಾಗಿದ್ದು, ರಾಜ್ಯಪಾಲರು ವೈದ್ಯಕೀಯ ಕ್ಷೇತ್ರವೂ ಒಳಗೊಂಡಂತೆ ಕಾರ್ಮಿಕ ಇಲಾಖೆಯಡಿ ಬರುವ ಗಿಗ್ ಕಾರ್ಮಿಕರಿಗೆ ಸಂವಿಧಾನಬದ್ಧವಾಗಿರುವ ಅಂಶಗಳಿಗೆ ಅಭಯ ನೀಡಿದ್ದಾರೆ.

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ ಈ ಕುರಿತು ಅಧಿಸೂಚನೆ ಹೊರಡಿಸಿದ್ದು, ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿಯನ್ನು ರಾಜ್ಯಪಾಲರು ಎತ್ತಿ ಹಿಡಿದಿದ್ದಾರೆ. ಗಿಗ್ ಕಾರ್ಮಿಕರ ವೃತ್ತಿ ಜನ್ಯ ಆರೋಗ್ಯ, ಸುರಕ್ಷತೆ, ಸ್ವಯಂ ಚಾಲಿತ ಮೇಲ್ವಿಚಾರಣೆ ಮತ್ತು ತೀರ್ಮಾನ ತೆಗೆದುಕೊಳ್ಳುವ ವ್ಯವಸ್ಥೆಯಲ್ಲಿನ ಪಾರದರ್ಶಕತೆಯ ಸಂಬಂಧದಲ್ಲಿ ಸಂಗ್ರಹಕಾರರಿಗೆ ಹೊಣೆಗಾರಿಕೆ ನೀಡಿದ್ದಾರೆ.

ಗಿಗ್ ಕಾರ್ಮಿಕರಿಗಾಗಿ ಕ್ಷೇಮಾಭಿವೃದ್ಧಿ ಮಂಡಳಿ ಸ್ಥಾಪನೆ, ಕ್ಷೇಮಾಭಿವೃದ್ಧಿ ನಿಧಿ ಸೃಜನೆ ಮಾಡಲು ಈ ಅಧ್ಯಾದೇಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಗಿಗ್ ಕಾರ್ಮಿಕರ ಮಂಡಳಿ ಸಂರಚನೆ, ಮಂಡಳಿ ಸಭೆ, ಮಂಡಳಿಯ ಅಧಿಕಾರ ಮತ್ತು ಪ್ರಕಾರ್ಯ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ ಹಕ್ಕುಗಳು, ಮಂಡಳಿಯ ಅಧಿಕಾರಿಗಳು ಮತ್ತು ನೌಕರರು, ಲೆಕ್ಕ ಪತ್ರ ಮತ್ತು ಲೆಕ್ಕ ಪರಿಶೋಧನೆ, ಗಿಗ್ ಕಾರ್ಮಿಕರ ನೋಂದಣಿ, ಸಂಗ್ರಹಕಾರರ ಅಥವಾ ವೇದಿಕೆಗಳ ನೋಂದಣಿ, ನ್ಯಾಯೋಚಿತ ಒಪ್ಪಂದಗಳನ್ನು ಮಾಡಿಕೊಳ್ಳುವ ಹೊಣೆಗಾರಿಕೆ, ಸ್ವಯಂ ಚಾಲಿತ ಮೇಲ್ವಿಚಾರಣೆ ಮತ್ತು ತೀರ್ಮಾನ ತೆಗೆದುಕೊಳ್ಳುವ ವ್ಯವಸ್ಥೆಗಳ ಸಂಬಂಧದಲ್ಲಿನ ಪಾರದರ್ಶಕತೆ, ಕೆಲಸವನ್ನು ಕೊನೆಗೊಳಿಸಿಕೊಳ್ಳುವಿಕೆ, ಆದಾಯ ಭದ್ರತೆ, ಯುಕ್ತ ಕೆಲಸದ ಸ್ಥಿತಿಗತಿಗಳು ಈ ಅಧ್ಯಾದೇಶದಲ್ಲಿ ಬರಲಿದ್ದು ಕಾರ್ಮಿಕ ಇಲಾಖೆಯಡಿ ನಿರ್ವಹಣೆ ಮಾಡಲು ಅಧ್ಯಾದೇಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳಡಿ ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆ ನಿಯಂತ್ರಣಕ್ಕೆ ಮೇ 27 ರಂದು ರಾಜ್ಯಪಾಲರಿಂದ ಅನುಮತಿ ದೊರೆತಿದೆ. 2011ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಅಧ್ಯಾದೇಶ ಹೊರಡಿಸಿದ್ದು, ಭಾರತ ಸಂವಿಧಾನದ 213ನೇ ಅನುಚ್ಛೇದದ ಖಂಡದ ಮೂಲಕ



ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯಪಾಲರು ಈ ಅಧ್ಯಾದೇಶ ಪ್ರಖ್ಯಾಪಿಸಿದ್ದಾರೆ. ಈ ಪ್ರಕಾರ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಅಥವಾ ಬಡ್ತಿ ನೀಡುವುದು, ವಿವಿಧ ಪ್ರಕರಣಗಳ ತಿದ್ದುಪಡಿ, ಪ್ರತಿಯೋಜನೆ, ಹೊಸ ಪ್ರಕರಣ ಸೇರ್ಪಡೆ ಮತ್ತು ಅಪೀಲು ಸಲ್ಲಿಸಲು ಅವಕಾಶ ಮಾಡಿಕೊಡಲಾಗಿದೆ.

ಕರ್ನಾಟಕ ವೈದ್ಯಕೀಯ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತಿದ್ದುಪಡಿ ಅಧ್ಯಾದೇಶಕ್ಕೆ ರಾಜ್ಯಪಾಲರಿಂದ ಅಂಕಿತ ದೊರೆತಿದೆ. ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ಅಧಿನಿಯಮ, 2012ನ್ನು ತಿದ್ದುಪಡಿ ಮಾಡಲು ಅಧ್ಯಾದೇಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ವಿವಿಧ ಪ್ರಕರಣಗಳ ತಿದ್ದುಪಡಿ, ಆದ್ಯತೆ ಮತ್ತು ವಿನಾಯಿತಿ ಇದರಲ್ಲಿ ಸೇರಿವೆ ಎಂದು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಜಿ.ಶ್ರೀಧರ್ ತಿಳಿಸಿದ್ದಾರೆ. ಗಿಗ್ ಕಾರ್ಮಿಕರ ಕಲ್ಯಾಣ ಮಸೂದೆಗೆ ಸರ್ಕಾರದ ಅಂಕಿತ ಲಭಿಸಿದ್ದು, ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವಿರತ ಪ್ರಯತ್ನಕ್ಕೆ ದೊರೆತ ಫಲವೆಂದು ವಿಮರ್ಶಿಸಲಾಗಿದೆ. ಪ್ಲಾಟ್ ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ ಸಾಮಾಜಿಕ ಭದ್ರತೆ ಹಾಗೂ ಕ್ಷೇಮಾಭಿವೃದ್ಧಿ ಮಂಡಳಿ ಅಸ್ತಿತ್ವಕ್ಕೆ ತರಲು ಯತ್ನಿಸಿದ್ದ ಸಚಿವ ಸಂತೋಷ್ ಲಾಡ್ ಅವರ ಪ್ರಯತ್ನ ಸಫಲವಾದಂತಾಗಿದೆ. ಇದು ಸಂತೋಷ್ ಲಾಡ್ ಅವರ ಬೆಂಚ್ ಮಾರ್ಕ್ ಸಾಧನೆಗಳ ಮುಕುಟಕ್ಕೆ ಮತ್ತೊಂದು ಗರಿ ಎಂದು ಬಣ್ಣಿಸಲಾಗಿದೆ. ಗಿಗ್ ಕಾರ್ಮಿಕರ ಬಗ್ಗೆ ವಿಶೇಷ ಕಳಕಳಿ ತೋರುವ ರಾಹುಲ್ ಗಾಂಧಿ ಆಶಯಕ್ಕೆ ನೀರೆರೆದ ಸಂತೋಷ್ ಲಾಡ್ ಅವರ ಕ್ರಮ ಸಹನೀಯವಾಗಿದೆ.

ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಹಾಗೂ ಕ್ಷೇಮಾಭಿವೃದ್ಧಿ) ಮಂಡಳಿ ರಚನೆಗೆ ರಾಜ್ಯಪಾಲರಿಂದ ಅಂಕಿತ ದೊರೆತಿದ್ದು, ರಾಜ್ಯದ ಅಸಂಘಟಿತ ವಲಯದ ಗಿಗ್ ಕಾರ್ಮಿಕರ ಕಲ್ಯಾಣಕ್ಕೆ ಕಾರ್ಮಿಕ ಇಲಾಖೆಯ ಕ್ರಮಕ್ಕೆ ಇದರಿಂದ ಬಲ ಬಂದಂತಾಗಿದೆ. ಗಿಗ್ ಕಾರ್ಮಿಕರಿಗೆ ಮಂಡಳಿಯ ರಚನೆ ಜೊತೆಗೆ ಕ್ಷೇಮಾಭಿವೃದ್ಧಿ ನಿಧಿ ಸ್ಥಪಿಸಲು ಇದೀಗ ಅವಕಾಶ ಸಿಕ್ಕಿದೆ. ಛಲ ಬಿಡದ ಸಚಿವ ಲಾಡ್, ಗಿಗ್ ಕಾರ್ಮಿಕರ ಸಾಮಾಜಿಕ ಭದ್ರತೆ ಹಾಗೂ ಕ್ಷೇಮಾಭಿವೃದ್ಧಿ ಮಂಡಳಿ ಅಸ್ತಿತ್ವಕ್ಕೆ ಬರುವಲ್ಲಿ ಅವರ ಶ್ರಮ ಬಹಳಷ್ಟಿದೆ. ಛಲ ಬಿಡದೆ ಲಾಡ್ ಅವರು ಸರ್ಕಾರದ ಮಟ್ಟದಲ್ಲಿ ಕೆಲಸ ಮಾಡಿದ್ದು ಬಹಳಷ್ಟು ಪ್ರಶಂಸೆಗೆ ಪಾತ್ರವಾಗಿದೆ.

ಮಂಡಳಿ ರಚನೆ ಸಂಬಂಧ ಲಾಡ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ದೆಹಲಿಯಲ್ಲಿ ಲೋಕಸಭೆಯಲ್ಲಿನ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಚರ್ಚಿಸಿದ್ದರು. ಇದೀಗ ರಾಜ್ಯಪಾಲರು ಅಂಕಿತದೊಂದಿಗೆ ಲಾಡ್ ಅವರ ಪ್ರಯತ್ನಕ್ಕೆ ಫಲ ಸಿಕ್ಕಂತೆ ಆಗಿದೆ. ಇತ್ತೀಚೆಗೆ ಗಿಗ್ ಆರ್ಥಿಕತೆ ಹೆಚ್ಚು ಪ್ರವರ್ಧಮಾನಕ್ಕೆ ಬರುತ್ತಿದ್ದು, ಲಕ್ಷಾಂತರ ಕಾರ್ಮಿಕರು ಈ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ. ಈಗ ಅವರೆಲ್ಲರ ಕಲ್ಯಾಣಕ್ಕೆ ಹಾಗೂ ಸಾಮಾಜಿಕ ಸೇವಾ ಯೋಜನೆಗೆ ರೂಪಿಸಲು ಪ್ರತ್ಯೇಕ ಮಂಡಳಿ ರಚನೆಯಾದರೆ ಅನುಕೂಲವಾಗಲಿದೆ.

# ಯಾಂತ್ರೀಕರಣ ಯೋಜನೆಯಡಿ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.10-ತೋಟಗಾರಿಕೆ ಇಲಾಖೆಯಿಂದ 2025-26ನೇ ಸಾಲಿಗೆ ತೋಟಗಾರಿಕೆಯಲ್ಲಿ ಯಾಂತ್ರೀಕರಣ ಕಾರ್ಯಕ್ರಮ (ಎಸ್.ಎಮ್.ಎ.ಎಮ್.) ದಡಿ ಸಹಾಯಧನ ಪಡೆಯಲು ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ (ಜಿ.ಪಂ.) ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

ತೋಟಗಾರಿಕೆ ಯಾಂತ್ರೀಕರಣ ಕಾರ್ಯಕ್ರಮದಡಿ ದಿನಾಂಕ: 01-05-2025ರ ಮಾಹೆಯ ನಂತರ ವೈಯಕ್ತಿಕವಾಗಿ ಖರೀದಿಸುವ ಯಂತ್ರೋಪಕರಣಗಳಿಗೆ ಸಹಾಯಧನ ನೀಡಲು ತೋಟಗಾರಿ-ಕೆ ಇಲಾಖೆವತಿಯಿಂದ ಇತರೆ ವರ್ಗದ ರೈತರಿಗೆ ಟ್ರ್ಯಾಕ್ಟರಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಉತ್ಕೃಷ್ಟಗುಣಮಟ್ಟದ ಉಪಕರಣಗಳಿಗೆ ಶೇ. 40ರ ಸಹಾಯಧನ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಣ್ಣ, ಅತಿ ಸಣ್ಣ ಮತ್ತು ಮಹಿಳಾ ಫಲಾನುಭವಿಗಳಿಗೆ ಶೇ. 50 ರ ಸಹಾಯಧನ ನೀಡಲಾಗುತ್ತದೆ.

ಟ್ರ್ಯಾಕ್ಟರ್ ಖರೀದಿಸಿರುವ ಇತರೆ ವರ್ಗದ ರೈತರಿಗೆ, ಸಣ್ಣ, ಅತಿ ಸಣ್ಣ ಹಾಗೂ ಮಹಿಳಾ ರೈತರಿಗೆ ಪ್ರತಿ ಟ್ರ್ಯಾಕ್ಟರಗೆ ಶೇ.40 ರಂತೆ ಗರಿಷ್ಠ 75,000 ರೂ. ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಿಗೆ ಶೇ. 50 ರಷ್ಟು ಗರಿಷ್ಠ 3 ಲಕ್ಷ ರೂ. ಮೀರದಂತೆ ಸಹಾಯಧನ ನೀಡಲಾಗುತ್ತದೆ. ಎಲ್ಲಾ ರೀತಿಯ ಟ್ರ್ಯಾಕ್ಟರ, ಮಿನಿ ಟ್ರ್ಯಾಕ್ಟರ ಟ್ರೇಲರ್ ಮತ್ತು ಟ್ರ್ಯಾಕ್-ಟ್ರೋಲಿ (Track-trolly) ಯಂತ್ರೋಪಕರಣಗಳಿಗೆ ಸಹಾಯಧನ ನೀಡುವಾಗ ರಜಿಸ್ಟ್ರೇಶನ್ (Registration) ಕಡ್ಡಾಯವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಆಯಾ ತಾಲೂಕಿನ ತಾಲ್ಲೂಕಾಧಿಕಾರಿಗಳಿಗೆ ಸಂಪರ್ಕಿಸಲು ಕೋರಲಾಗಿದೆ.

ಅಫಜಲಪುರ ತಾಲೂಕು: ಶಿವಯೋಗಪ್ಪ-9743518608, ಆಳಂದ ತಾಲೂಕು:ಸುರೇಂದ್ರನಾಥ-8095143035, ಚಿಂಚೋಳಿ ತಾಲೂಕು:ರಾಜಕುಮಾರ ಗೋವಿನ-9611250501. ಚಿತ್ತಾಪೂರ ತಾಲೂಕು: ಶಂಕರಗೌಡ-7760969088.ಕಲಬುರಗಿ ತಾಲೂಕು:ಬಾಬುರಾವ ಪಾಟೀಲ-9900108196.ಜೇವರ್ಗಿ ತಾಲೂಕು: ಸಮಿಯೋದ್ದಿನ-9986516251 ಹಾಗೂ ಸೇಡಂ ತಾಲೂಕು- ಈಶ್ವರ ಪವಾರ್ 9972147778 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಜೂನ್ 13 ರಂದು ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 10-ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆಯಿಂದ ನಗರದ ಥಾಮಸ್ ಪದವಿ ಮಹಾವಿದ್ಯಾಲಯದಲ್ಲಿ ಜೂನ್ 13ರ ಬೆಳಿಗ್ಗೆ 10 ರಿಂದ ಸಂಜೆ 4ಗಂಟೆವರೆಗೆ ಉದ್ಯೋಗ ಮೇಳ ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ಉದ್ಯೋಗ ಮೇಳದಲ್ಲಿ ಆನೇಕ ಖಾಸಗಿ ಸಂಸ್ಥೆಗಳು ಭಾಗಿಯಾಗುತ್ತಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 30 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆ-ರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ; 08532-231684, 9008211750, 8095125775 ಅಥವಾ 9886367517ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 10 : ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಅರ್ಹ ಅಭ್ಯರ್ಥಿಗಳಿಂದ ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ಯೋಜನೆಗಳು**:ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ ಸಹಾಯಧನ ಮತ್ತು ಸಾಲ-ಸೌಲಭ್ಯ ನೀಡಲಾಗುವುದು.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಲ್ಲದೆ 2023-24 ಮತ್ತು 2024-25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಆಸಕ್ತರ ಹಿಂದುಳಿದ ವರ್ಗಗಳ ಪ್ರವರ್ಗ-2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ವಿಳಾಸ: ಿಣಣಠಿ://ಜತಘುಟಿಜ್ಞುಣ.ಇಚಿಡಿ-ಟಚಿಣಚಿಇಚಿ.ರಠತ.ಟಿ ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ವಿಳಾಸ: www.kmmd.karnataka.gov.in ಅಥವಾ ನಿಗಮದ ಸಹಾಯವಾಣಿ ಸಂಖ್ಯೆ: 080-22374832, 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ: 08532-250440ಗೆ ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಅಧಿಕಾರಿಗಳ ವಿರುದ್ಧ ಸಿಡಿದೆದ್ದ ರೆಡ್ಡಿ ಸಮಾಜ



ಮಲ್ಲಮ್ಮ ನುಡಿ ವಾರ್ತೆ

ಇಳಕಲ್ - ಇಲ್ಲಿನ ರಾಷ್ಟ್ರಕೂಟ ರೆಡ್ಡಿ ಪರಿವಾರ ಹುನಗುಂದ ಇಲಕಲ್ ತಾಲೂಕು ಸಮಿತಿ ವತಿಯಿಂದ ಬಾಗಲಕೋಟೆಯ ಮಿನಿ ವಿಧಾನಸೌಧದಲ್ಲಿ ಇರುವ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಮಹಾ ಶಿವಶರಣೆ ರೆಡ್ಡಿ ಸಮಾಜದ ಹೆಮ್ಮೆಯ ತಾಯಿ ಮಹಾಸಾಧ್ವಿ ಶ್ರೀ ಹೇಮರೆಡ್ಡಿ ಮಲ್ಲಮ್ಮನ ಮಹಾ ಮಾನವತವಾದಿ ಸಂವಿಧಾನ ಶಿಲ್ಪಿ ಡಾ// ಬಿ ಆರ್ ಅಂಬೇಡ್ಕರ್ ರವರ ಭಾವಚಿತ್ರವನ್ನು ಕಸದ ಬುಟ್ಟಿಯಲ್ಲಿ ಎಸೆದಿರುವುದು ಖಂಡಿಸಿ ರಾಷ್ಟ್ರಕೂಟ ರೆಡ್ಡಿ ಯುವ ವೇದಿಕೆ ಪತ್ರಿಕಾಗೋಷ್ಠಿಯಲ್ಲಿ ಈ ತಪ್ಪು ಪ್ರಮಾದ ಹೆಸರಿದವರನ್ನು ಸರ್ಕಾರ ಕೂಡಲೇ ಅಮಾನತ್ತು ಮಾಡಿ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು ಒಂದು ವೇಳೆ ತಪ್ಪಿಸಸ್ಥರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಬಾಗಲಕೋಟೆಯ ಡಿಸಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಪ್ರಶಾಂತ್ ಪಾಟೀಲ್ ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ವಿಜಯ ತುಂಬದ, ತುಂಬಾ ಮಾತನಾಡಿ ಬರೀ ಜಯಂತಿಗಳ ಆಚರಣೆಗಾಗಿ ದಾರ್ಶನಿಕರ ಸಾಧಕರ ಸಂತ ಶರಣರ ಫೋಟೋಗಳನ್ನು ಉಪಯೋಗಿಸು ವಷ್ಟೇ ಅಲ್ಲ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಜಯಂತಿಯ ಬಗ್ಗೆ ಅರಿವು ಮೂಡಿಸಬೇಕು ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ. ಶಶಿ ಗೂಗಿಹಾಳ. ಸಂತೋಷ್ ಪೈಲ್, ಚಂದ್ರಶೇಖರ ಪಾಟೀಲ್. ವಿಜಯ ಅಳವಂಡಿ. ವಿಜಯ ಪಾಟೀಲ್. ಬಸವರಾಜ ಚಿಕ್ಕಓತಗೇರಿ.ಕುಮಾರ ತಿಮ್ಮಾಪೂರ.ಮುತ್ತು.ಗೌಡರ.ಮುತ್ತು ಮಸರಕಲ್ಲ.ಮುತ್ತು ಚಳೀಗೇರಿ. ರಾಜು ಜಂಬಲದಿನ್ನಿ. ಇನ್ನುಳಿದ ಸದಸ್ಯರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ತೋಟಗಾರಿಕೆ ವಿವಿ 14ನೇ ಘಟಿಕೋತ್ಸವ - ರಾಜ್ಯಪಾಲರಿಂದ ಪದಕ ಪ್ರಧಾನ :ಸಹನಾಗೆ 17, ಭೀಮವ್ವಳಿಗೆ 16 ಚಿನ್ನದ ಪದಕ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.11-ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ಮಂಗಳವಾರ ನಡೆದ 14ನೇ ಘಟಿಕೋತ್ಸವದಲ್ಲಿ ಬೀದರನ ತೆ-ೂಟಗಾರಿಕೆ ಮಹಾವಿದ್ಯಾಲಯದ ಬಿ.ಎಸ್.ಸಿ ಪದವಿ ವಿದ್ಯಾರ್ಥಿಗಳಾದ ಸಹನಾ ಪಾಟೀಲಗೆ 17 ಹಾಗೂ ಭೀಮವ್ವಳಿಗೆ 16 ಚಿನ್ನದ ಪದಕಗಳು ಲಭಿಸಿದ್ದು,ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಪದಕ ಪ್ರದಾನ ಮಾಡಿದರು.

17 ಚಿನ್ನದ ಪದಕ ಪಡೆದ ಸಹನಾ ಪಾಟೀಲ ವಿಜಯನಗರ ಜಿಲ್ಲೆಯ ಹೂವಿನಹಡಗಲಿ ತಾಲೂಕಿನ ಹೊಳಲು ಗ್ರಾಮದ ಟೈಲರ್ ಮಂಜುನಾಥ ಮತ್ತು ಶೋಭಾ ದಂಪತಿಗಳ ಮಗಳಾಗಿದ್ದು, ಹೊಳಲಿನಲ್ಲಿ ಸ್ವಾಮಿ ವಿವೇಕಾನಂದ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ 10ನೇ ತರಗತಿವರೆಗೆ, ಹೂವಿನ ಹಡಗಲಿಯ ಮ.ಮ.ಪಾಟೀಲ ಕಾಲೇಜಿನಲ್ಲಿ ಪಿಯುಸಿ ತರಗತಿಯನ್ನು ಮುಗಿಸಿದ್ದು, ಸ್ನಾತಕ ತೋಟಗಾರಿಕೆ ಪದವಿಯನ್ನು ಬೀದರ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ವಿದ್ಯಾಭ್ಯಾಸ ಮಾಡಿದ್ದಾರೆ. ಕಾಲೇಜು ಹಂತದಲ್ಲಿ ಟಾಪರ್ ಆಗಿದ್ದೆ. ಆದರೆ ಪದವಿಯಲ್ಲಿ ಸಾಧನೆ ಮಾಡುತ್ತೇನೆ ಅಂದುಕೊಂಡಿರಲಿಲ್ಲ. ಇಷ್ಟೊಂದು ಪದಕಗಳು ಸಿಕ್ಕಿರುವುದು ಸಂತೋಷವಾಗಿದೆ. ಹೆಣ್ಣುಮಕ್ಕಳಿಗೂ ಓದಲು ಅವಕಾಶ ಕೊಟ್ಟರೆ ನೀವು ಅಂದುಕೊಂಡಿರುವದಕ್ಕಿಂತ ಹೆಚ್ಚಿನ ಸಾಧನೆ ಮಾಡುತ್ತಾರೆ. ಸಾಧನೆಗೆ ಕಾಲೇಜಿನ ಉಪನ್ಯಾಸಕರು ಸೇರಿದಂತೆ ಗೆಳೆಯರು ಸಹ ಸಹಾಯ ಮಾಡಿದ್ದಾರೆ. ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಕೆಲಸ ಮಾಡುತ್ತೇನೆ. ತೋಟಗಾರಿಕೆ ಕ್ಷೇತ್ರದಲ್ಲಿಯೇ ವಿದ್ಯಾಭ್ಯಾಸ ಮುಂದುವರಿಸುವುದಾಗಿ ಸಹನಾ ಹೇಳಿದರು. ಮಗಳ ಸಾಧನೆಯಿಂದ ಬಹಳಷ್ಟು ಸಂತೋಷವಾಗಿದೆ ಎಂದು ಸಹನಾ ತಂದೆ ಮಂಜುನಾಥ ಹೇಳಿದರು. 16 ಪದಕಗಳನ್ನು ಪಡೆದ ಭೀಮವ್ವ ಅವರು ಸಹ ಕೊಪ್ಪಳ ಜಿಲ್ಲೆಯ ತಳಬಾಳ ಗ್ರಾಮದ ಸಣ್ಣನಿಂಗಪ್ಪ ಮತ್ತು ಯಲ್ಲವ್ವ ದಂಪತಿ ಮಗಳಾಗಿದ್ದು, ತಂದೆ ಮೃತಪಟ್ಟಿದ್ದು, ತಾಯಿ ಕೃಷಿ ಮಾಡಿಕೊಂಡು ಮಗಳನ್ನು ಓದಿಸಿದ್ದಾರೆ. ಭೀಮವ್ವ ಬೇವೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 10ನೇ ತರಗತಿ, ನವಚೇತನ ಪಿಯು ಕಾಲೇಜಿನಲ್ಲಿ ಪಿಯುಸಿ ಹಾಗೂ ಸ್ನಾತಕ ಪದವಿಯನ್ನು ಬೀದರ ತೋಟಗಾರಿಕೆ ಮಹಾವಿದ್ಯಾಲಯಲ್ಲಿ ವಿದ್ಯಾಭ್ಯಾಸ ಮಾಡಿದ್ದಾರೆ. ಒಂದು ಚಿನ್ನದ ಪದಕ ಪಡೆದುಕೊಳ್ಳಬೇಕೆಂಬ ಆಶೆ ಇತ್ತು. ಆದರೆ ನನಗೆ 16 ಚಿನ್ನದ ಪದಕಗಳು ಬಂದಿರುವುದು ಸಂತೋಷ ತಂದಿದೆ. ನನಗೆ ತಂದೆ ಇಲ್ಲದಿದ್ದರೂ ತಾಯಿ ಹಾಗೂ ಅಣ್ಣ ಓದಲು ಪ್ರೋತ್ಸಾಹ ನೀಡಿದ್ದಾರೆ ಎಂದು ಭೀಮವ್ವ ಹೇಳಿದ್ದಾರೆ.

ಬಿ.ಎಸ್‌ಸಿ (ಹಾನ್ಸ್) ತೆ-ೂಟಗಾರಿಕೆ ಪದವಿಯಲ್ಲಿ 5 ಚಿನ್ನದ ಪದಕ ಪಡೆದರೆ, ಪಲ್ಲವಿ ಎಲ್ ಮಲ್ಲಣ್ಣವರ 4, ನಿತ್ಯಶ್ರೀ ಎಂ 4, ನಂದಿತಾ ನಾಯ್ಕ ಮತ್ತು ನಿತ್ಯಶ್ರೀ ಎಂ ತಲಾ 3, ಪ್ರಕೃತಿ ಬಿ.ಎಸ್ ಮತ್ತು ಪ್ರಿಯಾಂಕಾ ಟಿ.ಕೆ, ಪ್ರತೀಕ್ಷಾ ಹೆಗಡೆ, ವಿಜಯ ಬಾಲಾಜಿ ಯಾದವ, ರೇಖಾ ರಾಮಪ್ಪ ತೇಲಿ ತಲಾ 2, ಕೆ.ಚೈತ್ರಾ, ಜಯವರ್ಧನ ಆರ್, ಕೆ.ಸಮ್ನಾ, ಲಕ್ಷ್ಮೀ ಗುಜಲೂರ, ಕಾಶಮ್ಮ ಪವಾಡಿ, ಮಹೇಶ ಹಾಗೂ ಆಶಾ ಕೆ.ಎಂ ತಲಾ ಒಂದು ಚಿನ್ನದ ಪದಕ ಪಡೆದುಕೊಂಡಿದ್ದಾರೆ. ಡಾಕ್ಟರೇಟ್ ಪದವಿಯಲ್ಲಿ ಪವನ ಪಿ.ಆರ್ 4 ಚಿನ್ನದ ಪದಕ ಪಡೆದುಕೊಂಡರೆ, ವಂದನಾ ಮತ್ತು ಮಹಾಲಕ್ಷ್ಮೀ ಎಂ. ತಲಾ 2 ಪದಕ ಪಡೆದುಕೊಂಡಿದ್ದಾರೆ. ಎಂ.ಎಸ್.ಸಿ ಸ್ನಾತಕೋತ್ತರ ಪದವಿಯಲ್ಲಿ ಧನ್ಯಶ್ರೀ ಎಸ್.ಜಿ, ಅಮೂಲ್ಯ ಎಚ್.ಟಿ ತಲಾ 4 ಚಿನ್ನದ ಪದಕ ಪಡೆದರೆ, ಸಚಿನ ಮೋದಗಿ 3, ಗೀತಾಂಜಲಿ, ಸುಪ್ರೀಯಾ ಎಂ.ಎಸ್ ತಲಾ 2, ಲಿಖಿತಗೌಡ, ಕಾವ್ಯ, ಚಂದನ ಬಿ, ಹರ್ಷ ಪಾಟೀಲ, ಕಾರ್ತಿಕ ಸಿ.ಎಸ್, ಕುಣೆ ಲಾವಣ್ಯ, ಹರ್ಷಿತ ಬಿ.ಎಚ್ ತಲಾ ಒಂದು ಚಿನ್ನದ ಪದಕ ಪಡೆದುಕೊಂಡಿದ್ದಾರೆ.

# ಪತಿರಾಯನ ಆಯುಷ್ಯ ವೃದ್ಧಿಸಲಿ: ಮುತ್ತೈದೆಯರಿಂದ ಪ್ರಾರ್ಥನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.10:ಪಟ್ಟಣದ ಹನುಮಾನ ಮಂದಿರದ ಮುಂಭಾಗದಲ್ಲಿರುವ ಆಲದ ಮರಕ್ಕೆ ವಟಸಾವಿತ್ರಿ ಪೂರ್ಣಿಮೆಯಂದು ಮುತ್ತೈದೆಯರು ಪತಿರಾಯನಿಗೆ ಭಗವಂತ ದೀರ್ಘಾಯುಷ್ಯ,ಸದೃಡ ಕಾಯ,ಆರೋಗ್ಯ ನೀಡಲಿ ಎಂದು ನವ ವಧುಗಳಿಂದ ವಯೋವೃದ್ಧದವರೆಗಿನ ಮಹಿಳೆಯರು ದಾರ ಸೂತ್ತಿ ಪ್ರಾರ್ಥನೆಗೈದರು.

ಭಾರತ ಆರ್ಥಿಕವಾಗಿ ಬಡ ರಾಷ್ಟ್ರವಾಗಿದ್ದರೂ ,ಅರ್ಥಬದ್ಧ ಸಂಪ್ರದಾಯ ಆಚರಣೆಯಲ್ಲಿ ಶ್ರೀಮಂತ ರಾಷ್ಟ್ರವಾಗಿದೆ. ಆಷಾಢ ಮಾಸದ ವಟ ಸಾವಿತ್ರಿ ಹುಣ್ಣಿಮೆಯಂದು ದೇಶದ ಕೆಲವು ರಾಜ್ಯಗಳಲ್ಲಿ ಆದಿಕಾಲದಿಂದಲೂ ನಡೆದು ಬಂದ ಸಂಪ್ರದಾಯ ಆಚರಣೆ ಮಾಡಲಾಗುತ್ತದೆ.

ಭಾರತ ಪುರಷ ಪ್ರಧಾನ ರಾಷ್ಟ್ರ ಎಂದು ಕರೆಯುವ ವಾಡಿಕೆಯಿದೆ. ಆದರೆ ಇಂದು ಮಹಿಳೆ ಎಲ್ಲ ಕ್ಷೇತ್ರದಲ್ಲಿ ಪುರುಷನಿಗೆ ಸಮನಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಪುರಷ ಪ್ರಧಾನ ಶಬ್ದ ಗೌಣವಾಗಿದೆ.

ಆದಾಗ್ಯು ನಗರ,ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿಯೊಂದು ಸಂಪ್ರದಾಯಕ್ಕೆ ತನ್ನದೆಯಾದ ಮೌಲ್ಯವಿದೆ.

ಇಂದಿಗೂ ಮುತ್ತೈದೆಯರು ಗಂಡನ ಆಯುಷ್ಯ ವೃದ್ಧಿಸಲಿ ಎಂದು ವಟ ಸಾವಿತ್ರಿ ಹುಣ್ಣಿಮೆಯಂದು ವಿವಿಧ ನಮೂನೆಯ ನೈವಿದ್ಯಯೊಂದಿಗೆ ಎಲ್ಲ ದೇವಸ್ಥಾನಗಳಲ್ಲಿ ಶೃದ್ಧೆ,ಭಕ್ತಿಯಿಂದ ಪೂಜೆ ಸಲ್ಲಿಸುತ್ತಾರೆ. ಇಂದು ಪ್ರತಿಯೊಬ್ಬ ಮಹಿಳೆ ಮುತ್ತೈದೆಯಾಗಿ ಸಾವು ಬಯಸುತ್ತಾಳೆ. ಅದರರ್ಥ ಪುರುಷ ಪ್ರಧಾನ ಸಮಾಜದಲ್ಲಿಯೂ ಪತ್ನಿ ಪತಿಗೆ ಎಲ್ಲಿಲ್ಲದ ಗೌರವ ನೀಡುತ್ತಾಳೆ.

ಜೋಡಿ ಬೇಕು :ನನಗ ಬಂಗಾರ,ಬೆಳ್ಳಿ,ಹೊಲ,ಮನೆ,ಆಸ್ತಿ-ಪಾಸ್ತಿ ಏನು ಬೇಡ.ನನ್ನ ಗಂಡ ನನ್ನ ಜನ್ಮಕಿದ್ದರ ಸಾಕು.ಪತಿಗೆ ಸಮಾನವಾದ ವಸ್ತು ಜಗತ್ತಿನಾಗ ಯಾವುದು ಇಲ್ಲ.ಪತಿಯಿಂದಲೇ ಪತ್ನಿಗೆ ಗೌರವ,ಮಾನ,ಮರ್ಯಾದೆ ಸಿಗುತ್ತದೆ ಎಂದು ಹೆಸರು ಹೇಳಲಿಚ್ಚಿಸದ ಆದರ್ಶ ಗೃಹಿಣಿಯೊಬ್ಬರು ಹೊರ ಹಾಕಿದ ಅಂತಕರಣದ ಮಾತುಗಳು. ಅದು ವಾಸ್ತವಿಕ ಅನಿಸುತ್ತದೆ. ಯಾಂತ್ರಿಕ,ತಾಂತ್ರಿಕ,ಕಂಪ್ಯೂಟರ ಯುಗದಲ್ಲಿ ಇನ್ನೂ ಅನೇಕ ಮಹಿಳೆಯರು ಕುಟುಂಬದ ಗೌರವ ಕಾಪಾಡುವವರಿದ್ದಾರೆ .ಅದರಿಂದ ಭಾರತ ಸಂಸ್ಕೃತಿಯಲ್ಲಿ ಶ್ರೀಮಂತ ರಾಷ್ಟ್ರ ಎಂಬುದು ವಿಶ್ವಕ್ಕೆ ತೋರಿಸಿ ಕೊಟ್ಟಿದೆ ಎನ್ನುತ್ತಾರೆ ಹಿರಿಯರು.

# ಬೀಜ ರಸಗೊಬ್ಬರ ಕೊರತೆ ಇರುವುದಿಲ್ಲ ಜಂಟಿ ಕೃಷಿ ನಿರ್ದೇಶಕ ಜಿಯಾ ಉಲ್ ಹಕ್

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂ.10 : ಜಿಲ್ಲೆಯಲ್ಲಿ ಬೀಜ ರಸಗೊಬ್ಬರ ಕೊರತೆ ಇರುವುದಿಲ್ಲವೆಂದು ಜಂಟಿ ಕೃಷಿ ನಿರ್ದೇಶಕರಾದ ಜಿಯಾ ಉಲ್ ಹಕ್ ಅವರು ತಿಳಿಸಿದ್ದಾರೆ.

ಈಗಾಗಲೇ ಮುಂಗಾರು ಬಿತ್ತನೆಗೆ ಬೀಜ, ರಸಗೊಬ್ಬರ ಮಾರಾಟ ಜೋರಾಗಿವುದರಿಂದ ಕೃಷಿ ಇಲಾಖೆ ಭರದಸಿದ್ಧತೆಯನ್ನ ಮಾಡಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಸೋಯಾ 2.25 ಸಾವಿರ ಹೆಕ್ಟರ್, ತೊಗರಿ 1.18 ಸಾವಿರ ಹೆಕ್ಟರ್, 20 ಸಾವಿರ ಹೆಕ್ಟರ್ ನಲ್ಲಿ ಉದ್ದು ಬಿತ್ತನೆಯಾಗಲಿದೆ. ಎಲ್ಲಾ 30 ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜಗಳ ಸಂಗ್ರಹಿಸಲಾಗಿದ್ದು ಅತಿ ಹೆಚ್ಚು ಸೊಯಾ ಬಿತ್ತನೆಗೆ ಗಡಿ ಜಿಲ್ಲೆಯಲ್ಲಿ ರೈತರು ಮುಂದಾಗಿದ್ದಾರೆಂದು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ 95 ಸಾವಿರ ಕ್ವಿಂಟಾಲ್ ಬೀಜಗಳ ಸಂಗ್ರಹ ಲಭ್ಯವಿರುತ್ತದೆ. 37 ಸಾವಿರ ಕ್ವಿಂಟಾಲ್ ವಿವಿಧ ರಸಗೊಬ್ಬರ ಬೇಡಿಕೆ ಇರುವುದರಿಂದ ಈಗಾಗಲೆ ಮೂರುವರೆ ಸಾವಿರ ಕ್ವಿಂಟಾಲ್ ಡಿಎಪಿ, ಯೂರಿಯಾ ಗೊಬ್ಬರದ ಸ್ಟಾಕ್ ಸಾಕಷ್ಟು ಪ್ರಮಾಣದಲ್ಲಿದ್ದು ಉಳಿದ ರಸಗೊಬ್ಬರ ಸಮಯಕ್ಕ ಸರಿಯಾಗಿ ಜಿಲ್ಲೆಗೆ ಬರಲಿದೆ.

ಜಿಲ್ಲೆಯಲ್ಲಿ ಮುಂಗಾರು ಮಳೆ ಸರಿಯಾದ ಸಮಯಕ್ಕೆ ಬೀಳುತ್ತಿರುವುದರಿಂದ ರೈತರು ಬಿತ್ತನೆಗೆ ಮುಂದಾಗಿದ್ದಾರೆಂದು ಅವರು ತಿಳಿಸಿದ್ದಾರೆ.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಭವಿಷ್ಯದ ಉಳಿವಿಗಾಗಿ ಪರಿಸರ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಹೇಳಿದರು.

ಪಟ್ಟಣದ ಸರಕಾರಿ ಕೈಗಾರಿಕಾ ತರಬೇತಿ ಕೇಂದ್ರದ ಆವರಣದಲ್ಲಿ ಅರಣ್ಯ ಇಲಾಖೆ ವತಿಯಿಂದ ಮಂಗಳವಾರ ಆಯೋಜಿಸಿದ್ದ ವನಮಹೋತ್ಸವ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಅರಣ್ಯಗಳ ಬೆಳವಣಿಗೆ, ಪರಿಸರ ಸಂರಕ್ಷಣೆ ಮತ್ತು ಮರಗಳನ್ನು ನೆಡುವ ಕುರಿತು ಜಾಗೃತಿ ಮೂಡಿಸಲು ವನ ಮಹೋತ್ಸವ ಕಾರ್ಯಕ್ರಮ ಹಬ್ಬದ ರೀತಿಯಲ್ಲಿ ಸಡಗರ ಸಂಭ್ರಮದಿಂದ ಆಚರಿಸಲಾಗಿತ್ತಿದೆ. ಹೀಗಾಗಿ ಎಲ್ಲರೂ ಜಾಗೃತರಾಗಿ ಪರಿಸರದ ಸಮತೋಲನ ಕಾಪಾಡಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಭೂಮಿಯ ಮೇಲೆ ಜೀವಿಸುತ್ತಿರುವ ಪ್ರತಿಯೊಂದು ಜೀವಿಗಳ ಆರೋಗ್ಯದ ಹಿತದೃಷ್ಟಿಯಿಂದ ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಹೆಚ್ಚಿನ ಗಿಡ ಮರಗಳು ನೆಡಬೇಕು. ಜತೆಗೆ ಇಂದಿನ ಯುವ ಪೀಳಿಗೆಯಲ್ಲಿ ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಲಯ ಅರಣ್ಯ ಅಧಿಕಾರಿ ಐಶ್ವರ್ಯ, ಸಾಮಾಜಿಕ ವಲಯ ಅರಣ್ಯಾಧಿಕಾರಿ ಉಮಾ, ಐಟಿಐ ಕೇಂದ್ರದ ಪ್ರಾಂಶುಪಾಲ ನಾಗಭೂಷಣ, ಪರಿಸರವಾದಿ ಶೈಲೇಂದ್ರ ಕಾವಡಿ ಸೇರಿ ಅನೇಕರಿದ್ದರು.

# 2047ರಲ್ಲಿ ವಿಕಸಿತ ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸುವ ಸಂಕಲ್ಪ. ಪ್ರಧಾನಿ ಮೋದಿಯವರದ್ದು: ಖೂಬಾ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 10 : 2047ರಲ್ಲಿ ಭಾರತವನ್ನು ವಿಶ್ವದ ಚೊಚ್ಚಲ ಶಕ್ತಿಶಾಲಿ ದೇಶವನ್ನಾಗಿಸುವುದರ ಜೊತೆಗೆ ವಿಕಸಿತ ಭಾರತ ಹಾಗೂ ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಪರಿವರ್ತಿಸುವುದೇ ಪ್ರಧಾನಿ ಮೋದಿಜಿಯವರ ದಿವ್ಯ ಸಂಕಲ್ಪವಾಗಿದೆ ಎಂದು ಕೇಂದ್ರ ಮಾಜಿ ಸಚಿವ ಭಗವಂತ ಖೂಬಾ ತಿಳಿಸಿದರು.

ಮಂಗಳವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಮೋದಿ ಸರ್ಕಾರ ಜಮ್ಮು ಕಾಶ್ಮೀರ 371 ತೆಗೆಯುವುದು ಆಗಲಿ, ಜಿಎಸ್‌ಟಿ ಆಗಲಿ ದೇಶದ ಆರ್ಥಿಕತೆ 2 ಟ್ರಿಲಿಯನ್ ಡಾಲರ್‌ನಿಂದ 4 ಟ್ರಿಲಿಯನ್ ಡಾಲರ್ ಏರಿಸಿದ ಕೀರ್ತಿ ಮೋದಿ ಸರ್ಕಾರಕ್ಕೆ. ಸಲ್ಲುತ್ತದೆ ಎಂದರು.

ಮುಂದಿನ ವರ್ಷವೇ ಭಾರತ ಅತೀ ವೇಗವಾಗಿ ಬೆಳೆಯುವ ಜಗತ್ತಿನ ಮೂರನೆ ಆರ್ಥಿಕತೆ ದೇಶವಾಗಲಿದೆ. 2014 ಕ್ಕು ಮೊದಲು ಈ ದೇಶ ಸುಧಾರಿಸಲು ಸಾಧ್ಯವಿಲ್ಲ ಅನ್ನೋವಷ್ಟು ಅಂದಿನ ನಾಯಕತ್ವವಾಗಿತ್ತು. ಸಬ್ ಕೇ ಸಾಥ್ ಸಬಕಾ ವಿಕಾಸ ಅನ್ನೋ ಮೂಲಮಂತ್ರದೊಂದಿಗೆ ಬಿಜೆಪಿ ಕೇಂದ್ರದ ಬಿಜೆಪಿ ಸರ್ಕಾರ ಕಾರ್ಯ ಮಾಡುತ್ತಿದೆ. ಕಾಂಗ್ರೆಸ್ ಸರ್ಕಾರದ ಗರಿಬ್ ಹಠಾವ್ ಯೋಜನೆ ಇಂದಿರಾಗಾಂಧಿ ಕಾಲದಿಂದಲು ಬರಿ ಘೋಷಣೆಗೆ ಮಾತ್ರಸಿಮೀತವಾಗಿತ್ತು. ಬಿಜೆಪಿ ಸರ್ಕಾರ ಬಂದ ಮೇಲೆ 11 ವರ್ಷಗಳಲ್ಲಿ ನಾಲ್ಕು ಕೋಟಿ ಪಕ್ಕಾ ಮನೆಗಳನ್ನು ನಿರ್ಮಿಸಿ ಬಡವರಿಗೆ ನೀಡಲಾಗಿದೆ. ಬಡವರ ಆರೋಗ್ಯಕ್ಕಾಗಿ ಜಾರಿಗೆ ತಂದ ಆಯುಷ್ಮಾನ್ ಭಾರತ ಯೋಜನೆ 75 ಕೋಟಿ ಜನರಿಗೆ ಲಾಭವಾಗುತ್ತಿದೆ. ಬಡ ಹೆಣ್ಣು ಮಕ್ಕಳಿಗಾಗಿ ಹತ್ತುವರೆ ಕೋಟಿ ಕುಟುಂಭಗಳಿಗೆ ಉಚಿತ ಗ್ಯಾಸ್ ನೀಡಲಾಗಿದೆ, ಜಲ್ ಜೀವನ ಮಿಷನ್ ಮುಖಾಂತರ 15 ಕೋಟಿ ಕುಟುಂಬಗಳಿಗೆ ಕುಡಿಯುವ ನೀರು ಪೊರೈಕೆ, ಮುದ್ರಾ ಯೋಜನೆ ಅಡಿಯಲ್ಲಿ 34 ಕೋಟಿಗೂ ಹೆಚ್ಚು ಜನರಿಗೆ ಲಾಭವಾಗಿದೆ. ಪ್ರತಿಶತ 15ರಷ್ಟು ಮಹಿಳಾ ಪೈಲೆಟ್‌ಗನ್ನು ತರಬೇತಿಗೊಳಿಸಲಾಗಿದೆ. ಮಹಿಳಾ ಅರಕ್ಷಣ ಬಿಲ್ 33 ಪ್ರತಿಶತ ರಿಜರ್ವೆಷನ್ ನೀಡುವ ಬಿಲ್ ತಂದಿದ್ದು ಮೋದಿ ಸರ್ಕಾರ ಎಂದವರು ಹೇಳಿದರು.

ಕೃಷಿ ಸನ್ಮಾನ ನಿಧಿಯಿಂದ 11 ಕೋಟಿ ರೈತರ ಖಾತೆಗೆ 3 ಲಕ್ಷ 34 ಸಾವಿರ ಕೋಟಿ ಹಣ ರೈತರ ಖಾತೆಗೆ ಜಮೆ ಮಾಡಲಾಗಿದೆ. ಬೆಳೆ ವಿಮೆ ಜಾರಿ, ಎಂಎಸ್ಪಿ ಜಾರಿ.. ಕೃಷಿ ಕ್ಷೇತ್ರದಲ್ಲಿ ಬೆಳೆ ಸಾಲ ಗೋದಾಮು ನಿರ್ಮಾಣ, ನೆನೆಗುದಿಗೆಬಿದ್ದಿದ್ದ ರಾಮ ಮಂದಿರ ನಿರ್ಮಾಣ, ,ಟ್ರಿಬಲ್ ತಲಾಕ್ ನಿಶೇಧ, ಸಿಎಎ ಜಾರಿ, ಒಂದು ದೇಶ ಒಂದು ತೆರಿಗೆ ಜಿಎಸ್ ಟಿ ಜಾರಿ, ರಕ್ಷಣಾ ಕ್ಷೇತ್ರದಲ್ಲಿ ಬಾರತ ಸ್ವಾವಲಂಬಿ ದೇಶವಾಗಿ ಮುನ್ನುಗ್ಗುತ್ತಿದ್ದು, ಸರ್ಜಿಕಲ್ ಸ್ಟೈಕ್, ಬಾಲಾಕೋಟ್ ಏರ್ ಸ್ಟ್ರೈಕ್, ಆಪರೇಷನ್ ಸಿಂಧೂರ್ ಮಾಡಿದ್ದು ನಮ್ಮ ದೇಶದ ಪ್ರಧಾನಿ ನರೇಂದ್ರ ಮೋದಿ ಎಂದು ಹೆಮ್ಮೆಯಿಂದ ಹೇಳಬಹುದಾಗಿದೆ.

ಅಮೇರಿಕಾದ ಸಮಸಮವಾಗಿ ರಸ್ತೆಗಳ ನಿರ್ಮಾಣವಾಗುತ್ತಿವೆ ಇನ್ನೆರಡು ವರ್ಷದಲ್ಲಿ ಅಮೇರಿಕಾಕ್ಕೆ ಸಮವಾಗಲಿವೆ. ಯು.ಪಿ.ಎ ಸರ್ಕಾರದ ಅವಧಿಯಲ್ಲಿ 75 ವಿಮಾನ ನಿಲ್ದಾಣ ಇದ್ದುದು ಈಗ 162 ವಿಮಾನ ನಿಲ್ದಾಣಗಳು ಕಾರ್ಯ ನಿರ್ವಹಿಸುತ್ತಿವೆ. ದೇಶದಲ್ಲಿ ನಕ್ಸಲಿಸಂ ಕೊನೆ ಘಟ್ಟದಲ್ಲಿದೆ ಎಂದು ಖೂಬಾ ತಿಳಿಸಿದರು. ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಪಕ್ಷದ ರಾಜ್ಯ ಕಾರ್ಯದರ್ಶಿಗಳು ಹಾಗೂ ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ವಿಧಾನ ಪರಿಷತ್ ಸದಸ್ಯ ಎಂ.ಜಿ ಮುಳೆ, ಮಾಜಿ ವಿಧಾನ ಪರಿಷತ್ ಸದಸ್ಯ ಅಮರನಾಥ ಪಾಟೀಲ, ಮಾಜಿ ಬೂಡಾ ಅಧ್ಯಕ್ಷ ಬಾಬು ವಾಲಿ, ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಮಾಧವ ಹಸುರೆ, ಮುಖಂಡರಾದ ಜಗನ್ನಾಥ ಸಿರ್ಕಟನಳ್ಳಿ ಹಾಗೂ ಇತರರು ಪತ್ರಿಕಾಗೋಷ್ಟಿಯಲ್ಲಿದ್ದರು.

# ಮೋದಿ ಸರ್ಕಾರದ 11 ವರ್ಷದ ಸಾಧನೆ ಸುವರ್ಣಾಕ್ಷರದಲ್ಲಿ ಬರೆಯುವಂಥದ್ದು : ಬಿ.ಶ್ರೀರಾಮುಲು



ಬಳ್ಳಾರಿ:ಪ್ರಧಾನಿ ನರೇಂದ್ರ ಮೋದಿಯವರ 11 ವರ್ಷಗಳ ಅಧಿಕಾರಾವಧಿ ಯಶಸ್ವಿಯಾಗಿ ಪೂರೈಸಿದ್ದು, ಮೋದಿ ನಾಯಕತ್ವದಲ್ಲಿ ಸರ್ಕಾರ ಮಾಡಿದ ಕೆಲಸಗಳನ್ನು 'ಸುವರ್ಣಾಕ್ಷರಗಳಲ್ಲಿ ಬರೆದಿಡುವಂಥದ್ದಾಗಿದೆ. ಬಲಿಷ್ಠ ರಾಷ್ಟ್ರದ ನಿರ್ಮಾಣ, ಸಶಕ್ತ ಭಾರತ ನಿರ್ಮಾಣದಲ್ಲಿ ಮೋದಿಯವರ ಪಾತ್ರ ಪ್ರಮುಖವಾಗಿದೆ ಎಂದು ಬಿಜೆಪಿಯ ಹಿರಿಯ ಧುರೀಣ, ಮಾಜಿ ಶ್ರೀರಾಮುಲು ಹೇಳಿದರು.

ಇಲ್ಲಿನ ಸಂಗನಕಲ್ಲು ರಸ್ತೆಯ ವಾಜಪೇಯಿ ಬಡಾವಣೆಯಲ್ಲಿರುವ ಭಾರತೀಯ ಜನತಾ ಪಾರ್ಟಿ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರು ದೇಶದ ರಾಜಕೀಯ ಸಂಸ್ಕೃತಿಯನ್ನು ಬದಲಾಯಿಸಿದರು. ಜವಾಬ್ದಾರಿಯುತ ಸರ್ಕಾರವನ್ನು ಒದಗಿಸುವ ಮೂಲಕ ಉತ್ತಮ ಆಡಳಿತದ ರಾಜಕೀಯವನ್ನು ಪ್ರಾರಂಭಿಸಿವರು. ಕಾಂಗ್ರೆಸ್ ನೇತೃತ್ವದ ಹಿಂದಿನ ಯುಪಿಎ ಸರ್ಕಾರ 'ಭ್ರಷ್ಟಾಚಾರ, ಹಗರಣಗಳು ಮತ್ತು ಸಮಾಧಾನ'ದ ರಾಜಕೀಯ-ಕ್ಕೆ ಹೆಸರುವಾಸಿಯಾಗಿತ್ತು ಎಂದು ಶ್ರೀರಾಮುಲು ಹೇಳಿದರು. ಪ್ರಧಾನಿ ಮೋದಿಯವರು ಜವಾಬ್ದಾರಿಯುತ ಮತ್ತು ಬಲಿಷ್ಠ ಸರ್ಕಾರವನ್ನು ಒದಗಿಸಿದ್ದಾರೆ. ಮೋದಿ ಸರ್ಕಾರ ತೆಗೆದುಕೊಂಡ ದಿಟ್ಟ ನಿರ್ಧಾರಗಳಲ್ಲಿ 370ನೇ ವಿಧಿ ರದ್ದತಿ, ತ್ರಿವಳಿ ತಲಾಖ್ ರದ್ದತಿ, ವಕ್ಫ್ ತಿದ್ದುಪಡಿ, ನೋಟು ರದ್ದತಿ, ಮಹಿಳಾ ಮೀಸಲಾತಿ ಮಸೂದೆ ಸೇರಿವೆ ಎಂದು ಶ್ರೀರಾಮುಲು ಉಲ್ಲೇಖಿಸಿದರು. ಪ್ರಧಾನಿ ಮೋದಿ ಜೂನ್ 9, 2024 ರಂದು ನಿನ್ನೆಯ ದಿನ ಮೂರನೇ ಅವಧಿಗೆ ಪ್ರಮಾಣವಚನ ಸ್ವೀಕರಿಸಿದರು. ಮೋದಿ ಸರ್ಕಾರವು ತನ್ನ ಮೂರನೇ ಅವಧಿಯ ಮೊದಲ ವಾರ್ಷಿಕೋತ್ಸವ ಮತ್ತು ನಿನ್ನೆ ಒಟ್ಟಾರೆಯಾಗಿ 11ನೇ ವಾರ್ಷಿಕೋತ್ಸವವನ್ನು ಆಚರಿಸಿದೆ.

ನರೇಂದ್ರ ಮೋದಿಯವರು ಪ್ರಧಾನಿಯಾಗಿ ಮೂರನೇ ಅವಧಿಯಲ್ಲಿ, ಈ ನವ ಭಾರತವು ಸುಧಾರಣೆ, ಕಾರ್ಯಕ್ಷಮತೆ ಮತ್ತು ಪರಿವರ್ತನೆಯ ಶಕ್ತಿಯೊಂದಿಗೆ ಅಭಿವೃದ್ಧಿ ಮತ್ತು ಸ್ವಾವಲಂಬನೆಯತ್ತ ವೇಗವಾಗಿ ಮುನ್ನಡೆಯುತ್ತಿದೆ ಎಂದ ಅವರು ನಾಯಕತ್ವ ಸ್ಪಷ್ಟವಾಗಿದ್ದರೆ, ಸಂಕಲ್ಪ ದೃಢವಾಗಿದ್ದರೆ ಮತ್ತು ಸಾರ್ವಜನಿಕ ಸೇವೆಯ ಉದ್ದೇಶವಿದ್ದರೆ, ಸೇವೆ, ಭದ್ರತೆ ಮತ್ತು ಉತ್ತಮ ಆಡಳಿತದ ಹೊಸ ದಾಖಲೆಗಳು ಸೃಷ್ಟಿಯಾಗುತ್ತವೆ ಎಂಬುದನ್ನು ಮೋದಿ ಸರ್ಕಾರ ಸಾಬೀತುಪಡಿಸಿದೆ" ಎಂದರು. 2014 ರಲ್ಲಿ ಪ್ರಧಾನಿ ಮೋದಿ ದೇಶದ ಅಧಿಕಾರ ವಹಿಸಿಕೊಂಡಾಗ, ದೇಶದಲ್ಲಿ ನೀತಿ ಪಾರ್ಶ್ವವಾಯು ಇತ್ತು. ಸರ್ಕಾರದಲ್ಲಿ ಯಾವುದೇ ನೀತಿಗಳಿಲ್ಲ, ನಾಯಕತ್ವವಿಲ್ಲ ಮತ್ತು ಹಗರಣಗಳು ಉತ್ತುಂಗದಲ್ಲಿದ್ದವು, ಆರ್ಥಿಕತೆಯು ಅಸ್ತವ್ಯಸ್ತವಾಗಿತ್ತು ಮತ್ತು ಆಡಳಿತ ವ್ಯವಸ್ಥೆಯು ದಿಕ್ಕಿಲ್ಲದಂತಿತ್ತು. ಸುದೀರ್ಘ 11 ವರ್ಷಗಳ ಸೇವೆಯ ಸಮಯದಲ್ಲಿ, 'ಕನಿಷ್ಠ ಸರ್ಕಾರ, ಗರಿಷ್ಠ ಆಡಳಿತ' ದಿಂದ ದೇಶದ ಅಭಿವೃದ್ಧಿಯ ವೇಗ ಮತ್ತು ಪ್ರಮಾಣವು ಬದಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ರೈತರು, ಮಹಿಳೆಯರು, ಹಿಂದುಳಿದವರು, ದಲಿತರು ಮತ್ತು ಅಂಚಿನಲ್ಲಿರುವವರನ್ನು ಆಡಳಿತದ ಕೇಂದ್ರಕ್ಕೆ ಕರೆತಂದರು ಮತ್ತು ಸಮಾಧಾನಗೊಳಿಸುವ ಬದಲು ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್ ಮತ್ತು ಸಬ್ಕಾ ಪ್ರಾಯಸ್ ಎಂಬ ಕೆಲಸದ ಸಂಸ್ಕೃತಿಯನ್ನು ಸೃಷ್ಟಿಸಿದರು ಎಂದು ಅವರು ಹೇಳಿದರು. ಮೋದಿ ಸರ್ಕಾರದ 11 ವರ್ಷಗಳು ರಾಷ್ಟ್ರೀಯ ಭದ್ರತೆಯ ದಿಕ್ಕಿನಲ್ಲಿ ಒಂದು ಮೈಲಿಗಲ್ಲು ಎಂದು ಸಾಬೀತಾಗಿದೆ. ಇನ್ನು ದೇಶದಲ್ಲಿ ನಕ್ಸಲಿಸಂ ಕೊನೆಯ ಹಂತದಲ್ಲಿದೆ. ಜಮ್ಮು-ಕಾಶ್ಮೀರ ಮತ್ತು ಈಶಾನ್ಯದಲ್ಲಿ ಶಾಂತಿ ನೆಲೆಸಿದೆ, ಭಾರತ ಈಗ ಭಯೋತ್ಪಾದಕರ ಮನೆಗಳಿಗೆ ನುಗ್ಗುವ ಮೂಲಕ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯಿಸುತ್ತಿದೆ. ಇದು ಮೋದಿ ಸರ್ಕಾರದ ಅಡಿಯಲ್ಲಿ ಭಾರತದ ಬದಲಾಗುತ್ತಿರುವ ಚಿತ್ರಣವನ್ನು ತೋರಿಸುತ್ತದೆ ಎಂದು ಶ್ರೀರಾಮುಲು ಹೇಳಿದರು. ಈ ಸಂಧರ್ಭದಲ್ಲಿ ಬಿಜೆಪಿ ರೈತ ಮೋರ್ಚಾದ ರಾಜ್ಯ ಉಪಾಧ್ಯಕ್ಷ ಎಸ್.ಗುರುಲಿಂಗನಗೌಡ, ಮಾಜಿ ಶಾಸಕರಾದ ಜಿ.ಸೋಮಶೇಖರ್ ರೆಡ್ಡಿ, ಎಂ.ಎಸ್.ಸೋಮಲಿಂಗಪ್ಪ, ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ನಿಗಮ ಮಂಡಳಿಗಳ ಮಾಜಿ ಅಧ್ಯಕ್ಷರಾದ ಗುತ್ತಿಗನೂರು ವಿರುಪಾಕ್ಷಗೌಡ, ಹೆಚ್.ಹನುಮಂತಪ್ಪ, ಬಿಜೆಪಿ ರಾಜ್ಯ ಕಾರ್ಯದರ್ಶಿ ಕೆ.ಎಸ್.ದಿವಾಕರ್, ಮುಖಂಡರಾದ ವೀರಶೇಖರ್ ರೆಡ್ಡಿ, ಗಣಪಲ ಐನಾಥರೆಡ್ಡಿ, ಡಾ.ಮಹಿಪಾಲ್, ಪಾರ್ವತಿ ಇಂದು ಶೇಖರ್, ಉಜ್ವಲ ಶ್ರೀಧರ, ಸಾಧನಾ ಹೀರೆಮಠ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.